**ಸಂಪುಟ:** 05 **ಸಂಚಿಕೆ:** 34 **ಪುಟಗಳು:** 08 **ಶುಕ್ರವಾರ** 18 **ಎಪ್ರಿಲ್** 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833 ₹5

# ಉದಯ ವಾಹಿನಿ

UV
ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನೀವು ನಿದ್ದೆ ಮಾಡುವಾಗ ನೋಡುವುದು ಕನಸು ಅಲ್ಲ, ಅದು ನಿಮ್ಮನ್ನು ನಿದ್ದೆ ಮಾಡಲು ಬಿಡುವುದಿಲ್ಲ.

## ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆಯಲ್ಲಿ ಭಾಗಿಯಾಗಲು ಅನುಮತಿ

• **ಉದಯವಾಹಿನಿ, ಬೆಂಗಳೂರು**



ರಾಮನಗರ ಜಿಲ್ಲೆ ಬಿಡದಿ ಕೇತಗಾನಹಳ್ಳಿ ವ್ಯಾಪ್ತಿಯಲ್ಲಿ 14 ಎಕರೆ ಸರಕಾರಿ ಜಮೀನು ಒತ್ತುವರಿ ಮಾಡಿದ ಆರೋಪ ಪ್ರಕರಣದ ಸಂಬಂಧ ಹೂಡಿರುವ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆಯಲ್ಲಿ ಭಾಗವಹಿಸಲು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿಗೆ ಹೈಕೋರ್ಟ್ ಅನುಮತಿ ನೀಡಿದೆ.

ಎಚ್‌ಡಿ ಕುಮಾರಸ್ವಾಮಿ ಹಾಗೂ ಅವರ ಸಂಬಂಧಿ ಮಾಜಿ ಶಾಸಕ ಡಿ.ಸಿ. ತಮ್ಮಣ್ಣ ಮತ್ತಿತರರ ವಿರುದ್ಧದ ಭೂ ಕಬಳಿಕೆ ಆರೋಪ ಸಂಬಂಧ ಲೋಕಾಯುಕ್ತ ನೀಡಿರುವ ಆದೇಶ ಜಾರಿಗೊಳಿಸುವಲ್ಲಿ ಸರಕಾರ ವಿಫಲವಾಗಿದೆ ಎಂದು ಆಕ್ಷೇಪಿಸಿ ಸಮಾಜ ಪರಿವರ್ತನಾ ಸಮುದಾಯದ ಎಸ್ ಆರ್ ಹಿರೇಮಠ ಸಲ್ಲಿಸಿರುವ ಸಿವಿಲ್ ನ್ಯಾಯಾಂಗ ನಿಂದನೆ ಅರ್ಜಿಯು ನ್ಯಾಯಮೂರ್ತಿ ಕೆ ಸೋಮಶೇಖರ್ ನೇತೃತ್ವದ ವಿಭಾಗೀಯ ಪೀಠದ ಮುಂದೆ ಗುರುವಾರ ವಿಚಾರಣೆಗೆ ಬಂದಿತು. ಆಗ ಎಚ್‌ಡಿ ಕುಮಾರಸ್ವಾಮಿ ಪರ ಹಾಜರಾದ ಹಿರಿಯ ನ್ಯಾಯವಾದಿ ಉದಯ್ ಹೊಳ್ಳ, ಈ ನ್ಯಾಯಾಂಗ ನಿಂದನೆ ಅರ್ಜಿಯಲ್ಲಿ ಎಚ್‌ಡಿ ಕುಮಾರಸ್ವಾಮಿ ವಾದ ಪರಿಗಣಿಸಬೇಕೆಂದು ಸುಪ್ರೀಂ ಕೋರ್ಟ್ ಸೂಚನೆ ನೀಡಿತ್ತು. ಅದರಂತೆ ನ್ಯಾಯಾಂಗ ನಿಂದನೆ ಅರ್ಜಿಯಲ್ಲಿಪ್ರತಿವಾದಿ ಆರೋಪಿಯನ್ನಾಗಿ ಎಚ್‌ಡಿಕೆ ಅವರನ್ನು ಸೇರ್ಪಡೆ ಮಾಡಲು ಅವಕಾಶ ನೀಡಬೇಕು ಎಂದು ಕೋರಿದರು.

**ವಿಚಾರಣೆ ಜೂನ್ 10 ಕ್ಕೆ ಮುಂದೂಡಿಕೆ :** ಅವರ ವಾದ ಮಾನ್ಯ ಮಾಡಿದ ನ್ಯಾಯಾಲಯ, ನ್ಯಾಯಾಂಗ ನಿಂದನೆ ಅರ್ಜಿಯಲ್ಲಿ ಸೂಕ್ತ ತಿದ್ದುಪಡಿ ಮಾಡುವಂತೆ ಅರ್ಜಿದಾರರಾದ ಸಮಾಜ ಪರಿವರ್ತನಾ ಸಮುದಾಯ ಪರ ವಕೀಲರಿಗೆ ಸೂಚನೆ ನೀಡಿ ವಿಚಾರಣೆಯನ್ನು ಜೂನ್ 10 ಕ್ಕೆ ಮುಂದೂಡಿತು.

**14 ಎಕರೆ ಸರಕಾರಿ ಜಮೀನು ಒತ್ತುವರಿ**

**ಹೈಕೋರ್ಟ್ ಆದೇಶ:** ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಮತ್ತು ಅವರ ಸಂಬಂಧಿ ಡಿಸಿ ತಮ್ಮಣ್ಣ ಮತ್ತಿತರರು ಕೇತಗಾನಹಳ್ಳಿಯಲ್ಲಿ 14 ಎಕರೆ ಭೂಮಿ ಒತ್ತುವರಿ ಮಾಡಿದ್ದಾರೆಂಬ ಆರೋಪವಿದೆ.

ಈ ಸಂಬಂಧ ಲೋಕಾಯುಕ್ತ ನೀಡಿದ್ದ ವರದಿ ಜಾರಿಗೊಳಿಸಲು ಹೈಕೋರ್ಟ್ ಆದೇಶ ನೀಡಿದ್ದರೂ ಅದನ್ನು ಪಾಲನೆ ಮಾಡಿಲ್ಲ ಎಂದು ಆಕ್ಷೇಪಿಸಿ ಸಮಾಜ ಪರಿವರ್ತನಾ ಸಮುದಾಯದ ಎಸ್ ಆರ್ ಹಿರೇಮಠ್ ದಾಖಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿ ಪರಿಶೀಲಿಸಿದ ಹೈಕೋರ್ಟ್ ವಿಭಾಗೀಯ ಪೀಠ, ಭೂಮಿ ಒತ್ತುವರಿ ತೆರವಿಗೆ ಕ್ರಮ ಕೈಗೊಳ್ಳದ ಅಧಿಕಾರಿಗಳನ್ನು ಜೈಲಿಗೆ ಕಳುಹಿಸುವುದಾಗಿ ಎಚ್ಚರಿಕೆ ನೀಡಿತ್ತು.

ಆನಂತರ ಜಮೀನಿನ ಸರ್ವೆ ಕಾರ್ಯ ನಡೆಸಿದ ಸ್ಥಳೀಯ ತಹಶೀಲ್ದಾರ್, ಎಚ್ ಡಿ ಕುಮಾರಸ್ವಾಮಿ ಮತ್ತಿತರರಿಗೆ ನೋಟಿಸ್ ಜಾರಿಗೊಳಿಸಿದ್ದಾರೆ. ಅದನ್ನು ಪ್ರಶ್ನಿಸಿ ಅವರು ಕೋರ್ಟ್ ಮೆಟ್ಟಿಲೇರಿದ್ದಾರೆ.

## ವಕ್ಫ್ ತಿದ್ದುಪಡಿ ಕಾಯ್ದೆ ಜಾರಿ ಮೋದಿಗೆ ಮುಸ್ಲಿಮರ ಧನ್ಯವಾದ

• **ಉದಯವಾಹಿನಿ, ನವದೆಹಲಿ**



ದಾವೂದಿ ಬೊಹ್ರಾ ಸಮುದಾಯದ ನಿಯೋಗವು ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿ ಮಾಡಿ, ವಕ್ಫ್ ತಿದ್ದುಪಡಿ ಕಾಯ್ದೆ ಜಾರಿ ಮಾಡಿದ್ದಾಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ. ಇದು ನಮ್ಮ ಸಮುದಾಯದ ಬಹುಕಾಲದ ಬೇಡಿಕೆಯಾಗಿತ್ತು. ಪ್ರಧಾನ ಮೋದಿಯವರ 'ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್' ಎಂಬ ದೃಷ್ಟಿಕೋನದಲ್ಲಿ ನಾವು ನಂಬಿಕೆ ಇಟ್ಟಿದ್ದೇವೆ ಎಂದು ಹೇಳಿದರು. ದಾವೂದಿ ಬೊಹ್ರಾಗಳು ಪ್ರಾಥಮಿಕವಾಗಿ ಪಶ್ಚಿಮ ಭಾರತದ ಮುಸ್ಲಿಂ ಸಮುದಾಯವಾಗಿದ್ದು, ಈ ಸಮುದಾಯದ ಜನರು ಪ್ರಪಂಚದಾದ್ಯಂತ 40ಕ್ಕೂ ಹೆಚ್ಚು ದೇಶಗಳಲ್ಲಿ ನೆಲೆಸಿದ್ದಾರೆ. ಇದು ಈಜಿಪ್ಟ್‌ನಲ್ಲಿರುವ ಪ್ರವಾದಿ ಮುಹಮ್ಮದ್ ಅವರ ನೇರ ವಂಶಸ್ಥರಾದ ಫಾತಿಮಿಡ್ ಇಮಾಮ್‌ಗಳ ಪರಂಪರೆಯನ್ನು ಗುರುತಿಸುತ್ತದೆ. ಪ್ರಪಂಚದಾದ್ಯಂತದ ಇರುವ ಈ ಸಮುದಾಯದವರು ಅವರ ನಾಯಕ ಅಲ್-ದೈ ಅಲ್-ಮುತ್ಲಕ್‌ನಿಂದ ಮಾರ್ಗದರ್ಶನ ಪಡೆಯುತ್ತಿದ್ದಾರೆ.

## ಮೈಸೂರಲ್ಲಿ ಮತ್ತೆ ರಸ್ತೆ ವಿಸ್ತರಣೆಗೆ 25 ಮರಗಳ ಬಲಿಗೆ ಸಿದ್ಧತೆ!

• **ಉದಯವಾಹಿನಿ, ಮೈಸೂರು**

ರಸ್ತೆ ವಿಸ್ತರಣೆ ನೆಪದಲ್ಲಿ 40 ಮರಗಳನ್ನು ನಿರ್ದಾಕ್ಷಿಣ್ಯವಾಗಿ ಕಡಿದ ಬೆನ್ನಲ್ಲೇ ಇದೀಗ ಉತ್ತನಹಳ್ಳಿ ದೇವಸ್ಥಾನ ರಸ್ತೆ ಮಾರ್ಗ ವಿಸ್ತರಣೆಗಾಗಿ 25 ಮರಗಳನ್ನು ಕಡಿಯಲು ಅನುಮತಿ ನೀಡುವಂತೆ ಲೋಕೋಪಯೋಗಿ ಇಲಾಖೆ ಅರಣ್ಯ ಇಲಾಖೆಗೆ ಪತ್ರ ಬರೆದಿದೆ. ಸಿಎಂ ತವರು ವರುಣ ಕ್ಷೇತ್ರಕ್ಕೆ ಸೇರಿದ ಉತ್ತನಹಳ್ಳಿ ಮೈಸೂರಿನ ಪ್ರಮುಖ ಧಾರ್ಮಿಕ ಕ್ಷೇತ್ರ. ನಿತ್ಯ ಸಾವಿರಾರು ಭಕ್ತರು ಈ ದೇವಸ್ಥಾನಕ್ಕೆ ಭೇಟಿ ನೀಡುತ್ತಾರೆ. ಇಲ್ಲಿನ ರಸ್ತೆಯನ್ನು ವಿಸ್ತರಣೆ ಮಾಡುವ ಕಾಮಗಾರಿಗೆ ಟೆಂಡರ್ ಆಗಿದ್ದು, ಗುತ್ತಿಗೆದಾರ ಕೆಲಸವನ್ನೂ ಶುರು ಮಾಡಿದ್ದಾರೆ. ಸುಮಾರು 5.5 ಮೀಟರ್ ಇರುವ ರಸ್ತೆಯನ್ನು 14.5 ಮೀಟರ್ ಜೋಡಿ ರಸ್ತೆ ಮಾಡಲು ಲೋಕೋಪಯೋಗಿ ಇಲಾಖೆ ಉದ್ದೇಶಿಸಿದೆ. ಇದಕ್ಕಾಗಿ ಕಳೆದ 50 ವರ್ಷಗಳಿಂದ ಸಾರ್ವಜನಿಕರಿಗೆ ನೆರಳು, ಗಾಳಿ ನೀಡಿ, ಪಕ್ಷಿಗಳಿಗೆ ಆಶ್ರಯತಾಣವಾಗಿದ್ದ ಮರಗಳನ್ನು ಕಡಿಯಲು ಇಲಾಖೆ ಮುಂದಾಗಿದೆ. 70 ವರ್ಷ ತುಂಬಿರುವ ಅರಳಿ ಮತ್ತು ಆಲದ ಮರಗಳೂ ಇದ್ದು, ಇವುಗಳಿಗೆ ಕೊಡಲಿ ಪೆಟ್ಟು ಬೀಳುತ್ತಿರುವುದು ಸಾರ್ವಜನಿಕ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ಮರಗಳನ್ನು ಉಳಿಸಿಕೊಂಡೇ ರಸ್ತೆ ವಿಸ್ತರಣೆ ಮಾಡಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಪರಿಸರ ಪ್ರೇಮಿಗಳು ಎಚ್ಚರಿಸಿದ್ದಾರೆ.

## ಬಿಎಂಟಿಸಿಯನ್ನು ಅಡ್ಡಗಟ್ಟಿದ ಗಜಪಡೆ ಪ್ರಯಾಣಿಕರು ಶಾಕ್

• **ಉದಯವಾಹಿನಿ, ಮೈಸೂರು**

ಬಿಎಂಟಿಸಿ ಬಸ್ ಅನ್ನು ಸಾಕಾನೆಗಳ ಹಿಂಡು ಅಡ್ಡಗಟ್ಟಿದೆ. ಗಜಪಡೆಯನ್ನು ನೋಡಿದ ಬಸ್‌ನಲ್ಲಿದ್ದ ಪ್ರಯಾಣಿಕರು ಒಂದು ಕ್ಷಣ ಶಾಕ್‌ಗೆ ಒಳಗಾಗಿದ್ದಾರೆ. ಅದೃಷ್ಟವಶಾತ್ ಯಾರಿಗೆ ಏನೂ ಮಾಡದೇ ಗಜಪಡೆ ಅರಣ್ಯದೊಳಗೆ ನುಗ್ಗಿವೆ.

ಬನ್ನೇರುಘಟ್ಟ ಜೈವಿಕ ಉದ್ಯಾನವನದ ಸಾಕಾನೆಗಳ ಹಿಂಡು ಬೆಂಗಳೂರು ಹೊರವಲಯದ ಮುಖ್ಯರಸ್ತೆಗೆ ಲಗ್ಗೆಯಿಟ್ಟಿವೆ. ಪಾರ್ಕಿನ ಸಾಕಾನೆಗಳನ್ನ ಮೇಯಲು ಬಿಡಲಾಗಿತ್ತು. ಈ ವೇಳೆ ಕಾಡಂಚಿನ ಗ್ರಾಮಕ್ಕೆ ಬಂದು ಆತಂಕ ಸೃಷ್ಟಿಸಿತ್ತು. ಬೆಳಗ್ಗೆ 8 ಗಂಟೆ ಸುಮಾರಿಗೆ ಕಗ್ಗಲಿಪುರ ಸಮೀಪದ ಗುಲ್ಲಹಟ್ಟಿ ಕಾವಲ್ ಗ್ರಾಮದ ಮುಖ್ಯ ರಸ್ತೆಯಲ್ಲಿ ಬಿಎಂಟಿಸಿ ಬಸ್‌ಗೆ ಆನೆಗಳು ಅಡ್ಡ ಬಂದಿವೆ. ಇದನ್ನು ನೋಡಿದ ಬಸ್ ಚಾಲಕ, ಬಸ್ ನಿಲ್ಲಿಸಿದ್ದು, ಪ್ರಯಾಣಿಕರು ಒಂದು ಕ್ಷಣ ಗಾಬರಿಗೆ ಒಳಗಾದರು. ಕೆಆರ್ ಮಾರ್ಕೆಟ್‌ನಿಂದ ಗುಳ್ಳಹಟ್ಟಿ ಕಾವಲ್‌ಗೆ ಬಸ್ ಹೊರಟಿತ್ತು. ಗುಲ್ಲಹಟ್ಟಿ ಗ್ರಾಮದ ಮುಖ್ಯರಸ್ತೆಯಲ್ಲಿ ಈ ಕಾಡಾನೆಗಳ ದಂಡು ಎಂಟ್ರಿಯಾಗಿತ್ತು. ಗ್ರಾಮದವರು ಕೂಡಲೇ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ತಿಳಿಸಿದ್ದರು. ಸ್ಥಳಕ್ಕೆ ಧಾವಿಸಿದ ಅರಣ್ಯ ಸಿಬ್ಬಂದಿ ಎಂಟು ಸಾಕಾನೆಗಳನ್ನು ಬನ್ನೇರುಘಟ್ಟ ಅರಣ್ಯಕ್ಕೆ ಓಡಿಸಿದರು.

**2015ರಲ್ಲಿ ನಡೆಸಿದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಆಧಾರಿತ ಜಾತಿ ಗಣತಿ ವರದಿ ಜಾರಿ ವಿಚಾರದಲ್ಲಿ ಸದ್ಯಕ್ಕೆ ಸಾಕಷ್ಟು ಚರ್ಚೆಯಾಗುತ್ತಿದ್ದು , ತಾರ್ಕಿಕ ಅಂತ್ಯ ಕಾಣದಾಗಿದೆ. ಇದೀಗ ವಿಧಾನಸೌಧದಲ್ಲಿ ನಡೆದ ಮಹತ್ವದ ಸಂಪುಟಸಭೆಯಲ್ಲಿ ಜಾತಿಗಣತಿ ವರದಿ ಜಾರಿಗೆ ಸಚಿವರ ತೀವ್ರ ಪ್ರತಿರೋಧ ಹಿನ್ನೆಲೆ, ಯಾವುದೇ ನಿರ್ಧಾರ ಕೈಗೊಳ್ಳಲು ಸಾಧ್ಯವಾಗಲಿಲ್ಲ. ಮುಂದಿನ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ಕೈಕೊಳ್ಳಬಹುದು ಎಂದು ಹೇಳಲಾಗಿದೆ.**

# ಸಿಎಂ ಸಭೆ ವಿಫಲ ಜಾತಿಗಣತಿ ಕೋಲಾಹಲ






- ಜಾತಿಗಣತಿ ವರದಿ ವಿರುದ್ಧ ಸಂಪುಟದಲ್ಲಿ ಕೋಲಾಹಲ
- ಯಾವುದೇ ನಿರ್ಣಯ ತೆಗೆದುಕೊಳ್ಳದ ಸಚಿವ ಸಂಪುಟ
- ಜಾತಿಗಣತಿ ವರದಿ ಚರ್ಚೆಯಾಗಲಿ: ದೋಷವಿದ್ದರೆ ಸರಿಪಡಿಸಿ: ವಾಟಾಳ್ ನಾಗರಾಜ್
- CM ಕುರ್ಚಿ ಅಲುಗಾಡಲು ಶುರುವಾದಾಗ ಜಾತಿಗಣತಿ ಜಾರಿ
- ವಿಚಾರ ಮುನ್ನಲೆಗೆ: ವಿಜಯೇಂದ್ರ

• **ಉದಯವಾಹಿನಿ, ಬೆಂಗಳೂರು**

ಸಭೆಯಲ್ಲಿ ಒಕ್ಕಲಿಗ ಹಾಗೂ ಲಿಂಗಾಯತ ಸಚಿವರು ಜಾರಿ ಬಗ್ಗೆ ತೀವ್ರ ಪ್ರತಿರೋಧ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದ್ದು, 2ಗಂಟೆಗಳ ಕಾಲ ನಡೆದ ಸಭೆಯಲ್ಲಿ ಯಾವುದೇ ನಿರ್ಧಾರಕ್ಕೆ ಬಾರದೆ ಸಭೆ ವಿಫಲವಾಗಿದೆ. ಅಲ್ಲದೆ, ಎಲ್ಲಾರ ಅಭಿಪ್ರಾಯಗಳನ್ನು ಬರವಣಿಗೆ(ಲಿಖಿತ) ರೂಪದಲ್ಲಿ ನೀಡುವಂತೆ ಸಿಎಂ ಸಿದ್ದರಾಮಯ್ಯ ಸಚಿವರಿಗೆ ಸಲಹೆ ನೀಡಿದ್ದಾರೆ. ಜಾತಿ ಜನಗಣತಿ ವರದಿ ಸೋರಿಕೆಯಲ್ಲ. ಅಧಿಕೃತ ವರದಿಯಲ್ಲಿರುವ ದತ್ತಾಂಶಗಳು ಮಾಧ್ಯಮಗಳಲ್ಲಿ ಪ್ರಕಟವಾಗಿವೆ. ಮೆ.2ರಂದು ವಿಶೇಷ ಕ್ಯಾಬಿನೆಟ್ ಸಭೆ ನಡೆಯಲಿದೆ ಎಂದು ಬಳಿಕ ಎಚ್ .ಕೆ.ಪಾಟೀಲ್ ಹೇಳಿದ್ದಾರೆ.

| | |
|---|---|
| 1 | ಜಾತಿ ಗಣತಿ ವರದಿ ಕುರಿತಂತೆ ಸಚಿವ ಸಂಪುಟ ಸಭೆಯಲ್ಲಿ ಯಾವುದೇ ಮಹತ್ವದ ನಿರ್ಧಾರ ಕೈಗೊಳ್ಳಲಾಗಿಲ್ಲ. |
| 2 | ಹಲವು ಸಚಿವರಿಂದ ವಿರೋಧ ವ್ಯಕ್ತ; ಸಿಎಂ ಜತೆ ಪ್ರತ್ಯೇಕ ಸಭೆ |
| 3 | ಗುಡ್‌ನ್ಯೂಸ್ ಏನಿಲ್ಲ, ಸದ್ಯಕ್ಕೆ ನಿರ್ಧಾರ ಕೈಗೊಂಡಿಲ್ಲ ಎಂದ ಕೃಷಿ ಸಚಿವ ಚಲುವರಾಯಸ್ವಾಮಿ. |

**ವಿರುಧ್ವನಿಯಲ್ಲಿ ಆಕ್ಷೇಪ:** ಜಾತಿ ಗಣತಿ ಬಗ್ಗೆ ನೀಡಲಾಗಿರುವ ವರದಿ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟ ಸಭೆಯಲ್ಲಿ ಲಿಂಗಾಯತ ಮತ್ತು ಒಕ್ಕಲಿಗರು ಶಾಸಕರು ಬಲವಾಗಿ ವಿರೋಧಿಸಿದ್ದಾರೆ ಎಂದು ಮೂಲಗಳಿಂದ ತಿಳಿದು ಬಂದಿದೆ. ಒಕ್ಕಲಿಗ ಸಚಿವರು ಈಗಿರುವ ಅಂಕಿ ಸಂಖ್ಯೆ ಒಪ್ಪಲು ಸಾಧ್ಯವಿಲ್ಲ. ನಮ್ಮ ಸಮುದಾಯವನ್ನು ಬೇರೆ ಬೇರೆ ಕ್ಲಾಸ್‌ಗಳಲ್ಲಿ ಗುರುತಿಸಲಾಗಿದೆ. ಎಲ್ಲಾ ಕ್ಲಾಸ್‌ಗಳಲ್ಲಿ ಬೇರೆ ಬೇರೆ ಅಗಿ ಗುರುತಿಸಿರುವ ಸಮುದಾಯವನ್ನು ಒಟ್ಟಿಗೆ ಸೇರಿಸಿ ಸರಿಪಡಿಸಿ ಘೋಷಣೆ ಮಾಡುವುದಾದರೆ ಮಾಡಿ ಇಲ್ಲದಿದ್ದರೆ ಮರು ಸಮೀಕ್ಷೆ ಮಾಡುವುದು ಅನಿವಾರ್ಯ. ಇದು ನಮ್ಮ ಸಮುದಾಯದ ನಿಲುವು ಎಂದು ಕ್ಯಾಬಿನೆಟ್ ಮುಂದೆ ಹೇಳಿದ್ದಾರೆ. ಲಿಂಗಾಯತ ಸಮುದಾಯದ ಸಚಿವರು ಕೆಲವು ದಾಖಲೆಯನ್ನು ಮುಂದಿಟ್ಟು ವಿರೋಧಿಸಿದ್ದಾರೆ. ನಮ್ಮ ಸಮುದಾಯ ಸಂಖ್ಯೆ 11% ಎಂದು ವರದಿ ಹೇಳುತ್ತಿದೆ. ಆದರೆ 1990ರ ಚಿನ್ನಪ್ಪ ರೆಡ್ಡಿ ಆಯೋಗವೇ ನಮ್ಮ ಸಮುದಾಯ 17% ಎಂದು ವರದಿ ಕೊಟ್ಟಿದೆ. ನಮ್ಮ ಅಂದಾಜಿನ ಪ್ರಕಾರ ನಮ್ಮ ಎಲ್ಲಾ ಉಪ ಜಾತಿಗಳು ಸೇರಿ ರಾಜ್ಯದಲ್ಲಿ 22% ಇದ್ದೇವೆ. ಆದರೆ ಈ ವರದಿ ಕೇವಲ 11% ಕೊಟ್ಟಿದ್ದನ್ನು ನಮ್ಮ ಸಮುದಾಯ ಯಾವುದೇ ಕಾರಣಕ್ಕೂ ಒಪ್ಪುವುದಿಲ್ಲ ಎಂದು ಬಲವಾಗಿ ಪ್ರತಿಪಾದಿಸಿದ್ದಾರೆ. ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಎಸ್‌ಎಸ್ ಮಲ್ಲಿಕಾರ್ಜುನ ಅವರು ಜಾತಿ ಜನಗಣತಿಯನ್ನು ಏರು ಧ್ವನಿಯಲ್ಲಿ ತೀವ್ರವಾಗಿ ವಿರೋಧಿಸಿದ್ದಾರೆ. ಮುಸ್ಲಿಮರಲ್ಲೂ ಹಲವಾರು ಉಪ ಪಂಗಡಗಳಿವೆ ಎಲ್ಲಾವನ್ನೂ ಯಾಕೆ ಒಂದರಲ್ಲೇ ಸೇರಿಸಿದ್ದೀರಿ ಎಂದು ಎಸ್ ಎಸ್ ಮಲ್ಲಿಕಾರ್ಜುನ ಪ್ರಶ್ನಿಸಿ ಕಿಡಿಕಾರಿದ್ದಾರೆ. ಈ ವೇಳೆ ಯಾವ ವರ್ಗಕ್ಕೆ ಅನ್ಯಾಯ ಆಗಿದೆಯೋ ಅದನ್ನು ಸೇರಿಸಲು ಅವಕಾಶ ಇದೆ ಎಂದು ಹೇಳುವ ಮೂಲಕ ಸಂತೋಷ್ ಲಾಡ್ ಸಚಿವರನ್ನು ಸಮಾಧಾನ ಮಾಡಲು ಪ್ರಯತ್ನಿಸಿದ್ದಾರೆ. ಸಂಜೆ 4 ಗಂಟೆಗೆ ಆರಂಭವಾಗಬೇಕಿದ್ದ ಸಂಪುಟ ಸಭೆ, ಒಂದು ಗಂಟೆ ತಡವಾಗಿ 5 ಗಂಟೆಗೆ ಆರಂಭವಾಗಿತ್ತು. ಇಬ್ಬರು ಸಚಿವರನ್ನು ಹೊರತುಪಡಿಸಿದರೆ ಎಲ್ಲಾ 31 ಸಚಿವರು ಸಭೆಗೆ ಹಾಜರಾಗಿದ್ದರು. ಸಿಎಂ ಅನುಮತಿ ಪಡೆದು ಸಚಿವ ದಿನೇಶ್ ಗುಂಡೂರಾವ್ ಹಾಗೂ ಸಚಿವ ಕೆ. ವೆಂಕಟೇಶ್ ಗೈರಾಗಿದ್ದು ವಿಶೇಷವಾಗಿತ್ತು.ಸಂಪುಟ ಸಭೆಗೂ ಮುನ್ನ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಒಕ್ಕಲಿಗ ಸಚಿವರೊಂದಿಗೆ ಸಿಎಂ ಪ್ರತ್ಯೇಕ ಮಾತುಕತೆ ನಡೆಸಿದ್ದು ವಿಶೇಷವಾಗಿತ್ತು.

**ಜಾತಿ ಗಣತಿ ವರದಿ ತಿರಸ್ಕರಿಸಿ**

ಜಾತಿ ಗಣತಿ ವರದಿಯನ್ನು ಅನುಷ್ಠಾನ ಮಾಡದೇ ಅದನ್ನು ತಿರಸ್ಕರಿಸಬೇಕು ಎಂದು ಕೇಂದ್ರ ಸಚಿವ ಶೋಭ ಕರಂದ್ಲಾಜೆ ಒತ್ತಾಯಿಸಿದ್ದಾರೆ.ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ಸರ್ಕಾರಕ್ಕೆ ಸಲ್ಲಿಕೆ ಮಾಡಿರುವ ಜಾತಿ ಗಣತಿ ವರದಿಯ ಬಗ್ಗೆ ಸಾಕಷ್ಟು ಸಂಶಯಗಳು ವ್ಯಕ್ತವಾಗಿವೆ. ಹಾಗಾಗಿ ವರದಿ ಅನುಷ್ಠಾನ ಬೇಡ. ಅದನ್ನು ತಿರಸ್ಕರಿಸಿ ಎಂದು ಕೇಂದ್ರ ಸಚಿವೆ ಶೋಭ ಕರಂದ್ಲಾಜೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದು ಆಗ್ರಹಿಸಿದ್ದಾರೆ.

**ಸಚಿವರಿಂದ ವಿರೋಧ**

ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ಬಗ್ಗೆ ಹಲವು ಸಚಿವರು ವಿರೋಧ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ಒಕ್ಕಲಿಗರು, ಲಿಂಗಾಯತರು, ಪರಿಶಿಷ್ಟ ಜಾತಿ ಸಚಿವರು ಜಾತಿ ಗಣತಿ ಸ್ಪಷ್ಟವಾಗಿಲ್ಲ, ಮರು ಗಣತಿ ಮಾಡಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆಂತೆ. ಹಲವು ಸಚಿವರಿಂದ ಅಪಸ್ವರ ಕೇಳಿ ಬಂದ ಹಿನ್ನೆಲೆ ಸಿಎಂ ಸಿದ್ದರಾಮಯ್ಯ ಅವರು ಪ್ರತ್ಯೇಕವಾಗಿ ಸಚಿವರ ಬಳಿ ಮಾತನಾಡಿದ್ದಾರೆ ಎನ್ನಲಾಗಿದೆ. ಸಚಿವ ಸಂಪುಟ ಸಭೆಯ ಬಳಿಕ ಹೊರ ಬಂದ ಗಣಿ, ತೋಟಗಾರಿಕೆ ಸಚಿವ ಎಸ್‌ಎಸ್ ಮಲ್ಲಿಕಾರ್ಜುನ ಅವರು, ಇಂದು ಯಾವುದೇ ತೀರ್ಮಾನ ಆಗಿಲ್ಲ. ಹಲವು ಸಚಿವರಿಗೆ ಗೊಂದಲಗಳಿಗೆ. ಆ ಬಗ್ಗೆ ಪ್ರಶ್ನೆ ಮಾಡಿದ್ದಾರೆ. ಆ ಬಗ್ಗೆ ಚರ್ಚಿಸಿ ಮುಂದಿನ ದಿನಗಳಲ್ಲಿ ತೀರ್ಮಾನ ಕೈಗೊಳ್ಳಲಾಗುತ್ತದೆ. ನಮ್ಮ ತಂದೆಯವರಿಗೆ ಜಾತಿ ಗಣತಿಗೆ ವಿರೋಧವೇನಿಲ್ಲ. ಅವರು ಕೂಡ ಹಲವು ಪ್ರಶ್ನೆಗಳನ್ನು ಮಾಡಿ ವರದಿ ಬಗ್ಗೆ ಗೊಂದಲ ಪರಿಹಾರ ಪಡೆದುಕೊಳ್ಳುತ್ತಿದ್ದಾರಷ್ಟೇ ಎಂದು ತಿಳಿಸಿದರು.

## ಏ.. ಕುಮಾರಸ್ವಾಮಿ ನಿನ್ನ ಚರಿತ್ರೆ ಇನ್ನೂ ಬಿಚ್ಚಿಟ್ಟಿಲ್ಲ

• **ಉದಯವಾಹಿನಿ, ಬೆಂಗಳೂರು**

ಕುಮಾರಸ್ವಾಮಿ ನನ್ನ ವಿರುದ್ಧ ಟನ್ ಗಟ್ಟಲೆ ಸಾಕ್ಷಾಧಾರಗಳನ್ನು ಇಟ್ಟುಕೊಂಡಿದ್ದಾರೆ. ಇದನ್ನು ಏಕೆ ಇಟ್ಟುಕೊಂಡಿದ್ದಾರೆ, ಲಾರಿಗಳಲ್ಲಿ ರಾಜ್ಯಪಾಲರ ಬಳಿ ಕಳುಹಿಸುತ್ತಿಲ್ಲ ಏಕೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಶ್ನಿಸಿದ್ದಾರೆ. ಕೇಂದ್ರ ಬಿಜೆಪಿ ಸರ್ಕಾರದ ಬೆಲೆ ಏರಿಕೆ ನೀತಿ ವಿರುದ್ಧ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಗುರುವಾರ (ಏ. 17) ನಡೆದ ರಾಜ್ಯಮಟ್ಟದ ಪ್ರತಿಭಟನೆಯಲ್ಲಿ ಡಿಕೆಶಿ ಪಾಲ್ಗೊಂಡಿದ್ದರು. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಏಕವಚನದಲ್ಲಿ ಹರಿಹಾಯ್ದ ಡಿಕೆಶಿ, ಏ ಕುಮಾರಸ್ವಾಮಿ ನಿನ್ನ ಚರಿತ್ರೆ ನಾನು ಇನ್ನೂ ಬಿಚ್ಚಿಟ್ಟಿಲ್ಲ, ನಿನ್ನ ಅಣ್ಣಂದಿರ ಆಸ್ತಿಯ ಬಗ್ಗೆ ಇನ್ನೂ ಕೆದಕಿಲ್ಲ. ಈ ಡಿ.ಕೆ.ಶಿವಕುಮಾರ್ ನಿನ್ನ ಗೊಡ್ಡು ಬೆದರಿಕೆಗೆ ಹೆದರುವ ಮಗ ನಾನಲ್ಲ ಎಂದು ಕಿಡಿಕಾರಿದ್ದಾರೆ. ಮಿಸ್ಟರ್ ಕುಮಾರಸ್ವಾಮಿ, ಈ ಡಿ.ಕೆ. ಶಿವಕುಮಾರ್ ನಿನ್ನ ಹಾಗೂ ಬಿಜೆಪಿಯ ಗೊಡ್ಡು ಬೆದರಿಕೆಗೆ ಹೆದರುವ ಮಗ ಅಲ್ಲ. ನಮ್ಮ ಕಷ್ಟ, ನಮ್ಮ ಶ್ರಮ, ನಮ್ಮ ಬದುಕು. ನಾವು ಆಸ್ತಿ ಮಾಡಿಕೊಳ್ಳುತ್ತೇವೆ. ಅದರ ಸತ್ಯಾಸತ್ಯತೆ ಸರ್ಕಾರ ಪರಿಶೀಲನೆ ಮಾಡಲಿ. ನಾನು ನಿನ್ನ ಚರಿತ್ರೆಯನ್ನು ಇನ್ನು ಬಿಚ್ಚಿಲ್ಲ. ನಿಮ್ಮ ಅಣ್ಣ ತಮ್ಮಂದಿರ ಆಸ್ತಿ ಎಲ್ಲಿಂದ ಬಂತು ಎಂಬುದನ್ನು ನಾನಿನ್ನು ಬಿಚ್ಚಿಟ್ಟಿಲ್ಲ'' ಎಂದು ಡಿಕೆಶಿ ವಾಗ್ದಾಳಿ ನಡೆಸಿದರು.

**ನಿನ್ನ ಅಣ್ಣಂದಿರ ಇತಿಹಾಸ ಇನ್ನೂ ತೆರೆದಿಟ್ಟಿಲ್ಲ**

ಬಿಜೆಪಿಯ ಚಂಗಲು ನನ್ನ ವಿರುದ್ಧ ರಾಜ್ಯಪಾಲರಿಗೆ ದೂರು ಕೊಟ್ಟಿದ್ದಾನೆ. ಆತನ ವಿರುದ್ಧ ವಿಧಾನಸೌಧದಲ್ಲಿ ಅತ್ಯಾಚಾರ ಮಾಡಿರುವ ಪ್ರಕರಣಗಳಿವೆ. ಎಲ್ಲಾವೂ ಸಾಬೀತಾಗುತ್ತಿವೆ. ಆತ ಆಡಿರುವ ಮಾತುಗಳು ಸಾಬೀತಾಗಿವೆ. ಈಗ ನಾನು ಅದರ ಬಗ್ಗೆ ಚರ್ಚೆ ಮಾಡುವುದಿಲ್ಲ. ಭ್ರಷ್ಟ ಬಿಜೆಪಿ, ದಳದ ವಿರುದ್ಧ ಹೋರಾಟ ಮಾಡಿ 2028ರಲ್ಲಿ ಮತ್ತೆ ನಿಮ್ಮ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದು ಡಿ.ಕೆ.ಶಿವಕುಮಾರ್ ವಾಕ್ ಪ್ರಹಾರ ನಡೆಸಿದರು.



ರಸ್ತೆ ಸರಿ ಇಲ್ಲವಾದರೆ ಕುದುರೆ ಮೇಲೆ ಹೋಗಿ, ಕರೆಂಟ್ ಇಲ್ಲವಾದರೆ ತಂತಿ ಹಿಡಿದು ನೋಡಿ ಎಂದು ಮಾಜಿ ಸಿಎಂ ಜೆ.ಹೆಚ್ ಪಟೇಲರು ಹೇಳಿದ್ದರು. ಆದರೆ ನಾನು ಆ ರೀತಿ ಹೇಳುವುದಿಲ್ಲ. ನಮ್ಮ ಸರ್ಕಾರ ಕಳೆದ 2 ವರ್ಷಗಳಿಂದ ಯಶಸ್ವಿಯಾಗಿ ಉತ್ತಮ ಆಡಳಿತ ನೀಡುತ್ತಾ ಬಂದಿದ್ದೇವೆ ಎಂದು ತಮ್ಮ ಸರ್ಕಾರವನ್ನು ಸಮರ್ಥಿಸಿಕೊಂಡರು.

# ಬಡ ಹಿರಿಯ ನಾಗರಿಕರನ್ನು ತಲುಪಲು ಸೋಲುತ್ತಿದೆಯೇ ಮಹತ್ವಾಕಾಂಕ್ಷಿ ಯೋಜನೆ

■ ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ■ ಅರ್ಹತೆ ಇದ್ದೂ ಆಯುಷ್ಮಾನ್‌ನಿಂದ ವಂಚಿತರಾಗುತ್ತಿರೋದು ಯಾಕೆ

• **ಉದಯವಾಹಿನಿ, ಕಲಬುರಗಿ**

ಭಾರತದ ಆಯುಷ್ಮಾನ್ ಭಾರತ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ (ಎಬಿ-ಪಿಎಂಜೆಎವೈ) ಯೋಜನೆ 70 ವರ್ಷ ದಾಟಿದ ಹಿರಿಯ ನಾಗರಿಕರಿಗೆ 5 ಲಕ್ಷ ರೂಪಾಯಿಗಳ ತನಕ ವಾರ್ಷಿಕ ಆರೋಗ್ಯ ವಿಮೆಯನ್ನು ಒದಗಿಸುವ ಮೂಲಕ ಅವರಲ್ಲಿ ಹೊಸ ಭರವಸೆಯನ್ನು ಮೂಡಿಸಿದೆ. ಅಕ್ಟೋಬರ್ 2024ರಲ್ಲಿ ಜಾರಿಗೆ ಬಂದ ಈ ಯೋಜನೆ, 4.5 ಕೋಟಿ ಕುಟುಂಬಗಳ 6 ಕೋಟಿ ಹಿರಿಯ ನಾಗರಿಕರನ್ನು ಗುರಿಯಾಗಿಸಿದೆ. ಅವರ ಮೇಲಿರುವ ಆರೋಗ್ಯ ವೆಚ್ಚದ ಹೊರೆಯನ್ನು ಕಡಿಮೆಗೊಳಿಸುವ ಮಹತ್ವಾಕಾಂಕ್ಷಿ ಯೋಜನೆ ಇದಾಗಿದೆ. ಬಹಳಷ್ಟು ಬಾರಿ ಸಾಲದ ಹೊರೆಗೆ ಸಿಲುಕುವುದನ್ನು ತಪ್ಪಿಸಲು ಚಿಕಿತ್ಸೆಯನ್ನೇ ನಿರಾಕರಿಸುವ ಬಡ ಹಿರಿಯ ನಾಗರಿಕರಿಗೆ ಸರ್ಕಾರದ ಈ ಯೋಜನೆ ವರದಾನದಂತೆ ಕಂಡುಬಂದಿದೆ. ಆದರೆ, ಮೇಲ್ನೋಟಕ್ಕೆ ಉತ್ತಮವಾಗಿ ಕಂಡರೂ, ಯೋಜನೆ ಎಲ್ಲಾ ಚಿಕಿತ್ಸೆಗಳನ್ನು ಒಳಗೊಳ್ಳದಿರುವುದು, ರಾಜ್ಯ ಹಂತದ ವೈಫಲ್ಯ ಮತ್ತು ಪ್ರಾಯೋಗಿಕ ಅಡಚಣೆಗಳು ಸೇರಿದಂತೆ ಒಂದಷ್ಟು ಕೊರತೆಗಳಿದ್ದು, ಇದು ಬಡ ಹಿರಿಯ ನಾಗರಿಕರು ಕಷ್ಟಪಡುವಂತೆ ಮಾಡಿದೆ. ಬಹಳಷ್ಟು ಜನರಿಗೆ ಈ ಸುವರ್ಣಾವಕಾಶ ಕೇವಲ ಒಂದು ಮರೀಚಿಕೆಯಂತೆ ಭಾಸವಾಗುತ್ತಿದೆ.

**ಉತ್ತಮ ಯೋಜನೆ - ಒಂದಷ್ಟು ಸಮಸ್ಯೆಗಳು:** ಹಾಗೇ ನೋಡಿದರೆ ಎಬಿ-ಪಿಎಂಜೆಎವೈ ಭಾರತದ ಪಾಲಿಗೆ ಆರೋಗ್ಯ ಕ್ಷೇತ್ರದ ಚಿತ್ರಣವನ್ನೇ ಬದಲಿಸಬಲ್ಲ ಯೋಜನೆ. ಇದು 1,929 ವೈದ್ಯಕೀಯ ಚಿಕಿತ್ಸೆಗಳನ್ನು ಒಳಗೊಂಡಿದ್ದು, ಹೃದಯ ಶಸ್ತ್ರಚಿಕಿತ್ಸೆಯಿಂದ ಕ್ಯಾನ್ಸರ್ ಚಿಕಿತ್ಸೆಯ ತನಕ ಎಲ್ಲಾವನ್ನೂ ಒಳಗೊಂಡಿದೆ. ಯೋಜನೆಯ ಭಾಗವಾಗಿರುವ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ನಗದು ರಹಿತ ಸೇವೆ ರೋಗಿಗಳಿಗೆ ಲಭಿಸುತ್ತದೆ. ಈ ವಿಮೆ ಯಾವುದೇ ಕಾಯುವ ಅವಧಿಯನ್ನು ಹೊಂದಿಲ್ಲ. ಆದ್ದರಿಂದ ಮಧುಮೇಹ ಅಥವಾ ಹೈಪರ್ ಟೆನ್ಷನ್‌ನಂತಹ ಸಮಸ್ಯೆಗಳು ಮೊದಲ ದಿನದಿಂದಲೇ ಇದರಲ್ಲಿ ಅಂತರ್ಗತವಾಗಿರುತ್ತವೆ. ಹಿರಿಯ ನಾಗರಿಕರಿಗೆ ಆಯುಷ್ಮಾನ್ ವಯಾ ವಂದನ ಕಾರ್ಡ್ ಲಭಿಸಲಿದ್ದು, ಐದು ಲಕ್ಷ ರೂಪಾಯಿಗಳ ವಿಮೆ ಕುಟುಂಬ ಆಧಾರಿತವಾಗಿರುತ್ತದೆ.




**6 ಕೋಟಿ ಹಿರಿಯ ನಾಗರಿಕರ ಗುರಿ**

ಈಗಾಗಲೇ ನೋಂದಾಯಿತರಾದವರಿಗೆ ಟಾಪಪ್ ಅವಕಾಶವೂ ಲಭಿಸುತ್ತದೆ. ಈ ಯೋಜನೆಯ ಪರಿಣಾಮವಾಗಿ, ಬಡ ಹಿರಿಯ ನಾಗರಿಕರಿಗೆ ತಮ್ಮ ಮನೆ ಮಠಗಳನ್ನು ಮಾರದೆ, ತೀರಿಸಲಾಗದ ಬಡ್ಡಿ ದರದಲ್ಲಿ ಸಾಲ ಮಾಡದೆ ಪ್ರಾಣ ರಕ್ಷಿಸುವ ಶಸ್ತ್ರಚಿಕಿತ್ಸೆಗೆ ಒಳಗಾಗಲು ಸಾಧ್ಯವಾಗುತ್ತದೆ. ದೇಶಾದ್ಯಂತ ಈ ಯೋಜನೆಯ ಭಾಗವಾಗಿರುವ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಸಾಧ್ಯವಾಗುವುದರಿಂದ, ಇದು ವಲಸೆ ಹೋಗುವವರಿಗೆ ಮತ್ತು ಪ್ರಯಾಣ ಬೆಳೆಸುವವರಿಗೂ ಅನುಕೂಲಕರವಾಗಿದೆ.

ಆದರೆ, ಯೋಜನೆಯ ಗಮನ ಬಹಳ ಸೀಮಿತವಾಗಿದ್ದು, ಗಂಭೀರ ಸಮಸ್ಯೆಗಳಿಗೆ ಆಸ್ಪತ್ರೆಗೆ ದಾಖಲಾದವರನ್ನು ಮಾತ್ರವೇ ಒಳಗೊಳ್ಳುತ್ತದೆ. ಇದು ಪ್ರಾಥಮಿಕ ಚಿಕಿತ್ಸೆ, ಹೊರರೋಗಿ ಭೇಟಿ (ಒಪಿಡಿ), ಮತ್ತು ಕಾಲಾನುಕ್ರಮದ ರೋಗ ಪತ್ತೆ ಪ್ರಕ್ರಿಯೆಗಳನ್ನು ಒಳಗೊಳ್ಳುವುದಿಲ್ಲ. ಯಾವುದೋ ಹಳ್ಳಿಯಲ್ಲಿ ವಾಸವಾಗಿರುವ, 75 ವರ್ಷ ವಯಸ್ಸಿನ ಒಬ್ಬಂಟಿ ವಿಧವೆಗೆ ಇದೊಂದು ಕಟು ವಾಸ್ತವದಂತಿರುತ್ತದೆ. ಆಕೆಗೆ ಆರ್ಥ್ರೈಟಿಸ್ ಅಥವಾ ಆರಂಭಿಕ ಮಧುಮೇಹ ಸಮಸ್ಯೆ ಇದ್ದು, ಆಕೆ ಆರೋಗ್ಯ ಕಾಪಾಡಿಕೊಳ್ಳಲು ಆಗಾಗ್ಗೆ ವೈದ್ಯರನ್ನು ಭೇಟಿಯಾಗಿ, ಔಷಧ ಪಡೆಯುವುದು ಮತ್ತು ರಕ್ತ ಪರೀಕ್ಷೆ ನಡೆಸಬೇಕಾದರೆ, ಅದರ ವೆಚ್ಚವನ್ನು ಎಬಿ-ಪಿಎಂಜೆಎವೈ ಭರಿಸುವುದಿಲ್ಲ. ಇಂತಹ ಚಿಕಿತ್ಸೆಗಳಿಗಾಗಿ ಆಕೆ ತಾನು ಕಷ್ಟಪಟ್ಟು ಸಂಪಾದಿಸಿ, ಅದರಲ್ಲಿ ಉಳಿಸಿರುವ ಒಂದಷ್ಟು ಪುಡಿಗಾಸನ್ನು ವೆಚ್ಚ ಮಾಡಬೇಕಾಗುತ್ತದೆ, ಅಥವಾ ಕುಟುಂಬಸ್ಥರ ಮೇಲೆ ಅವಲಂಬಿತಳಾಗಬೇಕಾಗುತ್ತದೆ. ಇವೆರಡೂ ಆಯ್ಕೆಗಳು ಇಲ್ಲದೇ ಹೋದರೆ, ಆಕೆ ಚಿಕಿತ್ಸೆಯಿಂದ ವಂಚಿತಳಾಗಬೇಕಾಗುತ್ತದೆ. ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳೇ ಮುಂದೆ ಬಹುದೊಡ್ಡ ಸಮಸ್ಯೆಯಾಗಿ, ಆಕೆ ಆಸ್ಪತ್ರೆಗೆ ದಾಖಲಾಗುವಂತೆ ಮಾಡಿಬಿಡಬಹುದು. ಆಕೆಗೆ ಅದೃಷ್ಟವಿದ್ದರೆ, ಆಕೆ ಸರಿಯಾದ ಸಮಯದಲ್ಲಿ ಹಳ್ಳಿಯಿಂದ ಆಸ್ಪತ್ರೆಗೆ ತಲುಪಬಹುದು. ಆದರೆ, ಆ ವೇಳೆಗಾಗಲೇ ಸರಿಪಡಿಸಲಾಗದಷ್ಟು ಸಮಸ್ಯೆಗಳು ತಲೆದೋರಿರುತ್ತವೆ. ಕೆಲವೊಂದು ಬಾರಿ ವಿಮೆಯ ವ್ಯಾಪ್ತಿಯನ್ನೂ ಮೀರಿ ಚಿಕಿತ್ಸಾ ವೆಚ್ಚ ಹೆಚ್ಚಾದೀತು.

**ಬಡವರನ್ನು ಕಾಡಲಿದೆ ಚಿಕಿತ್ಸೆಗಳ ಹೊರಗಿಡುವಿಕೆ**

ಈ ಯೋಜನೆ ಒಳಗೊಳ್ಳದಿರುವ ಚಿಕಿತ್ಸೆಗಳ ಪಟ್ಟಿಯೇ ಬಡ ಜನರ ಮುಂದೆ ಗೋಡೆಯೊಂದನ್ನು ನಿರ್ಮಿಸಿದಂತಾಗುತ್ತದೆ. ಆಸ್ಪತ್ರೆಗೆ ದಾಖಲಾಗುವ ಅವಶ್ಯಕತೆ ಎದುರಾಗದ ಹೊರತು, ದಂತ ಚಿಕಿತ್ಸೆಯನ್ನು ಯೋಜನೆ ಒಳಗೊಂಡಿಲ್ಲ. ಎಚ್‌ಐವಿ/ಏಡ್ಸ್ ಚಿಕಿತ್ಸೆ, ಮಾದಕ ದ್ರವ್ಯ ಅಥವಾ ಮದ್ಯ ಸೇವನೆಗೆ ಪುನಶ್ಚೇತನ, ಬೊಜ್ಜು, ಮತ್ತು ಮಾನಸಿಕ ಆರೋಗ್ಯ ಸಮಸ್ಯೆಗಳು ಹಿರಿಯ ನಾಗರಿಕರಲ್ಲಿ ಸಾಮಾನ್ಯವಾದರೂ, ಅವುಗಳ ಚಿಕಿತ್ಸೆ ಪ್ರಸ್ತುತ ಯೋಜನೆಯ ವ್ಯಾಪ್ತಿಯಲ್ಲಿ ಬರುವುದಿಲ್ಲ. ಇನ್ನು ಜೀವ ಉಳಿಸುವ ಕೊನೆಯ ಚಿಕಿತ್ಸೆಯಾದ ಅಂಗಾಂಶ ಕಸಿ ಚಿಕಿತ್ಸೆಯೂ ಯೋಜನೆಯ ಭಾಗವಾಗುವುದು ಅಪರೂಪ. ಒಂದು ವೇಳೆ ಒಳರೋಗಿ ಚಿಕಿತ್ಸೆಯ ಭಾಗವಾಗದೆ ಹೋದರೆ, ಹೃದಯದ ಆರೋಗ್ಯ ತಪಾಸಣೆ ನಡೆಸುವ ಆಯಂಜಿಯೋಗ್ರಾಮ್ ಸಹ ವಿಮೆಯ ವ್ಯಾಪ್ತಿಗೆ ಬರುವುದಿಲ್ಲ. ಆದರೆ, ಸಣ್ಣ ಪ್ರಮಾಣದ ನಿವೃತ್ತಿ ವೇತನ ಅಥವಾ ದಿನಗೂಲಿಯಿಂದ ಜೀವನ ನಡೆಸುವ ಹಿರಿಯ ನಾಗರಿಕರಿಗೆ ಇಂತಹ ಪರೀಕ್ಷೆಗಳು ಅಥವಾ ಚಿಕಿತ್ಸೆಯ ವೆಚ್ಚವನ್ನು ಭರಿಸುವುದು ಬಹಳ ಕಷ್ಟವಾಗಲಿದೆ. ಇದರಿಂದಾಗಿ ಅವರು ಚಿಕಿತ್ಸೆಯನ್ನು ಮುಂದೂಡಿ, ಆರೋಗ್ಯ ಸ್ಥಿತಿ ಕೈಮೀರಿ ಹೋಗದಿರಲಿ ಎಂದು ಪ್ರಾರ್ಥಿಸುವಂತಾಗುತ್ತದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.99 ₹/L ಬಂಗಾರ: ₹9,731/Gram24ct ₹8,920/Gram22ct ಬೆಳ್ಳಿ: ₹100.00/Gram

# ಹರಿದಾಸ ಮಂಜರಿ

• ಉದಯವಾಹಿನಿ, ಬೆಂಗಳೂರು



ಶ್ರೀಅಭಯ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನ ಶ್ರೀ ವಜ್ರಕ್ಷೇತ್ರದಲ್ಲಿ ಏಪ್ರಿಲ್ 18, ಶುಕ್ರವಾರ ಸಂಜೆ 6-00ಕ್ಕೆ ಶ್ರೀ ಶಾರದಾ ಸಂಗೀತ ಶಾಲೆಯ ಗುರು ವಿದುಷಿ ಶ್ರೀಮತಿ ಶೃತಿ ಅರುಣ್, ವಿದ್ಯಾರ್ಥಿಗಳಿಂದ ಹರಿದಾಸ ಮಂಜರಿ ಗಾಯನ ಕಾರ್ಯಕ್ರಮ. ವಾದ್ಯ ಸಹಕಾರ ಶ್ರೀ ಅಮಿತ್ ಶರ್ಮಾ (ಕೀ-ಬೋರ್ಡ್), ಶ್ರೀ ವಿಷ್ಣು ಚಿತ್ತನ್ (ತಬಲಾ). ಸ್ಥಳ : ದೇವಸ್ಥಾನದ ಆವರಣ, 152/1, 6ನೇ ಮುಖ್ಯರಸ್ತೆ, 3ನೇ ಬ್ಲಾಕ್, ತ್ಯಾಗರಾಜನಗರ, ಬೆಂಗಳೂರು-560028.

# ಆಪ್‌ನಿಂದ ಬೆಲೆ ಏರಿಕೆ ಅಭಿಯಾನ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಆಮ್ ಆದ್ಮಿ ಪಕ್ಷದಿಂದ ಸತತ 10 ದಿವಸಗಳಿಂದ ಕೇಂದ್ರದ ಬಿಜೆಪಿ, ರಾಜ್ಯದ ಕಾಂಗ್ರೆಸ್ ಸರ್ಕಾರಗಳ ಬೆಲೆ ಏರಿಕೆ ನೀತಿಯನ್ನು ವಿರೋಧಿಸಿ ನಡೆಯುತ್ತಿರುವ ತುಘಲಕ್ ತೆರಿಗೆ ದರೋಡೆ ಅಭಿಯಾನವು ಗುರುವಾರ ನಗರದ ಶಾಂತಿನಗರ ವಿಧಾನಸಭಾ ಕ್ಷೇತ್ರದ ಅನೇಕ ಕಡೆಗಳಲ್ಲಿ ನಡೆಯಿತು. ಪಕ್ಷದ ಕಾರ್ಯಾಧ್ಯಕ್ಷ ಸೀತಾರಾಮ್ ಗುಂಡಪ್ಪ, ಬೆಂಗಳೂರು ನಗರ ಮಾಧ್ಯಮ ಉಸ್ತುವಾರಿ ಅನಿಲ್ ನಾಚಪ್ಪ ನೇತೃತ್ವದಲ್ಲಿ ನಡೆದ ಅಭಿಯಾನವು ಬ್ರಿಗೇಡ್ ರಸ್ತೆ, ನೀಲಸಂದ್ರ , ವನ್ನಾರ್ ಪೇಟೆ, ಎಲ್.ಆರ್.ನಗರ, ದೊಮ್ಮಲೂರು ಇನ್ನಿತರ ಕಡೆ ಜನನಿಬಿಡ ಪ್ರದೇಶಗಳಲ್ಲಿ ಅಭಿಯಾನವನ್ನು ನಡೆಸಲಾಯಿತು.

ಕ್ಷೇತ್ರದ ಸಾವಿರಾರು ಕಾರ್ಯಕರ್ತರುಗಳಿಗೆ ಬೆಲೆ ಏರಿಕೆ ಕರಪತ್ರವನ್ನು ನೀಡುವ ಮೂಲಕ ಪಕ್ಷದ ಜನಾಂದೋಲನದಲ್ಲಿ ಸಕ್ರಿಯಗೊಳ್ಳಬೇಕೆಂದು ಪಕ್ಷದ ಕಾರ್ಯಾಧ್ಯಕ್ಷ ಸೀತಾರಾಮ್ ಗುಂಡಪ್ಪ ವಿನಂತಿಸಿಕೊಂಡರು. ಜನಸಾಮಾನ್ಯರ ಧ್ವನಿಯಾಗಿ ಆಮ್ ಆದ್ಮಿ ಪಕ್ಷ ಎಂದಿಗೂ ಹೋರಾಡುತ್ತದೆ. ನೀಚ ಸರ್ಕಾರಗಳು ಬೆಲೆ ಇಳಿಸುವ ತನಕ ನಮ್ಮ ಹೋರಾಟ ಮುಂದುವರೆಯುತ್ತದೆ ಎಂದು ಅನಿಲ್ ನಾಚಪ್ಪ ತಿಳಿಸಿದರು.

# ಹೊತ್ತಿ ಉರಿದ ಲಾರಿ ಚಾಲಕ ಪಾರು

• ಉದಯವಾಹಿನಿ, ಬೆಂಗಳೂರು

ಫ್ಲೈಓವರ್ ಮೇಲೆ ಲಾರಿಯೊಂದು ಏಕಾಏಕಿ ಹೊತ್ತಿ ಉರಿದ ಘಟನೆ ಬೆಂಗಳೂರಿನ ಪೀಣ್ಯದಲ್ಲಿ ನಡೆದಿದೆ. ಗುರುವಾರ ಮಧ್ಯಾಹ್ನ 1 ಗಂಟೆಯ ಸುಮಾರಿಗೆ ಘಟನೆ ನಡೆದಿದೆ. ಲಾರಿಯಲ್ಲಿ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ಚಾಲಕ ಕೂಡಲೇ ಲಾರಿಯಿಂದ ಕೆಳಗಿಳಿದಿದ್ದಾರೆ. ಬೆಂಕಿ ಹೊತ್ತಿಕೊಂಡ ಹಿನ್ನೆಲೆ ನಗರದ ಕಡೆಗೆ ಕೆಲಗಂಟೆಗಳ ಕಾಲ ಪೀಣ್ಯ ಫ್ಲೈಓವರ್ ತಾತ್ಕಾಲಿಕವಾಗಿ ಬಂದ್ ಮಾಡಲಾಗಿತ್ತು. ನಗರದ ಕಡೆಗೆ ಬರುವವರು ಫ್ಲೈಓವರ್ ಕೆಳಗಡೆ ಬರುವಂತೆ ಸೂಚನೆ ನೀಡಲಾಗಿತ್ತು. ಘಟನೆ ನಡೆದ ಕೂಡಲೇ ಸ್ಥಳೀಯರು 112ಕ್ಕೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಆಗಮಿಸಿದ ಅಗ್ನಿ ಶಾಮಕ ದಳ ಸಿಬ್ಬಂದಿಯಿಂದ ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿದ್ದಾರೆ.

# ಒಕ್ಕಲಿಗ ಸಮುದಾಯಕ್ಕೆ ಅನ್ಯಾಯ ಆದ್ರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡೋಕು ಸಿದ್ಧ

• ಉದಯವಾಹಿನಿ, ಬೆಂಗಳೂರು


ಜಾತಿ ಜನಗಣತಿ ಮಾಡುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇಲ್ಲ. ಸಿಎಂ ನನಗೆ ಜಾತಿ ಜನಗಣತಿ ಮಾಡಲು ಅಧಿಕಾರ ಇದೆ ಎಂದು ಹೇಳಲಿ, ನನ್ನ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡ್ತೇನೆ ಎಂದು ಎ. ಮಂಜು ಸವಾಲ್ ಹಾಕಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು,

> **ಈ ಜಾತಿ ಜನಗಣತಿ ವಿರುದ್ಧ ಬಿಜೆಪಿ, ಜೆಡಿಎಸ್, ಕಾಂಗ್ರೆಸ್ ಎಲ್ಲಾ ಒಕ್ಕಲಿಗ ಶಾಸಕರು ಪಕ್ಷಾತೀತವಾಗಿ ಧ್ವನಿ ಎತ್ತಬೇಕು. ನಮ್ಮ ಸಮುದಾಯಕ್ಕೆ ಅನ್ಯಾಯ ಆದ್ರೆ ನಾವು ಸಹಿಸಲ್ಲ. ನನಗೆ ಸಮುದಾಯದ ಮುಖ್ಯ, ಶಾಸಕ ಸ್ಥಾನ ಮುಖ್ಯ ಅಲ್ಲ. ಸಮುದಾಯಕ್ಕಾಗಿ ಶಾಸಕ ಸ್ಥಾನಕ್ಕೂ ರಾಜೀನಾಮೆ ಕೊಡೋಕೆ ಸಿದ್ಧ ಎಂದು ಹೇಳಿದ್ದಾರೆ.**

ಜಾತಿ ಜನಗಣತಿ ಅಲ್ಲ ಇದು.. ಇವರಿಗೆ ಜಾತಿ ಜನಗಣತಿ ಮಾಡಲು ಅಧಿಕಾರ ಇಲ್ಲ. ಸಿಎಂ ನನಗೆ ಜಾತಿ ಜನಗಣತಿ ಮಾಡಲು ಅಧಿಕಾರ ಇದೆ ಎಂದು ಹೇಳಲಿ, ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡ್ತೇನೆ ಎಂದು ಸವಾಲ್ ಹಾಕಿದ್ದಾರೆ.

ಈ ಸರ್ಕಾರಕ್ಕೆ ಜಾತಿ ಜನಗಣತಿ ಮಾಡಲು ಅಧಿಕಾರ ಕೊಟ್ಟವರು ಯಾರು? ಜಾತಿ ಜನಗಣತಿ ಮಾಡಬೇಕಿದ್ದು ಕೇಂದ್ರ ಸರ್ಕಾರ. ಇದು ಜಾತಿಗಣತಿ ಅಲ್ಲ. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ. ಇಂತಹ ಸಮೀಕ್ಷೆಯಲ್ಲಿ ಜಾತಿಗಣತಿ ಯಾಕೆ ಮಾಡಿದ್ದು ಯಾಕೆ? ಕಾಂಗ್ರೆಸ್‌ನಲ್ಲಿ ಕುರ್ಚಿ ಕಿತ್ತಾಟ ಇರೋದಕ್ಕೆ ಇವೆಲ್ಲ ಮಾಡ್ತಿದ್ದಾರೆ. ಕುರ್ಚಿ ಕಿತ್ತಾಟ ಮರೆ ಮಾಚೋಕೆ ಇದೆಲ್ಲ ಮಾಡ್ತಿದ್ದಾರೆ.

ಇದು ಸರಿಯಲ್ಲ, ಈ ಜಾತಿ ಜನಗಣತಿ ವರದಿ ಅಂಗೀ ಕಾರ ಮಾಡಬಾರದು ಎಂದು ಒತ್ತಾಯಿಸಿದ್ದಾರೆ. ನನ್ನ ಮನೆಗೆ ಬಂದು ಸಮೀಕ್ಷೆಯೇ ಮಾಡಿಲ್ಲ. ಇದಕ್ಕೇನು ಹೇಳೋದು? ಜಯಪ್ರಕಾಶ್ ಹೆಗ್ಡೆ ಇದನ್ನ ಜಾತಿ ಸಮೀಕ್ಷೆ ಅಂತ ಹೇಳಲಿ ನೋಡೋಣ. ಡಿಕೆ ಶಿವಕುಮಾರ್ ಸಮುದಾಯಕ್ಕೆ ಅನ್ಯಾಯ ಮಾಡಲು ಬಿಡಬಾರದು. ಇವತ್ತಿನ ಕ್ಯಾಬಿನೆಟ್‌ನಲ್ಲಿ ಇದನ್ನ ಅಂಗೀಕಾರ ಮಾಡಿದ್ರೆ ಉಗ್ರ ಹೋರಾಟ ಮಾಡ್ತೀವಿ. ಸರ್ಕಾರಕ್ಕೆ ಶಾಸಕ ಎ ಮಂಜು ಎಚ್ಚರಿಕೆ ನೀಡಿದ್ದಾರೆ.



# ಜಾತಿ ಜನಗಣತಿ ವರದಿ ತಿರಸ್ಕರಿಸುವಂತೆ ಸಿಎಂಗೆ ಶೋಭಾ ಒತ್ತಾಯ

## ವರದಿಯು ಮೂಲಭೂತವಾಗಿ ದೋಷಪೂರಿತವಾಗಿದೆ, ರಾಜ್ಯದ ಜನಸಂಖ್ಯಾ ವಾಸ್ತವತೆಯನ್ನು ಪ್ರತಿಬಿಂಬಿಸುವಲ್ಲಿ ವಿಫಲ

• ಉದಯವಾಹಿನಿ, ಬೆಂಗಳೂರು

ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ಸರ್ಕಾರಕ್ಕೆ ಸಲ್ಲಿಕೆ ಮಾಡಿರುವ ಜಾತಿ ಜನಗಣತಿ ವರದಿಯ ಬಗ್ಗೆ ಸಾಕಷ್ಟು ಸಂಶಯಗಳು ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಸಚಿವ ಸಂಪುಟ ಸಭೆಯಲ್ಲಿ ಅನುಷ್ಠಾನ ಮಾಡದೆ ತಿರಸ್ಕಾರ ಮಾಡುವಂತೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮುಖ್ಯಮಂತ್ರಿಗೆ ಒತ್ತಾಯಿಸಿದ್ದಾರೆ. ಈ ಸಂಬಂಧ ಮುಖ್ಯಮಂತ್ರಿಗಳಿಗೆ ಎರಡು ಪುಟಗಳ ಪತ್ರ ಬರೆದಿರುವ ಶೋಭಾ



ಕರಂದ್ಲಾಜೆ ಅವರು, ಕಾಂತರಾಜು ಆಯೋಗದ ಮೇಲುಸ್ತುವಾರಿಯಲ್ಲಿ ಸಿದ್ಧಪಡಿಸಲಾದ ಕರ್ನಾಟಕ ಜಾತಿ ಗಣತಿ ವರದಿಯ ಬಗ್ಗೆ ಗಂಭೀರ ಕಳವಳ ವ್ಯಕ್ತವಾಗಿದೆ. ವರದಿಯು ಮೂಲಭೂತವಾಗಿ ದೋಷಪೂರಿತವಾಗಿದೆ ಮತ್ತು ರಾಜ್ಯದ ಜನಸಂಖ್ಯಾ ವಾಸ್ತವತೆಯನ್ನು ಪ್ರತಿಬಿಂಬಿಸುವಲ್ಲಿ ವಿಫಲವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಆಯೋಗದ ಪ್ರಕಾರ, ಸಮೀಕ್ಷೆಯನ್ನು ಏಪ್ರಿಲ್ 11, 2015, ಮೇ 30, 2015 ರ ನಡುವೆ 5.9 ಕೋಟಿ ಜನಸಂಖ್ಯೆಯನ್ನು ಒಳಗೊಳ್ಳಲು ಕೇವಲ 50 ದಿನಗಳ ಅಲ್ಪಾವಧಿಯಲ್ಲಿ ನಡೆಸಲಾಗಿದೆ. ಇದು ಪ್ರಕ್ರಿಯೆಯ ವಿಶ್ವಾಸಾರ್ಹತೆ ಮತ್ತು ಸಂಪೂರ್ಣತೆಯ ಮೇಲೆ ಗಂಭೀರ ಅನುಮಾನವನ್ನು ಉಂಟುಮಾಡುತ್ತದೆ ಎಂದು ಸಂಶಯ ವ್ಯಕ್ತಪಡಿಸಿದ್ದಾರೆ. ವಿವಿಧ ಸಮುದಾಯಗಳ ಜನಸಂಖ್ಯೆಯ ಅಂಕಿ-ಅಂಶಗಳಲ್ಲಿ ಅತ್ಯಂತ ಎದ್ದು ಕಾಣುವ ವ್ಯತ್ಯಾಸಗಳಲ್ಲಿ ಒಂದಾಗಿದೆ. ಉದಾಹರಣೆಗೆ, ವೀರಶೈವ ಲಿಂಗಾಯತ ಜನಸಂಖ್ಯೆಯು ಕೇವಲ 30 ಲಕ್ಷ ಎಂದು ವರದಿ ಹೇಳುತ್ತದೆ, ಆದರೆ ವಿಶ್ವಾಸಾರ್ಹ ಅಂದಾಜಿನ ಪ್ರಕಾರ ಸಂಖ್ಯೆ 1.25 ಕೋಟಿ ಮೀರಿದೆ. ಅಂತಹ ಕಡಿಮೆ ಪ್ರಾತಿನಿಧ್ಯವು ದತ್ತಾಂಶ ಸಂಗ್ರಹವನ್ನು ವೈಜ್ಞಾನಿಕ ಅಥವಾ ವ್ಯವಸ್ಥಿತ ರೀತಿಯಲ್ಲಿ ನಡೆಸಲಾಗಿಲ್ಲ ಎಂದು ಸ್ಪಷ್ಟವಾಗಿ ಸೂಚಿಸುತ್ತದೆ ಎಂದು ಕಿಡಿಕಾರಿದ್ದಾರೆ.

ಚನ್ನಗಿರಿ ವಿಧಾನಸಭಾ ಕ್ಷೇತ್ರವೊಂದರಲ್ಲೇ ಸುಮಾರು 60,000 ಸಾದರ ಲಿಂಗಾಯತರು ವಾಸವಾಗಿದ್ದರೂ, ಲಿಂಗಾಯತ ಸಮುದಾಯದ ಸಾದರ ಉಪ ಪಂಗಡದ ಅಡಿಯಲ್ಲಿ ಕೇವಲ 67,000 ವ್ಯಕ್ತಿಗಳನ್ನು ಮಾತ್ರ ವರದಿ ಉಲ್ಲೇಖಿಸಿದೆ.

> **ಅಸ್ತಿತ್ವದಲ್ಲಿರುವ ರಾಜ್ಯ ಸರ್ಕಾರದ ಡೇಟಾಬೇಸ್‌ಗಳ ಡೇಟಾವನ್ನು ಮರು ಪರಿಶೀಲನೆಗಾಗಿ ಬಳಸಬೇಕು. ಫಲಿತಾಂಶದ ಡೇಟಾಸೆಟ್ ನಿಖರವಾಗಿ, ಪಕ್ಷಪಾತ ರಹಿತವಾಗಿದೆ, ಕರ್ನಾಟಕದ ನಿಜವಾದ ಸಾಮಾಜಿಕ ರಚನೆಯನ್ನು ಪ್ರತಿಬಿಂಬಿಸುತ್ತದೆ ಎಂದು ಪತ್ರದಲ್ಲಿ ಸಿದ್ದರಾಮಯ್ಯ ಅವರಿಗೆ ಶೋಭಾ ಕರಂದ್ಲಾಜೆ ಮನವರಿಕೆ ಮಾಡಿಕೊಟ್ಟಿದ್ದಾರೆ.**

ಈ ಅಸಂಗತತೆಗಳು ಸಮೀಕ್ಷೆಯ ಸಂಶೋಧನೆಗಳು, ನೆಲದ ವಾಸ್ತವಗಳ ನಡುವಿನ ಸಂಪರ್ಕ ಕಡಿತವನ್ನು ಎತ್ತಿ ತೋರಿಸುತ್ತವೆ ಎಂಬುದನ್ನು ಸಿಎಂ ಗಮನಕ್ಕೆ ತಂದಿದ್ದಾರೆ. ಇದಲ್ಲದೆ, ಪರಿಶಿಷ್ಟ ಜಾತಿಗಳು ಕರ್ನಾಟಕದಲ್ಲಿ ಅತಿ ದೊಡ್ಡ ಸಮುದಾಯವಾಗಿದ್ದು, ಸುಮಾರು 1.1 ಕೋಟಿ ಜನರು, 109 ಉಪ-ಜಾತಿಗಳನ್ನು ಹೊಂದಿದ್ದು, ಮುಸ್ಲಿಂ ಜನಸಂಖ್ಯೆ 12.6% ರಷ್ಟಿದೆ ಎಂದು ವರದಿ ಹೇಳುತ್ತದೆ. ಇದು ಮುಸ್ಲಿಮರನ್ನು ಹೆಚ್ಚಿಸಲು ಶಿಫಾರಸು ಮಾಡುತ್ತದೆ. ನ್ಯಾಯೋಚಿತ ಮತ್ತು ಅಂತರ್ಗತ ಪ್ರಾತಿನಿಧ್ಯವನ್ನು ಆಧರಿಸಿರುವ ಬದಲು ನಿರ್ದಿಷ್ಟ ಮತ ಬ್ಯಾಂಕ್‌ಅನ್ನು ಸಮಾಧಾನಪಡಿಸುವ ಗುರಿಯನ್ನು ಹೊಂದಿದೆ ಎಂದು ಶೋಭಾ ಟೀಕೆ ಮಾಡಿದ್ದಾರೆ. ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ದೃಢಪಡಿಸಿದಂತೆ ಜಾತಿ ಗಣತಿಯಿಂದ ರಾಜ್ಯದ ಬೊಕ್ಕಸಕ್ಕೆ 169 ಕೋಟಿ ರೂಪಾಯಿ ನಷ್ಟವಾಗಿದೆ ಎಂದು ವರದಿಯಾಗಿದೆ. ದೋಷಗಳು ಮತ್ತು ತಪ್ಪುಗಳಿಂದ ಕೂಡಿದ ಸಮೀಕ್ಷೆಯ ಇಂತಹ ಮಹತ್ವದ ಖರ್ಚು, ಅದರ ಉದ್ದೇಶ ಮತ್ತು ಉಪಯುಕ್ತತೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ. ಜಾತಿ ಗಣತಿಗೆ ಸಂಬಂಧಿಸಿದ ವಿಧಾನಗಳು, ಸಂಶೋಧನೆಗಳು ಮತ್ತು ವೆಚ್ಚಗಳನ್ನು ವಿವರಿಸುವ ಶ್ವೇತ ಪತ್ರವನ್ನು ಸರ್ಕಾರ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಹಲವಾರು ಧಾರ್ಮಿಕ ಮತ್ತು ಸಮುದಾಯದ ಮುಖಂಡರು ಈಗಾಗಲೇ ವರದಿಯ ಬಗ್ಗೆ ಅಸಮತಿ ವ್ಯಕ್ತಪಡಿಸಿದ್ದಾರೆ. ಇದರಲ್ಲಿ ಅವೈಜ್ಞಾನಿಕ, ಪಕ್ಷಪಾತ, ಅಪೂರ್ಣ, ಪಾರದರ್ಶಕತೆಯ ಕೊರತೆ ಇದೆ ಎಂದು ಕರೆದಿದ್ದಾರೆ. ವರದಿಯು ಸಾಮಾಜಿಕ ನ್ಯಾಯದ ಕಡೆಗೆ ಒಂದು ಹೆಜ್ಜೆ ಹೋಗುವುದಕ್ಕಿಂತ ಹೆಚ್ಚಾಗಿ ರಾಜಕೀಯ ಕಾರ್ಯಸೂಚಿಯನ್ನು ಪೂರೈಸುತ್ತದೆ ಎಂದು ಶೋಭಾ ಕರಂದ್ಲಾಜೆ ಕಿಡಿಕಾರಿದ್ದಾರೆ.



### ತಾಜಾ, ವೈಜ್ಞಾನಿಕ, ನಿಷ್ಪಕ್ಷಪಾತ ಸಮೀಕ್ಷೆಯನ್ನು ನಡೆಸಬೇಕೆಂದು

**1948ರ ಜನಗಣತಿ ಕಾಯಿದೆಯಡಿ ಪೂರ್ಣ ಪ್ರಮಾಣದ ಜಾತಿ ಗಣತಿಯನ್ನು ನಡೆಸಲು ಕೇಂದ್ರ ಸರ್ಕಾರಕ್ಕೆ ಮಾತ್ರ ಅಧಿಕಾರವಿದೆ ಎಂಬುದನ್ನು ಪುನರುಚ್ಚರಿಸುವುದು ಮುಖ್ಯವಾಗಿದೆ. ರಾಜ್ಯ ಸರ್ಕಾರಗಳು ಸಮೀಕ್ಷೆಗಳನ್ನು ನಡೆಸಬಹುದಾದರೂ, ಈ ಕಾರ್ಯವನ್ನು ಅಧಿಕೃತ ಜನಗಣತಿಯಾಗಿ ಪ್ರಸ್ತುತಪಡಿಸುವ ಯಾವುದೇ ಪ್ರಯತ್ನವು ಅಸಾಂವಿಧಾನಿಕ, ಕಾನೂನು ಬಾಹಿರವಾಗಿದೆ ಎಂಬುದನ್ನು ಒತ್ತಿ ಹೇಳಿದ್ದಾರೆ. ಈ ಕಾಳಜಿಯ ಹಿನ್ನೆಲೆಯಲ್ಲಿ ಪ್ರಸ್ತುತ ಜಾತಿ ಗಣತಿ ವರದಿಯನ್ನು ತಿರಸ್ಕರಿಸಬೇಕೆಂದು ನಾನು ರಾಜ್ಯ ಸರ್ಕಾರವನ್ನು ಬಲವಾಗಿ ಒತ್ತಾಯಿಸುತ್ತೇನೆ. ತಾಜಾ, ವೈಜ್ಞಾನಿಕ, ನಿಷ್ಪಕ್ಷಪಾತ ಸಮೀಕ್ಷೆಯನ್ನು ನಡೆಸಬೇಕೆಂದು ನಾನು ವಿನಂತಿಸುತ್ತೇನೆ. ಈ ಹೊಸ ಸಮೀಕ್ಷೆಯು ಆಧಾರ್-ಸಂಯೋಜಿತ ನಾಗರಿಕ ಪರಿಶೀಲನೆಯನ್ನು ಆಧರಿಸಿರಬೇಕು, ಪ್ರತಿಯೊಬ್ಬ ವ್ಯಕ್ತಿಯ ತಿಳಿವಳಿಕೆಯುಳ್ಳ ಒಪ್ಪಿಗೆಯೊಂದಿಗೆ ನಡೆಸಬೇಕು.**

# ‘ಬೆಲೆ ಏರಿಕೆ’ ವಿರುದ್ಧ ಬೀದಿಗಿಳಿದು ಕಾಂಗ್ರೆಸ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕೇಂದ್ರ ಸರ್ಕಾರದ ನೀತಿಗಳಿಂದ ದೇಶದಲ್ಲಿ ಜೀವನಾವಶ್ಯಕ ವಸ್ತುಗಳ ಬೆಲೆ ದುಬಾರಿಯಾಗಿದೆ ಎಂದು ಆರೋಪಿಸಿ ಕಾಂಗ್ರೆಸ್ ಗುರುವಾರ ನಗರದ ಫ್ರೀಡಂಪಾರ್ಕ್‌ನಲ್ಲಿ ರಾಜ್ಯಮಟ್ಟದ ಬೃಹತ್ ಪ್ರತಿಭಟನೆ ನಡೆಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ಸಚಿವರಾದ ಹೆಚ್.ಕೆ.ಪಾಟೀಲ್, ಹೆಚ್.ಸಿ.ಮಹದೇವಪ್ಪ, ಕೃಷ್ಣಬೈರೇಗೌಡ, ಈಶ್ವರ್ ಖಂಡ್ರೆ, ರಾಮಲಿಂಗಾರೆಡ್ಡಿ, ಚಲುವರಾಯಸ್ವಾಮಿ, ಬೈರತಿ ಸುರೇಶ್, ಕೆ.ಜೆ. ಜಾರ್ಜ್, ಕೆ.ಹೆಚ್.ಮುನಿಯಪ್ಪ ಸೇರಿದಂತೆ ಅನೇಕ ಸಚಿವರು, ಶಾಸಕರು, ಕಾಂಗ್ರೆಸ್ ನಾಯಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಬೇಕಿತ್ತಾ ದುಬಾರಿ ಬೆಲೆ ಏರಿಕೆಯ ಸರ್ಕಾರ ಎಂದು ಪ್ರತಿಭಟನಾಕಾರರು ಕೇಂದ್ರದ ಬಿಜೆಪಿ ಸರ್ಕಾರವನ್ನು ಪ್ರಶ್ನಿಸಿದರು. ಪ್ರತಿಭಟನೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸರ್ಕಾರ ನಿರುದ್ಯೋಗ, ಬೆಲೆ ಏರಿಕೆಯ ಬಗ್ಗೆ ಮಾತನಾಡುವುದಿಲ್ಲ. ಪ್ರತಿಭಾರಿಯೂ ಸುಳ್ಳಗಳ ಮೂಲಕ ಜನರನ್ನು ದಾರಿ ತಪ್ಪಿಸುವ ಯತ್ನ ನಡೆಸುತ್ತಿದ್ದಾರೆ. ಬಿಜೆಪಿಯಿಂದ ನಡೆಸುತ್ತಿರುವ ಜನಾಕ್ರೋಶ ಯಾತ್ರೆ ಜನರ ಸಿಟ್ಟಿಗೆ ಕಾರಣವಾಗಿದೆ ಎಂದು ಕಿಡಿಕಾರಿದರು.


> **ಬಿಜೆಪಿ-ಜೆಡಿಎಸ್ ಪಕ್ಷಗಳಿಗೆ ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆಗಳನ್ನು ಸಹಿಸಿಕೊಳ್ಳಲಾಗುತ್ತಿಲ್ಲ. ಅದಕ್ಕಾಗಿ ಪ್ರತಿ ದಿನ ಅಪಪ್ರಚಾರ ಮಾಡುತ್ತಿದ್ದಾರೆ. ಆದರೆ ಜನರಿಗೆ ವಾಸ್ತವತೆ ಗೊತ್ತಿದೆ ಎಂದರು. ಸಚಿವ ಕೃಷ್ಣ ಬೈರೇಗೌಡ, ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಡೀಸೆಲ್ ಬೆಲೆ 500 ಪಟ್ಟು, ಪೆಟ್ರೋಲ್ ಬೆಲೆ 250 ಪಟ್ಟು ಹೆಚ್ಚಾಗಿದೆ. ಅಡುಗೆ ಅನಿಲ ದರ 400 ರೂಪಾಯಿನಿಂದ 900 ರೂ. ಆಗಿದೆ**
> 
> **-ಡಿ.ಕೆ.ಶಿವಕುಮಾರ್, ಡಿಸಿಎಂ**

ಕಾಂಗ್ರೆಸ್ ಸರ್ಕಾರ ಬೆಲೆ ಏರಿಕೆಯಿಂದ ತತ್ತರಿಸಿರುವ ಜನರ ನೆರವಿಗಾಗಿ ಐದು ಗ್ಯಾರಂಟಿಗಳನ್ನು ನೀಡಲಾಗುತ್ತಿದೆ. ಬಿಜೆಪಿ-ಜೆಡಿಎಸ್‌ನವರು ಜನಪರ ಯೋಜನೆಗಳನ್ನು ಟೀಕಿಸಿದರು. ಈ ಮೂಲಕ ವಿರೋಧ ಪಕ್ಷಗಳ ನಾಯಕರು ಜನ ಸಾಮಾನ್ಯರ ಪರವಾದ ಕಾರ್ಯಕ್ರಮಗಳಿಗೆ ಅಡ್ಡಿ ಪಡಿಸಲು ಯತ್ನಿಸಿದರು ಎಂದು ಆರೋಪಿಸಿದರು.

ಶ್ರೀಮಂತರ ಮೇಲಿನ ತೆರಿಗೆಯನ್ನು ಕಡಿಮೆ ಮಾಡಿ, ಜನ ಸಾಮಾನ್ಯರ ಮೇಲೆ ದುಬಾರಿ ತೆರಿಗೆ ಹಾಕಿ ಬೆಲೆ ಹೆಚ್ಚಿಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು. ಪ್ರತಿಭಟನೆಯಲ್ಲಿ ದಿನನಿತ್ಯ ವಸ್ತುಗಳ ಬೆಲೆ ಏರಿಕೆ ವಿರುದ್ಧ ಘೋಷಣೆಗಳನ್ನು ಕೂಗಲಾಯಿತು, ಬಿಜೆಪಿವತಿಯಿಂದ ನಡೆಸಲಾಗುತ್ತಿರುವ ಜನಾಕ್ರೋಶ ಯಾತ್ರೆಯನ್ನು ಕಾಂಗ್ರೆಸ್ಸಿಗರು ಲೇವಡಿ ಮಾಡಿದರು. ಎಐಸಿಸಿ ಪ್ರಮುಖರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ವಿರುದ್ಧ ಜಾರಿ ನಿರ್ದೇಶನಾಲಯದಿಂದ ದೋಷಾರೋಪಣಾ ಪಟ್ಟಿ ಸಲ್ಲಿಸಿರುವುದನ್ನು ಖಂಡಿಸಲಾಯಿತು.

# ಜಾತಿ ಗಣತಿ ವಿವರ ಸಲ್ಲಿಸಲು ಆನ್‌ಲೈನ್ ಅರ್ಜಿ ಕರೆಯಿರಿ

• ಉದಯವಾಹಿನಿ, ಬೆಂಗಳೂರು
• ವೀರೇಶ ಧೂಪದಮಠ



ಉದಯವಾಹಿನಿ ಚಿತ್ರ

ಜಾತಿ ಗಣತಿ ವರದಿ ನೋಡಿದಾಗ ಇದು ಧರ್ಮ ಗಣತಿಯೋ ಜಾತಿ ಗಣತಿಯೋ ಎನ್ನುವುದು ತಿಳಿಯುತ್ತಿಲ್ಲ. ಹಾಗಾಗಿ ಜನರಿಗೆ ಸ್ವ ಇಚ್ಛೆಯಿಂದ ಹೇಗೆ ಆಧಾರ ಕಾರ್ಡ್, ಪಾನ್ ಕಾರ್ಡ್, ರೇಷನ್ ಕಾರ್ಡ್ ಸೇರಿದಂತೆ ಇನ್ನಿತರ ಸರ್ಕಾರಿ ದಾಖಲೆಗಳನ್ನು ಪಡೆಯಲು ಆನ್‌ಲೈನ್‌ನಲ್ಲಿ ಅರ್ಜಿ ಹಾಕಲಾಗುತ್ತಿದೆಯೋ, ಅದೇ ರೀತಿ ಆಧಾರ ಕಾರ್ಡ್ ಮೂಲ ದಾಖಲೆಯನ್ನಾಗಿ ಅಪ್ಲೋಡ್ ಮಾಡಿ, ಜಾತಿ ಗಣತಿ ವಿವರವನ್ನು ಸ್ವ ಇಚ್ಛೆಯಿಂದ ಜನರಿಂದ ಆನ್‌ಲೈನಲ್ಲಿ ಅರ್ಜಿ ಹಾಕಿ ಸಲ್ಲಿಸುವಂತೆ ಪ್ರೇರೇಪಿಸಬೇಕು.

ಆನ್ ಲೈನ್ ನಲ್ಲಿ ಹಾಕಿದ ಅರ್ಜಿಯನ್ನು ಪರಿಶೀಲಿಸಲು ಗ್ರಾಮ ಮಟ್ಟದ ಗ್ರಾ.ಪಂ ಸದಸ್ಯರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಗ್ರಾಮೀಣ ಅಂಗವಿಕಲರ ಪುನರ್ವಸತಿ ಕಾರ್ಯಕರ್ತರು ಸೇರಿದಂತೆ ಸ್ಥಳೀಯ ಆಡಳಿತ ಸಂಸ್ಥೆಗಳಿಂದ ಪರಿಶೀಲಿಸಿ, ಅಂಗೀಕರಿಸಬೇಕು. ನಗರ ಮಟ್ಟದಲ್ಲಿ ಸ್ಥಳೀಯ ಆಡಳಿತದಿಂದ ಪರಿಶೀಲಿಸಿ ಅಂಗೀಕರಿಸಬೇಕು. ಇದರಿಂದ ಯಾವುದೇ ರೀತಿಯ ತೊಂದರೆ, ಅಡೆ ತಡೆ ಆಗುವುದಿಲ್ಲ. ಜಾತಿಯಲ್ಲಿ ಪಂಥ ಬರುತ್ತದೆ ಪಂಥದಲ್ಲಿ ಜಾತಿ ಬರುತ್ತದೆ. **ಉದಾ:** ಪಂಥ ವೀರಶೈವ ಲಿಂಗಾಯತ ಜಾತಿ ಬೇಡ ಜಂಗಮ. ಇದೇ ರೀತಿಯ ಪಂಥದಲ್ಲಿ ಹಲವು ಜಾತಿ ಬರಲಿದೆ. ಇಲ್ಲಿ ಜಾತಿ ಗಣತಿ ಎಂದಮೇಲೆ ಧರ್ಮ ಕಾಣಿಸಬಾರದು ಪಂಥ ಅಥವಾ ಜಾತಿ ಎಂದು ನಮೂದಿಸಬೇಕು. ಧರ್ಮ ಹೇಗೆ ಜಾತಿ ಆಗಲಿದೆ. ಧರ್ಮವೇ ಬೇರೆ, ಜಾತಿಯೋ ಬೇರೆ. ಹಾಗಾಗಿ ಜನರಿಗೆ ಸ್ವ ಇಚ್ಛೆಯಿಂದ ಜಾತಿ ಗಣತಿ ವಿವರ ಅನ್ ಲೈನಿನಲ್ಲಿ ಸಲ್ಲಿಸಿ, ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ-ಅಧಿಕಾರಿಗಳಿಂದ ಅಂಗೀಕರಿಸುವಂತಹ ವ್ಯವಸ್ಥೆ ಸರ್ಕಾರ ಮಾಡಬೇಕು.

# ಶಕ್ತಿ ಯೋಜನೆ ಫಲಾನುಭವಿಗಳಿಗೆ ಸ್ಮಾರ್ಟ್ ಕಾರ್ಡ್ ನೀಡಲು ಮುಂದಾದ ಸರ್ಕಾರ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರ ಮಹಿಳೆಯರಿಗಾಗಿ ಜಾರಿ ಮಾಡಲಾಗಿದ್ದ ಶಕ್ತಿ ಯೋಜನೆ ಯನ್ನು ಸರಳೀಕರಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಶೀಘ್ರದಲ್ಲೇ ಫಲಾನುಭವಿಗಳಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಿದೆ. ಇದರಿಂದ ಮಹಿಳೆಯರಿಗೆ ಆಧಾರ್ ಕಾರ್ಡ್ ಇಟ್ಟುಕೊಂಡು ಪ್ರಯಾಣ ಮಾಡುವ ಕಿರಿಕಿರಿ ತಪ್ಪಲಿದೆ. ಸಾರಿಗೆ ಬಸ್‌ನಲ್ಲಿ ಪ್ರಯಾಣಿಸುವ ರಾಜ್ಯದ ಮಹಿಳೆಯರು ಇನುಂದೆ ಸ್ಮಾರ್ಟ್ ಕಾರ್ಡ್ ತೋರಿಸಿದ್ರೆ ಸಾಕು, ಆಧಾರ್ ಕಾರ್ಡ್ ತೆಗೆದುಕೊಂಡು ಹೋಗುವ ಅಗತ್ಯವಿಲ್ಲ.

ಇನ್ನೆರಡು ತಿಂಗಳಲ್ಲಿ ಮಹಿಳೆಯರಿಗೆ ಸ್ಮಾರ್ಟ್ ಕಾರ್ಡ್ ಉಚಿತವಾಗಿ ಕೈಸೇರಲಿದೆ. ಈಗಾಗಲೇ ಹಣಕಾಸು ಇಲಾಖೆಗೆ ಕಡತ ಹೋಗಿದ್ದು ಅನುಮತಿ ಒಂದೇ ಬಾಕಿ ಇದೆ ಎಂದು ಹೇಳಲಾಗುತ್ತಿದೆ. ಟೆಂಡರ್ ಕೂಡ ಕರೆಯಲು ಸಾರಿಗೆ ಇಲಾಖೆ ಮುಂದಾಗಿದೆ. ಮಹಿಳೆಯರು ಸ್ಮಾರ್ಟ್ ಕಾರ್ಡ್ ಬೇಕು ಅಂದರೆ, ಗ್ರಾಮ ಒನ್, ಬೆಂಗಳೂರು ಒನ್‌ನಲ್ಲಿ ಅರ್ಜಿ ಹಾಕಿದರೆ, ಸ್ಮಾರ್ಟ್ ಕಾರ್ಡ್ ಸಿಗಲಿದೆ. ಇನ್ನೆರಡು ತಿಂಗಳಲ್ಲಿ ಸ್ಮಾರ್ಟ್ ಕಾರ್ಡ್ ಸಿಗಲಿದೆ. ಸರ್ಕಾರದಿಂದ




ಪ್ರತ್ಯೇಕ ಸ್ಮಾರ್ಟ್ ಕಾರ್ಡ್‌ಗಳ ವಿತರಣೆ ಇರಲ್ಲ. ಸ್ಮಾರ್ಟ್ ಕಾರ್ಡ್ ಪಡೆಯುವ ವೇಳೆ ನಕಲಿ ಆಧಾರ್ ಕಾರ್ಡ್ ನೀಡಿ ತಗಲಾಗಿಕೊಂಡರೆ ನಿಮ ಅರ್ಜಿಯನ್ನೇ ರದ್ದುಗೊಳಿಸುವ ಸಾಧ್ಯತೆ ಇರಲಿದೆ. ಪ್ರಿಂಟ್ ಆದ ಮಾಹಿತಿಯುಳ್ಳ ದಾಖಲೆಯೇ ಸ್ಮಾರ್ಟ್ ಕಾರ್ಡ್ ಆಗಿರಲಿದೆ. ಮಾಸಿಕ ಪಾಸಿನಂತೆ ಪ್ರತ್ಯೇಕ ಪಾಸ್ ವಿತರಣೆ ಇರಲ್ಲ. ಅರ್ಜಿ ಸಲ್ಲಿಸಿದ ಕೂಡಲೇ ನೀಡಲಾಗುವ ಪ್ರಿಂಟ್‌ಔಟ್ ಅನ್ನು ಸ್ಮಾರ್ಟ್ ಕಾರ್ಡ್ ಎಂದು ಪರಿಗಣಿಸಲಾಗುತ್ತದೆ.ಸೇವಾಸಿಂಧು ವೆಬ್ ಸೈಟ್‌ನಲ್ಲಿ ಅರ್ಜಿ ಸಲ್ಲಿಕೆಗೆ ಅವಕಾಶ ನೀಡಲಾಗುತ್ತದೆ. ಆಧಾರ್ ಕಾರ್ಡ್‌ನ್ನು ದಾಖಲೆಯಾಗಿ ಪರಿಗಣಿಸಿ ರಾಜ್ಯದ ಮಹಿಳೆಯರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲಾಗತ್ತದೆ. ಸೇವಾಕೇಂದ್ರದಲ್ಲಿಯೇ ಸ್ಮಾರ್ಟ್ ಕಾರ್ಡ್ ಪ್ರಿಂಟ್ ಹಾಕಲಾಗುತ್ತದೆ.

ನಮ ರಾಜ್ಯದ ನಿವಾಸಿಗೆ ಮಾತ್ರ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತದೆ. ಆಧಾರ್ ಕಾರ್ಡ್‌ನಲ್ಲಿ ಕೇವಲ ಕರ್ನಾಟಕದೊಳಗಿನ ವಿಳಾಸ ಇರಬೇಕು. ಶಕ್ತಿ ಯೋಜನೆಯ ಲಾಭಕ್ಕಾಗಿ ಆಧಾರ್ ಕಾರ್ಡ್‌ನಲ್ಲಿ ವಿಳಾಸ ಬದಲಿಸಿಕೊಂಡರೆ ಸ್ಮಾರ್ಟ್ ಕಾರ್ಡ್ ಸಿಗೋದು ಅನುಮಾನ ಎಂದು ಹೇಳಲಾಗುತ್ತಿದೆ.

# ಕ್ಯೂಆರ್‌ಕೋಡ್ ಮೂಲಕ ಮುಖ ಚಹರೆ ಪತ್ತೆ ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು

ಸಾಮಾನ್ಯ ಪ್ರವೇಶ ಪರೀಕ್ಷೆ, ನಡೆಯುತ್ತಿರುವ ಬೆಂಗಳೂರಿನ ಮಲ್ಲೇಶ್ವರದ 18ನೇ ಅಡ್ಡರಸ್ತೆಯ ಸರ್ಕಾರಿ ಪಿಯು ಕಾಲೇಜಿನ ಕೇಂದ್ರಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಅವರು ಗುರುವಾರ ಖುದ್ದು ಭೇಟಿ ನೀಡಿ ಪರಿಶೀಲಿಸಿದರು. ಕೆಇಎ ಅಭಿವೃದ್ಧಿಪಡಿಸಿರುವ ಹಾಗೂ ಇದೇ ಮೊದಲ ಬಾರಿಗೆ ಜಾರಿಗೆ ತಂದಿರುವ ಕ್ಯೂಆರ್ ಕೋಡ್ ಮೂಲಕ ಮುಖ ಚಹರೆ ಪತ್ತೆ ವ್ಯವಸ್ಥೆಯನ್ನು ಪರಿಶೀಲಿಸಿದರು. ಸ್ವತಃ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ವಿದ್ಯಾರ್ಥಿಗಳ ಭಾವಚಿತ್ರ ತೆಗೆದು ನೈಜತೆ ಪರಿಶೀಲಿಸಿದರು. ಗುರುವಾರ ಬೆಳಿಗ್ಗೆಯಿಂದಲೇ ಈ ವ್ಯವಸ್ಥೆ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಿದ್ದು, ಎಲ್ಲ ಅಭ್ಯರ್ಥಿಗಳ ನೈಜತೆಯನ್ನು ಇದರ ಮೂಲಕವೇ ಪರಿಶೀಲಿಸಿ, ಅಭ್ಯರ್ಥಿಗಳನ್ನು ಒಳಗೆ ಬಿಡಲಾಗಿದೆ ಎಂದು ಎಚ್.ಪ್ರಸನ್ನ ತಿಳಿಸಿದರು. ಈ ಸಂದರ್ಭದಲ್ಲಿ ಕೆಇಎ ಆಡಳಿತಾಧಿಕಾರಿ ಇಸ್ಲಾವುದ್ದೀನ್ ಗದ್ಯಾಳ ಅವರು ಕೂಡ ಹಾಜರಿದ್ದರು.

ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಂಡಿದ್ದ ಒಟ್ಟು 3,21,895 ವಿದ್ಯಾರ್ಥಿಗಳ ಪೈಕಿ 3,11,777 ಮಂದಿ ಪರೀಕ್ಷೆಗೆ ಹಾಜರಾಗಿದ್ದರು. ಬೆಳಗಿನ ಅವಧಿಯಲ್ಲಿ ನಡೆದ ಭೌತವಿಜ್ಞಾನ ಪತ್ರಿಕೆಗಿಂತ ಮಧ್ಯಾಹ್ನ ನಡೆದ ರಸಾಯನ ವಿಜ್ಞಾನ ಪತ್ರಿಕೆಯನ್ನು 183 ಮಂದಿ ಹೆಚ್ಚಿಗೆ ಬರೆದಿದ್ದಾರೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಗುರುವಾರ ಬೆಳಗಿನ ಅವಧಿಯಲ್ಲಿ ಗಣಿತ ಪರೀಕ್ಷೆ ನಡೆದಿದ್ದು, ಮಧ್ಯಾಹ್ನ ಜೀವವಿಜ್ಞಾನ ಪತ್ರಿಕೆಯ ಪರೀಕ್ಷೆ ನಡೆಯಲಿದೆ. ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಹೊರನಾಡು, ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಮಂಗಳವಾರ ನಡೆಸಿದ ಕನ್ನಡ ಭಾಷಾ ಪರೀಕ್ಷೆಗೆ 1,958 ಮಂದಿ ವಿದ್ಯಾರ್ಥಿ ಗಳು ಹಾಜರಾಗಿದ್ದರು ಎಂದು ತಿಳಿಸಿದ್ದಾರೆ.

# ಸಮೀಕ್ಷಾ ವರದಿ ಸೋರಿಕೆ ಕುರಿತು ತನಿಖೆಗೆ ಎಚ್‌ಡಿಕೆ ಆಗ್ರಹ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ಸರ್ಕಾರಕ್ಕೆ ಸಲ್ಲಿಸಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯ ಸೋರಿಕೆ ಬಗ್ಗೆ ತಪ್ಪದೇ ತನಿಖೆ ಮಾಡಿಸಿ ಎಂದು ಕೇಂದ್ರದ ಬೃಹತ್ ಕೈಗಾರಿಕೆ, ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸಿದ್ದರಾಮಯ್ಯ ಅವರನ್ನು ಆಗ್ರಹಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಆಯೋಗದಿಂದ ಸೋರಿಕೆ ಆಯಿತಾ?, ಸಂಪುಟದಲ್ಲಿ ಸಚಿವರ ಕೈ ಸೇರಿದ ಮೇಲೆ ಸೋರಿಕೆ ಆಯಿತಾ? ಅಥವಾ ನಿಮ ಗ್ಯಾಂಗ್ ಕೈ ಚಳಕವಾ? ತನಿಖೆ ಬಗ್ಗೆ ಸಂಪುಟ ಸಭೆಯಲ್ಲಿ ತೀರ್ಮಾನ ಮಾಡುತ್ತೀರಾ? ನೀವೇ ಹೇಳಬೇಕು ಎಂದು ಅವರು ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



> **ಸಮೀಕ್ಷಾ ವರದಿ ಸೋರಿಕೆಗೆ ನಿಮ ಸರ್ಕಾರವೇ ಹೊಣೆ, ಸಂಶಯವೇ ಇಲ್ಲ. ಯಾವುದೇ ಕಾರಣಕ್ಕೂ ಸೋರಿಕೆಯಾದ ಈ ವರದಿಯನ್ನು ಸಂಪುಟದಲ್ಲಿ ಮಂಡಿಸಲೇ ಬಾರದು. ಮಂಡಿಸಿ ಸಂಪುಟದ ಪಾವಿತ್ರ್ಯ ಹಾಳು ಮಾಡಬೇಡಿ**
> 
> **- ಹೆಚ್.ಡಿ.ಕುಮಾರಸ್ವಾಮಿ, ಸಚಿವ**

ನೆಮದಿಯಾಗಿದ್ದ ರಾಜ್ಯಕ್ಕೆ ಬೆಂಕಿ ಹಾಕಿದ್ದೀರಿ, ಜಾತಿಗಳ ಮಧ್ಯೆ ವಿಷಬೀಜ ಬಿತ್ತಿದ್ದೀರಿ. ನಿಮ ದುರುದ್ದೇಶ, ದುಷ್ಟತನದ ಪರಾಕಾಷ್ಠೆ ಇದು. ಸರ್ವ ಜನಾಂಗದ ಶಾಂತಿಯ ತೋಟಕ್ಕೆ ಕೊಳ್ಳಿ ಇಟ್ಟ ಪಾಪ ಸುಮನೆ ಬಿಡುವುದಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಂತೂ ಅನುಮಾನ ನಿಜವಾಯಿತು. ರಾಜ್ಯ ಮಾಡಿದ್ದು ಜಾತಿ ಗಣತಿ. ಮುಖ್ಯಮಂತ್ರಿ ಮಹೋದಯರ ಪ್ರಕಾರ ಅದು ಶೈಕ್ಷಣಿಕ, ಆರ್ಥಿಕ ಸಮೀಕ್ಷೆ. ಸಿದ್ದರಾಮಯ್ಯನವರು ಈಗ ಉಲ್ಟಾ ಹೊಡೆದಿದ್ದಾರೆ. ಅದು ಜಾತಿ ಸಮೀಕ್ಷೆ ಅಲ್ಲ. ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಎಂದು ಹೊಸ ಪೀಪಿ ಊದುತ್ತಿದ್ದಾರೆ ಎಂದು ಹೆಚ್‌ಡಿಕೆ ವ್ಯಂಗ್ಯವಾಡಿದ್ದಾರೆ.

**ಲಾರಿ ಮುಷ್ಕರ ಮೂರನೇ ದಿನಕ್ಕೆ ಕಾಲಿಟ್ಟಿದೆ** | **ಸರಕು ಸಾಗಾಟದಲ್ಲಿ ಭಾರಿ ವ್ಯತ್ಯಯ**

# ಮುಗಿಯದ ಲಾರಿ ಮುಷ್ಕರ, ಅಗತ್ಯ ವಸ್ತುಗಳ ಅಭಾವ

• ಉದಯವಾಹಿನಿ, ಬೆಂಗಳೂರು

ಡೀಸೆಲ್ ಬೆಲೆ ಏರಿಕೆ ವಿರೋಧಿಸಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಡೆಸುತ್ತಿರುವ ಲಾರಿ ಮುಷ್ಕರ ಮೂರನೇ ದಿನಕ್ಕೆ ಕಾಲಿಟ್ಟಿದ್ದು ಸರಕು ಸಾಗಾಟದಲ್ಲಿ ಭಾರಿ ವ್ಯತ್ಯಯ ಕಂಡು ಬಂದಿದ್ದು ಅಗತ್ಯ ವಸ್ತುಗಳ ಅಭಾವ ತಲೆದೋರಿದೆ.ಲಾರಿಗಳ ಅನಿರ್ದಿಷ್ಟಾವಧಿ ಮುಷ್ಕರದಿಂದ ರೈತರು, ವರ್ತಕರು ವಿವಿಧ ಉದ್ಯಮಿಗಳು ಸಂಕಷ್ಟಕ್ಕೆ ಈಡಾಗುವಂತಾಗಿದೆ. ಹೊರ ರಾಜ್ಯಗಳಿಂದ ಬರುವ ಹಣ್ಣು, ತರಕಾರಿ, ಸೊಪ್ಪು, ದಿನನಿತ್ಯದ ಪದಾರ್ಥಗಳ ಮೇಲೆ ಭಾರಿ ಪರಿಣಾಮ ಬೀರಿದೆ.

ಮುಷ್ಕರದಿಂದ ಮನೆ ನಿರ್ಮಾಣ ಕಾಮಗಾರಿಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ. ಅಕ್ಕಿ,ಬೇಳೆ,ಎಣ್ಣೆ ಸೇರಿದಂತೆ ದಿನನಿತ್ಯ ಪದಾರ್ಥಗಳ ವಹಿವಾಟಿನ ಮೇಲೂ ಮುಷ್ಕರದ ಬಿಸಿ ತಟ್ಟಿದೆ. ಅಗತ್ಯ ವಸ್ತುಗಳ ಲಭ್ಯತೆ, ಇಂಧನ ಪೂರೈಕೆಯಲ್ಲಿ ಕೊರತೆ ಉಂಟಾಗುವ ಆತಂಕ ಎದುರಾಗಿದೆ.


ಉದಯವಾಹಿನಿ ಚಿತ್ರ

### ವಾಹನಗಳು ಸಂಪೂರ್ಣ ಸ್ಥಗಿತ

**ಸರಕು ಸಾಗಣಿಕೆ ವಾಹನಗಳು ಸಂಪೂರ್ಣ ಸ್ಥಗಿತಗೊಂಡಿರುವುದರಿಂದ ಹಳ್ಳಿಗಳಿಂದ ಹಣ್ಣು, ತರಕಾರಿ ಮತ್ತಿತರ ವಸ್ತುಗಳು ಸಾಗಾಟವಾಗದೆ ಕೊಳೆಯತೊಡಗಿವೆ. ಎಲ್‌ಪಿಜಿ ಗ್ಯಾಸ್, ಗೃಹ ಬಳಕೆ ಗ್ಯಾಸ್, ದಿನಸಿ, ಜಲ್ಲಿ, ಮರಳು, ಕಬ್ಬಿಣ ಸೇರಿದಂತೆ ಅನೇಕ ಬಗೆಯ ಸರಕು ಸಾಗಾಣಿಕೆಯಲ್ಲಿ ವ್ಯತ್ಯಯವಾಗಿದೆ.**

ಗುರುವಾರ ಮಧ್ಯಾಹ್ನ ಲಾರಿ ಮಾಲೀಕರು, ಏಜೆಂಟರ ಸಂಘದ ಅಧ್ಯಕ್ಷ ಜಿ.ಆರ್.ಷಣುಗಪ್ಪ, ಪದಾಧೀಕಾರಿಗಳು, ಸಾರಿಗೆ ಸಚಿವ ರಾಮಲಿಂಗರೆಡ್ಡಿ ರವರಿಗೆ ಮತ್ತೊಂದು ಸುತ್ತಿನ ಮಾತುಕತೆ ನಡೆಸಲಿದ್ದಾರೆ. ಬೇಡಿಕೆ ಈಡೇರದಿದ್ದರೆ ಹೋರಾಟವನ್ನು ತೀವ್ರಗೊಳಿಸುವ ಎಚ್ಚರಿಕೆ ನೀಡಿದ್ದಾರೆ. ಗೂಡ್ಸ್ ವಾಹನಗಳು ಟ್ರಕ್ ಸೇರಿ 6 ಲಕ್ಷಕ್ಕೂ ಹೆಚ್ಚು ವಾಹನಗಳು ರಸ್ತೆಗೆ ಇಳಿದಿಲ್ಲ. ಚಾಲಕರು ಕ್ಲೀನರ್ ಅವಲಂಭಿತರು ಸೇರಿ ಲಕ್ಷಾಂತರ ಜನ ಲಾರಿಗಳನ್ನು ನಂಬಿ ಬದುಕುತ್ತಿದ್ದಾರೆ.

**ರೈತರು ವರ್ತಕರು ಸಂಕಷ್ಟಕ್ಕೆ**

**ಡೀಸೆಲ್, ಟೋಲ್ ದರ ಇಳಿಕೆ ಮಾಡುವಂತೆ ಲಾರಿ ಮಾಲೀಕರು ಸರ್ಕಾರಕ್ಕೆ ಮನವಿ ಮಾಡಿ ಮುಖ್ಯಮಂತ್ರಿಯೊಂದಿಗೆ ಮಾತುಕತೆ ನಡೆಸಿದರೂ. ಸರ್ಕಾರದಿಂದ ಯಾವುದೇ ಭರವಸೆ ಸಿಗದ ಹಿನ್ನೆಲೆಯಲ್ಲಿ ಮುಷ್ಕರವನ್ನು ಮುಂದುವರೆಸಿದ್ದು, ಶ್ರೀಸಾಮಾನ್ಯರ ಜೀವನದ ಮೇಲೆ ಮುಷ್ಕರದ ಬಿಸಿ ತಟ್ಟಲಿದೆ. ಲಾರಿ ಮುಷ್ಕರದ ಬಿಸಿ ನೆರೆಯ ಆಂಧ್ರಪ್ರದೇಶ, ತಮಿಳುನಾಡು, ಕೇರಳ, ಗೋವಾ ರಾಜ್ಯಗಳಿಗೂ ತಟ್ಟಿದೆ. ಹೊರ ರಾಜ್ಯಗಳಿಂದ ಬರುತ್ತಿರುವ ಹಣ್ಣು, ತರಕಾರಿ, ವಿವಿಧ ಬಗೆಯ ಪದಾರ್ಥಗಳು ಸ್ಥಗಿತಗೊಂಡು ರೈತರು, ವರ್ತಕರು ಸಂಕಷ್ಟಕ್ಕೆ ಸಿಲುಕಿದ್ದಾರೆ.**

**ಅಧಿಕಾರಿಗಳ ಅನಗತ್ಯ ಕಿರುಕುಳ ತಪ್ಪಿಸಿ**

ಸರ್ಕಾರ ಪದೆ ಪದೇ ಡೀಸೆಲ್ ದರ, ಟೋಲ್ ದರ ಹೆಚ್ಚುಸುವುದು ಎಷ್ಟು ಸಮಂಜಸ ಎಂದು ಪ್ರಶ್ನಿಸಿದ್ದಾರೆ. ಅಲ್ಲದೆ ಟೋಲ್‌ಗಳಲ್ಲಿ ಆರ್‌ಟಿಒ ಅಧಿಕಾರಿಗಳ ಅನಗತ್ಯ ಕಿರುಕುಳ ತಪ್ಪಿಸಬೇಕೆಂದು ಒತ್ತಾಯಿಸಿದ್ದಾರೆ.

# ಬೇಸಿಗೆಯಲ್ಲೂ ತಂಪಾದ ವಾತಾವರಣ

## ದಕ್ಷಿಣ ಒಳನಾಡಿನಲ್ಲಿ ಪೂರ್ವ ಮುಂಗಾರು ಮಳೆ ಮುಂದುವರಿಕೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಪೂರ್ವ ಮುಂಗಾರು ಮಳೆ ಚುರುಕಾಗಿದ್ದು, ದಕ್ಷಿಣ ಒಳನಾಡಿನ ಹಲವು ಜಿಲ್ಲೆಗಳಲ್ಲಿ ಮಳೆ ಮುಂದುವರೆಯಲಿದೆ. ರಾಜ್ಯದ ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಭಾಗಶಃ ಮೋಡ ಕವಿದ ವಾತಾವರಣವಿದ್ದು, ಅಲ್ಲಲ್ಲಿ ಮಳೆಯಾಗುತ್ತಿದೆ. ಹವಾಮಾನ ಮುನ್ಸೂಚನೆ ಪ್ರಕಾರ ಸಂಜೆ, ರಾತ್ರಿ ವೇಳೆ ರಾಜ್ಯದ ಒಳನಾಡಿನಲ್ಲಿ ಮಳೆಯಾಗುವ ಸಾಧ್ಯತೆಗಳಿವೆ. ಕೆಲವೆಡೆ ಮಿಂಚು, ಗುಡುಗಿನಿಂದ ಕೂಡಿದ ಮಳೆಯಾಗುವ ಲಕ್ಷಣಗಳು ಗೋಚರಿಸುತ್ತಿವೆ.

ಬುಧವಾರ ರಾಜಧಾನಿ ಬೆಂಗಳೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಚಿತ್ರದುರ್ಗ, ಹಾವೇರಿ, ಇಳಕಲ್, ಆನವಟ್ಟಿ ಸೇರಿದಂತೆ ರಾಜ್ಯದ ಒಳನಾಡಿನ ಹಲವೆಡೆ ಚದುರಿದಂತೆ ಮಳೆಯಾಗಿದೆ. ಕೆಲವೆಡೆ ಮಿಂಚು, ಗುಡುಗಿನಿಂದ ಕೂಡಿದ ಮಳೆಯಾಗಿದ್ದರೆ, ಮತ್ತೆ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗಿದೆ. ಆದರೆ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಿಸಿಲಿನ ತೀವ್ರತೆ ಹೆಚ್ಚಾಗಿದ್ದು, ಕಲಬುರಗಿ ಸೇರಿದಂತೆ ಆ ಭಾಗದ ಹಲವೆಡೆ ಗರಿಷ್ಠ ತಾಪಮಾನ 40 ಡಿ.ಸೆಂ.ಗಿಂತ ಹೆಚ್ಚಾಗಿದೆ. ದಕ್ಷಿಣ ಒಳನಾಡಿನಲ್ಲಿ ನಿರಂತರ


ಉದಯವಾಹಿನಿ ಚಿತ್ರ


ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರು ಸೇರಿದಂತೆ ಕೆಲವೆಡೆ ತಾಪಮಾನದಲ್ಲಿ 2-3 ಡಿ.ಸೆಂ.ನಷ್ಟು ಕಡಿಮೆಯಾಗಿದ್ದು, ಬೇಸಿಗೆಯಲ್ಲೂ ತಂಪಾದ ವಾತಾವರಣ ಕಂಡುಬರುತ್ತಿದೆ.

ಏ. ತಿಂಗಳಲ್ಲಿ ಇದುವರೆಗೂ ರಾಜ್ಯದಾದ್ಯಂತ ವಾಡಿಕೆ ಪ್ರಮಾಣದ ಮಳೆಯಾಗಿದೆ. ದಕ್ಷಿಣ ಒಳನಾಡು, ಕರಾವಳಿ, ಮಲೆನಾಡು ಭಾಗದಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ಬೇಸಿಗೆ ಮಳೆ ಚದುರಿದಂತೆ ಬೀಳುತ್ತಿದೆಯೇ ಹೊರತು ವ್ಯಾಪಕ ಪ್ರಮಾಣದಲ್ಲಿ ಮಳೆಯಾಗುತ್ತಿಲ್ಲ. ಇದರಿಂದ ವಾತಾವರಣದಲ್ಲಿ ಏರುಪೇರುಗಳು ಕಂಡುಬರುತ್ತಿವೆ. ಕರಾವಳಿ, ಮಲೆನಾಡು, ದಕ್ಷಿಣ ಒಳನಾಡಿನಲ್ಲಿ ಅಲ್ಲಲ್ಲಿ ಮಳೆ ಮುಂದುವರೆಯುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

# ಅಲೆಮಾರಿ ಒಕ್ಕೂಟದಿಂದ ಸರ್ಕಾರದ ವಿರುದ್ಧ ಅಹೋರಾತ್ರಿ ಧರಣಿ

• ಉದಯವಾಹಿನಿ, ರಾಮನಗರ

ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಒಕ್ಕೂಟದ ವತಿಯಿಂದ ಏ.21, 22ರಂದು ರಾಜ್ಯ ಸರ್ಕಾರದ ವಿರುದ್ಧ ಅಹೋರಾತ್ರಿ ಧರಣಿ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ಗೌರವಾಧ್ಯಕ್ಷ ಕೆ.ರವೀಂದ್ರ ಶೆಟ್ಟಿ ತಿಳಿಸಿದರು. ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯಾದಾದ್ಯಂತ ಹಿಂದುಳಿದ ವರ್ಗದ ಪ್ರವರ್ಗ-1ಕ್ಕೆ ಸೇರಿದ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ 46 ಜಾತಿಗಳನ್ನೊಳಗೊಂಡ ಅಲೆಮಾರಿ ಕುಟುಂಬಗಳು, ಹಲವಾರು ವರ್ಷಗಳಿಂದ ಬೀದಿ ಬದಿಗಳಲ್ಲಿ ಸರ್ಕಾರಿ, ಖಾಸಗಿ ಖಾಲಿ ನಿವೇಶನಗಳಲ್ಲಿ ಕಟ್ಟಿಕೊಂಡಿವೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಜೀವನೋಪಾಯಕ್ಕಾಗಿ ಹಳ್ಳಿಗಳಲ್ಲಿ ವ್ಯಾಪಾರಕ್ಕಾಗಿ ಬಾಂಡೆ ವ್ಯಾಪಾರ ಸೂಜಿ-ದಾರ, ಪಿನ್ನು, ಟೇಪು, ಬೀಗ ರಿಪೇರಿ ಮಾಡುವುದು. ದನ- ಕುರಿ-ಮೇಕೆ ಹಂದಿ ಸಾಕಾಣಿಕೆ, ಬಲೆ ಹೆಣೆಯುವುದು, ಮೀನು ಹಿಡಿದು ಮಾರುವುದು, ಧಾರ್ಮಿಕ ಬಿಕ್ಷಾಟನೆ, ಭವಿಷ್ಯ ಹೇಳುವುದು. ಗಿಣಿ ಭವಿಷ್ಯ ಹೇಳುವುದು, ಬಳೆ ಇತ್ಯಾದಿಗಳನ್ನು ಮಾರುತ್ತಾ ಅತ್ಯಂತ ಶೋಚನೀಯ ಸ್ಥಿತಿಯಲ್ಲಿ ಕಷ್ಟಕರ ಜೀವನವನ್ನು ನಡೆಸತ್ತಿದ್ದಾರೆ ಎಂದರು.

ರಾಜ್ಯದ ಗ್ರಾಮೀಣ ಹಾಗೂ ನಗರ ಪ್ರದೇಶದ ಸರ್ಕಾರಿ ಜಾಗದಲ್ಲಿ ಸುಮಾರು 10 ವರ್ಷಗಳಿಂದ ಮೇಲ್ಪಟ್ಟು ಗುಡಿಸಲು ಡೇರೆ ಟೆಂಟ್ ಹಾಕಿಕೊಂಡು ವಾಸಿಸುತ್ತಿರುವ ಅಲೆಮಾರಿ, ಅರೆ ಅಲೆಮಾರಿ ಜನಾಂಗದವರಿಗೆ ಆ ಜಾಗವನ್ನು ಅವರ ಹೆಸರಿಗೆ ಪಹಣಿ ಪತ್ರವನ್ನು ನೀಡಬೇಕು. ಅಲೆಮಾರಿ ಸಮುದಾಯ ಭವನಗಳನ್ನು ನಿರ್ಮಿಸಬೇಕು ಎಂದು ಒತ್ತಾಯಿಸಿದರು. ಈ ಜನಾಂಗದ ಮಕ್ಕಳಿಗಾಗಿ ವಸತಿ ಶಾಲೆಗಳನ್ನು ತೆರೆಯುವುದು. ಅಲ್ಲದೆ ಇಲಾಖೆ ನೀಡುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಗಳಿಗೆ ನೀಡುವ ಶಾಲಾ ವರ್ಗಾವಣಾ ಪತ್ರದಲ್ಲಿ ಅವರ ಹೆಸರಿನ ಜತೆಗೆ ಜಾತಿ ಮತ್ತು ಪ್ರವರ್ಗವನ್ನು ಗುರುತಿಸಬೇಕೆಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಪ್ರಕಾಶ್, ಮಾಗಡಿ ಮಾರಪ್ಪ, ಹರೀಶ್ ಮೂರ್ತಿ, ರಂಗಸ್ವಾಮಿ ಮತ್ತಿತರರು ಇದ್ದರು.

# ರೈತರು, ಅರಣ್ಯ ಅಧಿಕಾರಿಗಳ ಮಧ್ಯೆ ಹಗ್ಗಜಗ್ಗಾಟ

## ಜಿಲ್ಲೆಯ ಮಾಹಿತಿಯಿರುವ ಸಚಿವರ ನೇಮಕಕ್ಕೆ ರೈತ ಸಂಘ ಒತ್ತಾಯ

• ಉದಯವಾಹಿನಿ, ಕೋಲಾರ


ಜಿಲ್ಲೆಯ ರೈತರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸದ ಜಿಲ್ಲಾ ಉಸ್ತುವಾರಿ ಸಚಿವರನ್ನು ಬದಲಾವಣೆ ಮಾಡಿ ಜಿಲ್ಲೆಯ ನಾಡಿ ಮಿಡಿತವಿರುವ ಸಚಿವರನ್ನು ನೇಮಕ ಮಾಡಬೇಕೆಂದು ರೈತಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಪತ್ರಿಕಾ ಹೇಳಿಕೆ ಮುಖಾಂತರ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು.

ಈ ಕುರಿತು ನಗರ ಹೊರವಲಯದ ಅರಣ್ಯ ಉದ್ಯಾನ ವನದಲ್ಲಿ ಪತ್ರಿಕಾ ಹೇಳಿಕೆ ನೀಡಿ ಮಾತನಾಡಿದ ಅವರು, ಜಿಲ್ಲಾ ಉಸ್ತುವಾರಿ ಸಚಿವರಾದ ಭೈರತಿ ಸುರೇಶ್ ಅವರು ನಾಮಕಾವಸ್ತೆ, ಪಕ್ಷದ ಕಾರ್ಯಕ್ರಮಗಳಿಗೆ ಮಾತ್ರ ಸೀಮಿತವಾಗುವ ಜೊತೆಗೆ ರಾಷ್ಟ್ರೀಯ ಹಬ್ಬಗಳ ಸಮಯದಲ್ಲಿ ಬಂದು ಕಾಣಿಸಿಕೊಂಡು ನಾಪತ್ತೆಯಾದರೆ ಮತ್ತೆ ಅವರನ್ನು ಹುಡುಕಾಡಿದರೂ ಸಿಗಲಾರದ ಮಟ್ಟಕ್ಕೆ ನಾಪತ್ತೆಯಾಗಿದ್ದಾರೆಂದು ಆರೋಪಿಸಿದರು.

**ಸಚಿವರು ಸಿಗಲಾರದ ಮಟ್ಟಕ್ಕೆ ನಾಪತ್ತೆ**

> **ಪ್ರತಿ 5 ವರ್ಷಕ್ಕೊಮ್ಮೆ ಜನಪ್ರತಿನಿಧಿಗಳು ಬದಲಾಗುತ್ತಾರೆ. 2 ವರ್ಷಕ್ಕೊಮ್ಮೆ ಜಿಲ್ಲಾಧಿಕಾರಿಗಳು ಒಳಗೊಂಡಂತೆ ಹಿರಿಯ ಅಧಿಕಾರಿಗಳು ಬದಲಾಗುತ್ತಾರೆಯೇ ಹೊರತು ಜಿಲ್ಲೆಯ ರೈತರ ಜ್ವಲಂತ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸುವಲ್ಲಿ ಜಿಲ್ಲಾಡಳಿತ ಉಸ್ತುವಾರಿ ಸಚಿವರು ವಿಫಲವಾಗಿದ್ದಾರೆ**
> **- ವಕ್ಕಲೇರಿ ಹನುಮಯ್ಯ, ಜಿಲ್ಲಾ ಕಾರ್ಯಾಧ್ಯಕ್ಷ**

ಜಿಲ್ಲೆಯಲ್ಲಿ ರೈತರು, ಅರಣ್ಯ ಅಧಿಕಾರಿಗಳ ಮಧ್ಯೆ ಹಗ್ಗಜಗ್ಗಾಟ ನಿರಂತರವಾಗಿ ನಡೆಯುತ್ತಿದೆ. ಜೊತೆಗೆ ಉಪ


ಉದಯವಾಹಿನಿ ಚಿತ್ರ

ಲೋಕಾಯುಕ್ತರು ಭೇಟಿ ನೀಡಿದಾಗ ಸರ್ಕಾರಿ ಕಚೇರಿಗಳಲ್ಲಿನ ಭ್ರಷ್ಟಾಚಾರ ದರ್ಶನವವಾಗುತ್ತಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಅವಧಿ ಮೀರಿದ ಔಷಧಿಗಳನ್ನು ನೀಡಿ ಬಡವರ ಬದುಕನ್ನು ಬೀದಿಗೆ ತಳ್ಳುತ್ತಿದ್ದಾರೆ. ನಕಲಿ ಬಿತ್ತನೆ ಬೀಜ ಕೀಟನಾಶಕಗಳ ಜಿಲ್ಲೆಯಲ್ಲಿ ಅರ್ಭಟ ಮಾಡುತ್ತಿದ್ದರೂ ಜಿಲ್ಲಾ ಉಸ್ತುವಾರಿ ಸಚಿವರು ಇದರ ಕಡೆ ಗಮನ ಹರಿಸದೇ ಇರುವುದು ದುರಾದೃಷ್ಟಕರವೆಂದು ವಿಷಾಧ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದ ರೈತರ ಬೆಳೆ ನಷ್ಟವಾಗುತ್ತಿದೆ.

ಮತ್ತೊಂದೆಡೆ ಕೆಸಿವ್ಯಾಲಿ 3ನೇ ಹಂತದ ಶುದ್ಧೀಕರಣವಿಲ್ಲದೆ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆದಂತಹ ಟೊಮೇಟೊ ಬೆಳೆಗಳಿಗೆ ಬಾಧಿಸುತ್ತಿರುವ ರೋಗಗಳು ನಿಯಂತ್ರಣಕ್ಕೆ ಬಾರದೆ ಹಾಕಿದ ಬಂಡವಾಳ ಕೈಗೆ ಸಿಗದೆ ರೈತ ಸಾಲಗಾರನಾಗುತ್ತಿದ್ದರೂ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದ ಜೊತೆಗೆ ಟೊಮೇಟೊ ಮಾರುಕಟ್ಟೆ ಜಾಗದ ಸಮಸ್ಯೆ ಡಿಸಿಸಿ ಬ್ಯಾಂಕ್ ಹಾಲು ಒಕ್ಕೂಟದ ನೂರಾರು ಕೋಟಿ ಭ್ರಷ್ಟಾಚಾರ ಆರೋಪಗಳನ್ನು ಅವರ ಪಕ್ಷದ ಶಾಸಕರೇ ಬೀದಿ ಜಗಳ ವಾಡುತ್ತಿದ್ದರೂ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದ ಉಸ್ತುವಾರಿ ಸಚಿವರನ್ನು ಬದಲಾವಣೆಮಾಡಿ ಪುಣ್ಯ ಕಟ್ಟಿಕೊಳ್ಳಿ ಎಂದು ಸರ್ಕಾರಕ್ಕೆ ಒತ್ತಾಯ ಮಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಚಾಲಕ ಬಂಗವಾದಿ ನಾಗರಾಜಗೌಡ, ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ್, ತೆರ್ನಹಳ್ಳಿ ಅಂಜಿನಪ್ಪ, ಅಪ್ಪೋಜಿರಾವ್, ಮಂಗಸಂದ್ರ ತಿಮ್ಮಣ್ಣ, ವೆಂಕಟೇಶಪ್ಪ, ನರಸಿಂಹಪ್ಪ, ಸುಪ್ರಿಂ ಚಲ, ಚಂದ್ರಪ್ಪ, ಶೈಲಜ, ಗೌರಮ್ಮ, ರತ್ನಮ್ಮ, ವೆಂಕಟಮ್ಮ, ಮುನಿರತ್ನಮ್ಮ, ಶಾರದಮ್ಮ, ಮುಂತಾದವರು ಇದ್ದರು.

### ಹೆಜ್ಜೆಹೆಜ್ಜೆಗೂ ಭ್ರಷ್ಟಾಚಾರ

**ಪ್ರತಿ ಸರ್ಕಾರಿ ಕಚೇರಿಯಲ್ಲಿ ಲಂಚವಿಲ್ಲದೆ ಬಡವನ ನೆರಳೂ ಸಹ ಸರ್ಕಾರಿ ಕಚೇರಿಯ ಬಾಗಿಲಿಗೂ ಬೀಳುವಂತಿಲ್ಲ. ಅಷ್ಟರ ಮಟ್ಟಿಗೆ ಜಿಲ್ಲಾಡಳಿತ ಹದಗೆಟ್ಟಿರುವ ಜೊತೆಗೆ ಹೆಜ್ಜೆ ಹೆಜ್ಜೆಗೂ ಭ್ರಷ್ಟಾಚಾರ, ದಲ್ಲಾಳಿಗಳ ಹಾವಳಿ ಮಿತಿ ಮೀರಿದೆ. ಕನಿಷ್ಟ ಸೌಜನ್ಯಕ್ಕಾದರೂ ಜಿಲ್ಲಾ ಉಸ್ತುವಾರಿ ಸಚಿವರು ರೈತರ ಸಮಸ್ಯೆಗಳ ಬಗ್ಗೆ ಸಭೆ ಕರೆಯಲು ಪುರಸೊತ್ತಿಲ್ಲ. ಅತ್ತೆ ಮನೆಗೆ ಅಳಿಯ ಬಂದ ಹಾಗೆ ಕೆಡಿಪಿ ಸಭೆಗಳಿಗೆ ಬಂದು ಡ್ರೈಫ್ರೂಟ್ಸ್ ತಿಂದು ಗುಬ್ಬಚ್ಚಿ ಮೇಲೆ ಬ್ರಹ್ಮಾಸ್ತ್ರ ಎಂಬಂತೆ ಕೆಳ ಹಂತದ ಅಧಿಕಾರಿಗಳ ಮೇಲೆ ಪ್ರತಾಪ ತೋರಿ ನಾಪತ್ತೆಯಾಗುವ ಜಿಲ್ಲೆಯ ನಾಡಿ ಮಿಡಿತವಿಲ್ಲದ ಉಸ್ತುವಾರಿ ಸಚಿವರನ್ನು ಬದಲಾವಣೆ ಮಾಡಿ ಪುಣ್ಯ ಕಟ್ಟಿಕೊಂಡು ಜಿಲ್ಲೆಯ ನಾಲ್ಕು ಶಾಸಕರಲ್ಲಿ ಒಬ್ಬರಿಗೆ ಸಚಿವ ಸ್ಥಾನ ನೀಡಿ ಉಸ್ತುವಾರಿ ಸಚಿವರನ್ನಾಗಿ ನೇಮಕ ಮಾಡಿ ಎಂದು ಒತ್ತಾಯಿಸಿದರು.**

## ಮಿನಿ ನ್ಯೂಸ್

### ಕೇಂದ್ರ, ರಾಜ್ಯ ಸರ್ಕಾರದ ವಿರುದ್ಧ ಸ್ಲಂ ಜನ ಅಸಮಾಧಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ತುಮಕೂರು

ಅಗತ್ಯ ವಸ್ತುಗಳ ಬೆಲೆ ಹೆಚ್ಚಳ ವಿರೋಧಿಸಿ, ಕೇಂದ್ರ- ರಾಜ್ಯ ಸರ್ಕಾರದ ಜನ ವಿರೋಧಿ ನೀತಿ ಖಂಡಿಸಿ ಸ್ಲಂ ಸಮಿತಿಯಿಂದ ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಯಿತು. ಕೇಂದ್ರ, ರಾಜ್ಯ ಸರ್ಕಾರಗಳು ಸ್ಪರ್ಧೆಗೆ ಇಳಿದು ಬೆಲೆ ಏರಿಕೆ ಮಾಡುತ್ತಿವೆ. ಇದನ್ನು ಸ್ಲಂ ಜನಾಂದೋಲನ ಕರ್ನಾಟಕ ಖಂಡಿಸುತ್ತದೆ. ಬಸ್ ಪ್ರಯಾಣ ದರ, ವಿದ್ಯುತ್ ದರ ಹೆಚ್ಚಳದಿಂದ ಜನ ಕಂಗಾಲಾಗಿದ್ದಾರೆ. ಈಗ ಮತ್ತೆ ಡೀಸೆಲ್ ದರ ಹೆಚ್ಚಿಸಲಾಗಿದೆ. ಜನರ ಕಲ್ಯಾಣ ಮಾಡಬೇಕಾದ ಸರ್ಕಾರಗಳು ಬಡವರ ರಕ್ತ ಹೀರುವ ಕೆಲಸಕ್ಕೆ ಮುಂದಾಗಿವೆ' ಎಂದು ಸ್ಲಂ ಸಮಿತಿ ಅಧ್ಯಕ್ಷ ಎ.ನರಸಿಂಹಮೂರ್ತಿ ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯದ ಕೋಟ್ಯಂತರ ಬಡ, ಮಧ್ಯಮ ವರ್ಗದ ಕುಟುಂಬಗಳು ಯಾವುದೇ ಸಮಸ್ಯೆಯಾಗದಂತೆ ಬದುಕು ಕಟ್ಟಿಕೊಳ್ಳಲು ಪಂಚ ಗ್ಯಾರಂಟಿ ಯೋಜನೆ ಸಹಕಾರಿಯಾಗಿವೆ. ಇದೇ ಸಮಯದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಸಾಮಾನ್ಯ ಜನರ ಬದುಕು ಕಷ್ಟಕರವಾಗಿದೆ. ಹಾಲು, ವಿದ್ಯುತ್, ಡೀಸೆಲ್, ಬಸ್, ಮೆಟ್ರೊ ಪ್ರಯಾಣ ದರ ಇಳಿಕೆ ಮಾಡಬೇಕು ಎಂದು ಒತ್ತಾಯಿಸಿದರು.

### ಕೊಲೆಯಾದ ಮಹಿಳೆ ಪತ್ತೆ ಪ್ರಕರಣ ಏ. 23ಕ್ಕೆ ತೀರ್ಪು

• ಉದಯವಾಹಿನಿ, ಮೈಸೂರು

ಕೊಲೆಯಾಗಿದ್ದಾಳೆ ಎಂದು ಸುದ್ದಿಯಾಗಿದ್ದ ಮಲ್ಲಿಗೆ ಪತ್ತೆ ಪ್ರಕರಣದ ವಿಚಾರಣೆ ನಡೆಸಿದ ಐದನೇ ಜಿಲ್ಲಾ ಸೆಷನ್ ನ್ಯಾಯಾಲಯವು ಏ. 23ಕ್ಕೆ ತೀರ್ಪು ಕಾಯ್ದಿರಿಸಿ ಆದೇಶಿಸಿತು. ಪೊಲೀಸ್ ವರಿಷ್ಠಾಧಿಕಾರಿಯ ವಿಚಾರಣಾ ವರದಿಯನ್ನು ಬೈಲುಕುಪ್ಪೆ ವೃತ್ತ ನಿರೀಕ್ಷಕ ದೀಪಕ್ ನ್ಯಾಯಾಲಯಕ್ಕೆ ಸಲ್ಲಿಸಿದರು. ಪ್ರಕರಣದ ಸಂದರ್ಭದಲ್ಲಿ ತನಿಖಾಧಿಕಾರಿಗಳಾಗಿದ್ದ ಬಿ.ಜಿ.ಪ್ರಕಾಶ್, ಮಹೇಶ್ ಕುಮಾರ್, ಪ್ರಕಾಶ್ ಎತ್ತಿಮನಿ ಅವರನ್ನು ತರಾಟೆಗೆ ತೆಗೆದುಕೊಂಡ ನ್ಯಾಯಾಧೀಶರು, ದೋಷಾರೋಪ ಪಟ್ಟಿಗೆ ಏನು ಆಧಾರವಿದೆ ಎಂದು ಪ್ರಶ್ನಿಸಿದರು.

ಆರೋಪಿ ಎನ್ನಲಾದ ಸುರೇಶ್ ಪರ ವಕೀಲ ಪಾಂಡು ಪೂಜಾರಿ, ಪೊಲೀಸರು ಉದ್ದೇಶ ಪೂರ್ವಕವಾಗಿ ಬುಡಕಟ್ಟು ಸಮುದಾಯವನ್ನು ಗುರಿಯಾಗಿಸಿ ಸುಳ್ಳು ಕಥೆ ಸೃಷ್ಟಿಸಿದ್ದಾರೆ. ತನಿಖಾಧಿಕಾರಿಗಳ ವಿರುದ್ಧ ಸುಮೊಟೊ ಪ್ರಕರಣ ದಾಖಲಿಸಲು ನ್ಯಾಯಾಲಯ ನಿರ್ದೇಶನ ನೀಡಬೇಕು ಎಂದು ನ್ಯಾಯಾಲಯಕ್ಕೆ ಮನವಿ ಮಾಡಿದರು. ವಾದ ಆಲಿಸಿದ ನ್ಯಾಯಾಧೀಶ ಗುರುರಾಜ್ ತೀರ್ಪು ಕಾಯ್ದಿರಿಸಿ, ವಿಚಾರಣೆ ಮುಂದೂಡಿದರು.

### ನಾಲೆಗಳಿಗೆ ನೀರು ಹರಿಸಲು ರೈತರ ಆಗ್ರಹ

• ಉದಯವಾಹಿನಿ, ಮಳವಳ್ಳಿ

ನಾಲೆಗಳಿಗೆ ಸಮರ್ಪಕವಾಗಿ ನೀರು ಹರಿಸುವಂತೆ ಆಗ್ರಹಿಸಿ ಟಿ. ಕಾಗೇಪುರ ಬಳಿಯ ಕಾವೇರಿ ನೀರಾವರಿ ನಿಗಮದ ಕಚೇರಿಯ ಮುಂದೆ ಅಂಚೇದೊಡ್ಡಿ, ತಮ್ಮಡಹಳ್ಳಿ, ಅಮೃತೇಶ್ವರನಹಳ್ಳಿ, ನೆಲಮಾ ಕನಹಳ್ಳಿ, ಕಂದೇಗಾಲ ಗ್ರಾಮದ ರೈತರು ಗುರುವಾರ ಪ್ರತಿಭಟನೆ ನಡೆಸಿದರು. ಕಚೇರಿ ಮುಂದೆ ಜಮಾಯಿಸಿದ ರೈತರು ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕೆಆರ್‌ಎಸ್ ಅಣೆಕಟ್ಟೆಯಿಂದ ಕಾಲುವೆಗಳಿಗೆ ನೀರು ಹರಿಸುತ್ತಿದ್ದರೂ ತಾಲ್ಲೂಕಿನ ಕೊನೆಯ ಭಾಗದ ರೈತರ ಜಮೀನುಗಳಿಗೆ ನೀರು ತಲುಪುತ್ತಿಲ್ಲ, ಈಗಾಗಲೇ ಬೆಳೆದಿರುವ ಕಬ್ಬು, ಭತ್ತ, ರಾಗಿ, ಜೋಳದ ಬೆಳೆಗಳು ಒಣಗುತ್ತಿದ್ದು, ಕೂಡಲೇ ನೀರು ಹರಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನಾ ಸ್ಥಳಕ್ಕೆ ಮಾಜಿ ಶಾಸಕ ಕೆ. ಅನ್ನದಾನಿ ಭೇಟಿ ನೀಡಿ ದೂರವಾಣಿ ಮೂಲಕ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳೊಂದಿಗೆ ಚರ್ಚಿಸಿದರು. ಇನ್ನೆರಡು ದಿನಗಳಲ್ಲಿ ನೀರು ಹರಿಸುವ ಭರವಸೆಯನ್ನು ಅಧಿಕಾರಿಗಳು ನೀಡಿದ್ದರಿಂದ ರೈತರು ಪ್ರತಿಭಟನೆ ಸಗಿತಗೊಳಿಸಿದರು.

### ಮಳೆಗಾಲದ ಮುನ್ನ ರಸ್ತೆ ದುರಸ್ತಿಗೆ ಸೂಚನೆ

• ಉದಯವಾಹಿನಿ, ವಿರಾಜಪೇಟೆ

ಪುರಸಭೆ ವ್ಯಾಪ್ತಿಯ ಹಲವು ರಸ್ತೆಗಳ ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿದ್ದು, ಬಾಕಿ ಉಳಿದಿರುವ ಎಲ್ಲಾ ರಸ್ತೆಗಳು ಮತ್ತು ಕಾಲುದಾರಿಗಳ ಅಭಿವೃದ್ಧಿ ಕಾಮಗಾರಿ ಮಳೆಗಾಲ ಶುರುವಾಗುವ ಮುಂಚೆ ನಡೆಸಬೇಕಿದೆ ಎಂದು ಶಾಸಕ ಎ.ಎಸ್.ಪೊನ್ನಣ್ಣ ಹೇಳಿದರು.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ 45 ಲಕ್ಷ ವಿಶೇಷ ಅನುದಾನದಲ್ಲಿ ಪಟ್ಟಣದ ವಿದ್ಯಾನಗರ ಮತ್ತು ಸಿಲ್ವನಗರದಲ್ಲಿ ನಿರ್ಮಾಣಗೊಂಡಿರುವ ಕಾಂಕ್ರೀಟ್ ರಸ್ತೆಯನ್ನು ಈಚೆಗೆ ಉದ್ಘಾಟಿಸಿ ಅವರು ಮಾತನಾಡಿದರು. ಮಳೆ ನೀರು ಹರಿದು ಹೋಗಲು ರಸ್ತೆಗಳ ಬದಿ ಚರಂಡಿಗಳನ್ನು ನಿರ್ಮಿಸಬೇಕಿರುವುದರಿಂದ ಇದಕ್ಕೆ ಮುಂದಿನ ದಿನದಲ್ಲಿ ಹೆಚ್ಚಿನ ಅನುದಾನ ಬರಲಿದೆ. ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣವನ್ನು ಕೊಡಿಸಬೇಕು ಎಂದರು.

### ವಕ್ಫ್‌ತಿದ್ದುಪಡಿ ಕಾಯ್ದೆ ಖಂಡಿಸಿ 21ಕ್ಕೆ ಪ್ರತಿಭಟನೆ

• ಉದಯವಾಹಿನಿ, ಕುಣಿಗಲ್

ವಕ್ಫ ತಿದ್ದುಪಡಿ ಕಾಯ್ದೆ ಖಂಡಿಸಿ ತಾಲ್ಲೂಕಿನ ಮುಸ್ಲಿಮರು ಸೋಮವಾರ ಬೃಹತ್ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಅವರಿಗೆ ಮನವಿಪತ್ರ ಸಲ್ಲಿಸಲಾಗುವುದು ಎಂದು ಪುರಸಭೆ ಮಾಜಿ ಉಪಾಧ್ಯಕ್ಷ ಅಬ್ದುಲ್ ಹಮೀದ್ ತಿಳಿಸಿದರು. ಪಟ್ಟಣದಲ್ಲಿ ಗುರುವಾರ ಮುಸ್ಲಿಂ ಮುಖಂಡರ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕಾಯ್ದೆಯ ಸಿಂಧುತ್ವ ಪ್ರಶ್ನಿಸಿ ಹಲವು ಸಂಘಟನೆಗಳು ಸುಪ್ರೀಂಕೋರ್ಟ್ ನಲ್ಲಿ ವಿಚಾರಣೆ ನಡೆಯುತ್ತಿದ್ದು, ನ್ಯಾಯಾಲಯದ ತೀರ್ಪನ್ನು ಗೌರವಿಸಬೇಕಿದೆ. ಪರವಾಗಿ ಬಂದರೆ ಗೌರವಿಸಬೇಕಾಗುತ್ತದೆ. ವಿರೋಧವಾಗಿ ಬಂದರೆ ಶಾಂತಿ, ಸೌಹಾರ್ದದಿಂದ ನಮ್ಮ ನಿಲುವು ಪ್ರದರ್ಶಿಸಬೇಕಾಗುತ್ತದೆ ಎಂದರು.


ಸಭೆಯಲ್ಲಿ ರೆಹಮಾನ್ ಷರೀಫ್, ಸದಾಖತ್, ಸೆಮ್ಮಿಉಲ್ಲಾ, ಇಮ್ರಾನ್ ಖಾನ್, ಸಾದಿಕ್, ತನ್ವೀರ್, ಸನಾವುಲ್ಲಾ, ಮೊಹಿಬುಲ್ಲಾ ಖಾನ್, ಏಜಾಸ್ ಪಾಷಾ ಅವರು ಸಂಘಟಿತ ಹೋರಾಟಕ್ಕೆ ಒಮ್ಮತದ ಅಭಿಪ್ರಾಯ ವ್ಯಕ್ತಪಡಿಸಿದರು.

# ತಾಲ್ಲೂಕಿನಾದ್ಯಂತ ಕೆರೆ-ಕುಂಟೆ ಒತ್ತುವರಿ ತೆರವು

• ಉದಯವಾಹಿನಿ, ಮುಳಬಾಗಿಲು

ತಾಲ್ಲೂಕಿನಾದ್ಯಂತ ಕೆರೆ ಕುಂಟೆಗಳ ಅಕ್ರಮ ಒತ್ತುವರಿ ಮಾಡಿರುವುದನ್ನು ಜಿಲ್ಲಾಧಿಕಾರಿ ಸೂಚನೆಯ ಮೇರೆಗೆ ತೆರವು ಗೊಳಿಸಲಾಗುತ್ತಿದೆ ಎಂದು ತಹಶೀಲ್ದಾರ್ ವಿ.ಗೀತಾ ತಿಳಿಸಿದರು. ತಾಲ್ಲೂಕು ಕಚೇರಿಯಲ್ಲಿ ಉಪತಹಶೀಲ್ದಾರ್‌ದಾರರು, ಆರ್‌ಐಗಳು, ಕೃಷಿ ಮತ್ತು ಸರ್ವೆ ಇಲಾಖೆ ಅಧಿಕಾರಿಗಳ ಸಭೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ತಾಲ್ಲೂಕಿನಾದ್ಯಂತ ಜಿ.ಪಂ.ಗೆ ಸೇರಿದ 584 ಕೆರೆಗಳು, ಸಣ್ಣ ನೀರಾವರಿ ಇಲಾಖೆಗೆ ಸೇರಿದ 35 ಕೆರೆಗಳು ಮತ್ತು 219 ಕುಂಟೆಗಳು, ನಗರ ಪ್ರದೇಶದಲ್ಲಿ 6 ಕೆರೆಗಳು ಇದ್ದು ಈ ಪೈಕಿ ಸಣ್ಣ ನೀರಾವರಿ ಇಲಾಖೆಗೆ ಸೇರಿದ 34 ಕೆರೆಗಳ ಸರ್ವೇ ಕಾರ್ಯ ಮುಗಿದಿದ್ದು ನಗವಾರ ಕೆರೆ 1 ಮಾತ್ರ ಬಾಕಿ ಉಳಿದಿದೆ ಎಂದು ಹೇಳಿದರು.

ಜಿ.ಪಂ 361, 71 ಕುಂಟೆಗಳು ಸರ್ವೇ ಕಾರ್ಯ ನಡೆಸಲಾಗಿದ್ದು ಮೇ.15ರೊಳಗೆ ಎಲ್ಲಾ ಕೆರೆ ಕುಂಟೆಗಳ ಸರ್ವೆ ಕಾರ್ಯಮಾಡಿ ಅಕ್ರಮ ಒತ್ತುವರಿ ತೆರವುಗೊಳಿಸಿ ಬಯೋ ಪೆನ್ಸಿಂಗ್ ಹಾಕಿ ಹೆಬ್ಬೇವು, ಕತ್ತಾಳೆ ಗಿಡಗಳನ್ನು ಬೆಳಸಿ


ಉದಯವಾಹಿನಿ ಚಿತ್ರ

ಸಂರಕ್ಷಿಸಲು ಅಧಿಕಾರಿಗಳಿಗೆ ಸೂಚಿಸಿರುವುದಾಗಿ ತಿಳಿಸಿದರು.

ಸುಮಾರು ಕೆರೆಗಳಲ್ಲಿ ರೈತರು ವಿವಿಧ ಬೆಳೆಗಳನ್ನು ಬೆಳೆದಿದ್ದು ಸ್ವಯಂ ಪ್ರೇರಣೆಯಿಂದ ಬೆಳೆ ತೆಗೆದುಕೊಂಡು ಒತ್ತುವರಿ ತೆರವುಗೊಳಿಸಬೇಕೆಂದು ಮನವಿ ಮಾಡಿದರಲ್ಲದೆ 2ನೇ ಹಂತದಲ್ಲಿ ರಾಜ ಕಾಲುವೆ, ಗುಂಡುತೋಪು, ಗೋಮಾಳ, ಸರಕಾರಿ ಜಮೀನುಗಳನ್ನು ಒತ್ತುವರಿ ಮಾಡಿರುವುದನ್ನು ತೆರವು ಗೊಳಿಸಲು ತೀರ್ಮಾನಿಸಿರುವುದಾಗಿ ಹೇಳಿದರು. ಬಗರ್‌ಹುಕುಂ ಸಾಗುವಳಿ ಚೀಟಿಗಳು ಸೇರಿದಂತೆ ಇತರೆ ದಾಖಲೆಗಳನ್ನು ರೆಕಾರ್ಡ್ ರೂಂನಲ್ಲಿ ಕಂಪ್ಯೂಟರ್‌ನಲ್ಲಿ ಸ್ಕ್ಯಾನಿಂಗ್ ಮಾಡಿ ಆಪ್‌ಲೋಡ್ ಮಾಡಲು ಎಲ್ಲಾ ಗ್ರಾಮ ಲೆಕ್ಕಿಗರು ತಾಲ್ಲೂಕು ಕಚೇರಿಯಲ್ಲಿ ಕೆಲ ದಿನಗಳ ಕಾಲ ಕೆಲಸ ಮಾಡಲು ಬಳಸಿಕೊಳ್ಳಲಾಗುತ್ತಿದ್ದು ಕೆಲ ದಿನಗಳ ಕಾಲ ಫೀಲ್ಡ್‌ಗೆ ಹೋಗದೇ ತಾಲ್ಲೂಕು ಕಚೇರಿಯಲ್ಲೇ ಇರಲು ಸೂಚಿಸಲಾಗಿದೆ ಎಂದು ವಿವರಿಸಿದರು. ಕೃಷಿ ಹೊಂಡಗಳಲ್ಲಿ ಯಾವುದೇ ಅನಾ ಹುತಗಳು ಆಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು, ರಸ್ತೆಗಳಲ್ಲಿ ಕಣ ಹಾಕದಂತೆ ಕರಪತ್ರಗಳನ್ನು ಮುದ್ರಿಸಿ ಗ್ರಾಮಗಳಲ್ಲಿ ರೈತರಿಗೆ ಅರಿವು ಮೂಡಿಸುವ ಕಾರ್ಯ ನಡೆಸಲು ಈಗಾಗಲೇ ಕೃಷಿ ಅಧಿಕಾರಿಗಳಿಗೆ ಸೂಚಿಸಿರು ವುದಾಗಿ ಹೇಳಿದರು.

> **ನರೇಗ ಯೋಜನೆಯಡಿ ಕೆರೆಗಳ ಸಮಗ್ರ ಅಭಿವೃದ್ದಿಗೆ ಮುಂದಾಗಿದ್ದು ರಾಜಕಾಲುವೆ ತೂಬು ರಿಪೇರಿ, ಕೆರೆಕಟ್ಟೆ ಮತ್ತು ಕೆರೆಗಳ ಅಭಿವೃದ್ದಿಗೆ ಕ್ರಮ ಕೈಗೊಳ್ಳಲಾಗಿದ್ದು ಯಾರೇ ಬಲಾಢ್ಯರು ಕೆರೆಗಳ ಒತ್ತುವರಿ ಮಾಡಿದರು ಸಹ ಪೋಲೀಸ್ ಬಂದೋಬಸ್ತ್‌ನೊಂದಿಗೆ ತೆರವು ಕಾರ್ಯಚರಣೆ ಮಾಡಲಾಗುವುದು**
> **- ಡಾ.ಕೆ. ಸರ್ವೇಶ್, ತಾ.ಪಂ ಇಓ**

# ಮಾದಪ್ಪನ ಹುಂಡಿಯಲ್ಲಿ ದಾಖಲೆಯ 3.26 ಕೋಟಿ ಸಂಗ್ರಹ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಹದೇಶ್ವರ ಬೆಟ್ಟ

ಮಲೆಮಹದೇಶ್ವರ ಸ್ವಾಮಿ ದೇವಾಲಯದ ಹುಂಡಿಯಲ್ಲಿ ಸಂಗ್ರಹವಾಗಿದ್ದ ಹಣ, ಬೆಳ್ಳಿ ಮತ್ತು ಚಿನ್ನದ ಎಣಿಕೆ ಹಾಗೂ ಪರ್ಕಾವಣೆ ಕಾರ್ಯ ಬಸ್ ನಿಲ್ದಾಣದಲ್ಲಿರುವ ವಾಣೀಜ್ಯ ಸಂಕೀರ್ಣದಲ್ಲಿ ಜರುಗಿತು. ಪ್ರಸಿದ್ದ ಧಾರ್ಮಿಕ ಯಾತ್ರಾ ಸ್ಥಳವಾದ ಮಲೆ ಮಹದೇಶ್ವರ ಸ್ವಾಮಿ ದೇವಾಲಯದಲ್ಲಿ ಬರೋಬ್ಬರಿ 3 ಕೋಟಿ ಸಂಗ್ರಹವಾಗಿದ್ದು, ಸಾಲು ಸಾಲು ರಜೆಗಳು ಇದ್ದ ಕಾರಣ ಮುದ್ದು ಮಾದಪ್ಪನ ಹುಂಡಿ ತುಂಬು ತುಳುಕಿದೆ.

ಸನ್ನಿಧಿಯಲ್ಲಿ ಸಂಗ್ರಹವಾಗಿದ್ದ ಹಣ, ಚಿನ್ನಾಭರಣಗಳ ಎಣಿಕೆ, ಪರ್ಕಾವಣೆ ಕಾರ್ಯವನ್ನು ಮಹದೇಶ್ವರ ಬೆಟ್ಟದ ಬಸ್ ನಿಲ್ದಾಣದಲ್ಲಿರುವ ವಾಣೀಜ್ಯ ಸಂಕೀರ್ಣದಲ್ಲಿ ಶ್ರೀಸಾಲೂರು ಮಠದ ಪೀಠಾಧಿಪತಿಗಳಾದ ಶಾಂತಮಲ್ಲಿಕಾರ್ಜುನ ಸ್ವಾಮಿಗಳ ನೇತೃತ್ವದಲ್ಲಿ ನಡೆಯಿತು 35 ದಿನಗಳಲ್ಲಿ ಹುಂಡಿಯಲ್ಲಿ ನಾಣ್ಯ, ಇ ಹುಂಡಿ ಸೇರಿ 3.26.95.339 ( ಮೂರು ಕೋಟಿ ಇಪ್ಪತ್ತಾರು ಲಕ್ಷದ ತೊಂಬೊತ್ತೈದು ಸಾವಿರದ ಮುನ್ನೂರ ಮುವತ್ತೊಂಭತ್ತು ) ರೂಪಾಯಿಗಳು ಹಾಗೂ ಚಿನ್ನ 47 ಗ್ರಾಂ, ಹಾಗೂ 2 ಕೆ.ಜಿ.200 ಗ್ರಾಂ ಬೆಳ್ಳಿ ಪದಾರ್ಥ ಸಂಗ್ರಹವಾಗಿದ್ದು, 11 ವಿದೇಶಿ ನೋಟುಗಳು ಹಾಗೂ 2000 ಮುಖಬೆಲೆಯ 20 ನೋಟುಗಳು ದೊರೆತಿವೆ. ಎಣಿಕೆ ಕಾರ್ಯದಲ್ಲಿ ಪ್ರಾಧಿಕಾರದ ಉಪ ಕಾರ್ಯದರ್ಶಿ ಶ್ರೀ ಚಂದ್ರಶೇಖರ.ಜಿ.ಎಲ್, ಲೆಕ್ಕಾಧೀಕ್ಷಕರಾದ ಶ್ರೀ ಗುರುಮಲ್ಲಯ್ಯ, ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯರುಗಳಾದ ಶ್ರೀ ಮಹದೇವಪ್ಪ ಬಿ, ಶ್ರೀ ಮರಿಸ್ವಾಮಿ ರವರು, ಚಾಮರಾಜನಗರ ಜಿಲ್ಲಾಡಳಿತ ಕಛೇರಿಯ ಶ್ರೀಮತಿ ಕಲ್ಯಾಣಮ್ಮ, ಪ್ರಾಧಿಕಾರದ ಸಿಬ್ಬಂದಿಗಳು, ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಗಳು, ಕೊಳ್ಳೇಗಾಲದ ಬ್ಯಾಂಕ್ ಆಫ್ ಬರೋಡ ಮುಖ್ಯ ವ್ಯವಸ್ಥಾಪಕರು, ಸಿಬ್ಬಂದಿಗಳು ಇದ್ದರು.


# 5,970 ಗ್ರಾಪಂ ಸಿಬ್ಬಂದಿಗೆ ಸಿಗದ ಸೇವಾ ಭದ್ರತೆ

• ಉದಯವಾಹಿನಿ, ಮಂಡ್ಯ

ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಹಲವು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಕನಿಷ್ಠ ವಿದ್ಯಾರ್ಹತೆ ಇಲ್ಲದ ಸಿಬ್ಬಂದಿಗೆ 'ಸೇವಾ ಭದ್ರತೆ' ನೀಡಲು ರಾಜ್ಯ ಸರ್ಕಾರ 2023ರಲ್ಲೇ ಆದೇಶ ಹೊರಡಿಸಿದ್ದರೂ, 5,970 ಸಿಬ್ಬಂದಿಗೆ ಇದುವರೆಗೆ ಅನುಮೋದನೆ ಸಿಕ್ಕಿಲ್ಲ. 2017ಕ್ಕೂ ಮುಂಚೆ ಗ್ರಾಮ ಪಂಚಾಯಿತಿಯಿಂದ ನೇಮಕಗೊಂಡ ನೀರುಗಂಟಿ (ವಾಟರ್ ಆಪರೇಟರ್), ಜವಾನ (ಅಟೆಂಡರ್) ಮತ್ತು ಸ್ವಚ್ಛತಾಗಾರರ ಹುದ್ದೆಗಳಿಗೆ 'ಕನಿಷ್ಠ ವಿದ್ಯಾರ್ಹತೆ'ಯ ತೊಡಕು ನಿವಾರಿಸಿ ಸಭಾ ನಡಾವಳಿ, ವೇತನ ಪಾವತಿ, ಹಾಜರಾತಿ ಆಧಾರದ ಮೇಲೆ ಜಿಲ್ಲಾ ಪಂಚಾಯಿತಿಯಿಂದ ಘಟನೋತ್ತರವಾಗಿ ಅನುಮೋದನೆ ನೀಡಲು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಿರ್ದೇಶಕರು 2023ರಲ್ಲೇ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಆದೇಶಿಸಿದ್ದರು.

2017ರ ಅಕ್ಟೋಬರ್ 31ಕ್ಕೂ ಮುಂಚೆ ನೇಮಕಗೊಂಡ ಕರ ವಸೂಲಿಗಾರರು-940, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್- 1,231, ನೀರುಗಂಟಿ- 12,348, ಸ್ವಚ್ಛತಾಗಾರರು- 2,847, ಜವಾನ- 1306 ಸೇರಿದಂತೆ ಒಟ್ಟು 18,672 ಸಿಬ್ಬಂದಿಗೆ ನಾನಾ ಕಾರಣಗಳಿಂದ ಜಿಲ್ಲಾ ಪಂಚಾಯಿತಿ ಅನುಮೋದನೆ ಸಿಕ್ಕಿರಲಿಲ್ಲ. ಅವರಲ್ಲಿ 11,681 ಸಿಬ್ಬಂದಿ ಕನಿಷ್ಠ ವಿದ್ಯಾರ್ಹತೆ ಹೊಂದದ ಕಾರಣಕ್ಕೆ ಅನುಮೋದನೆಗಾಗಿ ಬಾಕಿ ಉಳಿದಿದ್ದರು.

5,711 ಸಿಬ್ಬಂದಿಗೆ ಅನುಮೋದನೆ ನೀಡಲಾಗಿದ್ದು, ಉಳಿದವರಿಗೆ 'ಸೇವಾ ಭದ್ರತೆ' ಕಲ್ಪಿಸಬೇಕಿದೆ. ಕೆಲವೆಡೆ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. ಮತ್ತೆ ಕೆಲವೆಡೆ ಬಾಕಿ ಪ್ರಕರಣಗಳ ವಿಲೇವಾರಿಗೆ ತಂಡ ರಚಿಸಿದ್ದೇವೆ. ಶೀಘ್ರದಲ್ಲೇ ಅನುಮೋದನೆ ನೀಡಲಾಗುತ್ತದೆ' ಎನ್ನುತ್ತಾರೆ ಪಂಚಾಯತ್ ರಾಜ್ ಆಯುಕ್ತಾಲಯದ ಅಧಿಕಾರಿಗಳು.



ಉದಯವಾಹಿನಿ ಚಿತ್ರ

> **ಮಂಡ್ಯ ಜಿಲ್ಲೆಯಲ್ಲಿ 601 ಸಿಬ್ಬಂದಿಗೆ ಅನುಮೋದನೆ ನೀಡುವ ಪ್ರಕ್ರಿಯೆ ಜಾರಿಯಲ್ಲಿದ್ದು ತಿಂಗಳೊಳಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ**
> **- ಕೆ.ಆರ್. ನಂದಿನಿ, ಸಿಇಒ ಮಂಡ್ಯ ಜಿಲ್ಲಾ ಪಂಚಾಯಿತಿ**

**ಹಲವು ಸೌಲಭ್ಯ:** ಜಿಲ್ಲಾ ಪಂಚಾಯಿತಿ ಅನುಮೋದನೆ ನೀಡಿದರೆ, ಕನಿಷ್ಠ ವೇತನ, ಸೇವಾ ಭದ್ರತೆ, ಅನುಕಂಪದ ಆಧಾರದಲ್ಲಿ ಕುಟುಂಬದ ಸದಸ್ಯರ ನೇಮಕ, ಪಿಂಚಣಿ ಸೌಲಭ್ಯ, ಸಕಾಲದಲ್ಲಿ ವೇತನ, ರಜೆ ಸೌಲಭ್ಯ, ವೈದ್ಯಕೀಯ ಸೌಲಭ್ಯ ಹಾಗೂ ವಿದ್ಯಾರ್ಹತೆ ಗಳಿಸಿದರೆ ಬಡ್ತಿ ಸೇರಿ ಹಲವು ಸೌಲಭ್ಯಗಳು ಸಿಬ್ಬಂದಿಗೆ ಸಿಗಲಿವೆ.

'ವೇತನ ಪಾವತಿ, ಪಂಚಾಯಿತಿ ನಿರ್ಣಯ ಮತ್ತು ಹಾಜರಾತಿ ದಾಖಲೆಗಳು ಪಿಡಿಒ ಬಳಿಯೇ ಇರುತ್ತವೆ. ಆದರೂ ದಾಖಲೆ ತಂದುಕೊಡುವಂತೆ ಸಿಬ್ಬಂದಿಯನ್ನು ಅಲೆದಾಡಿಸುತ್ತಿದ್ದಾರೆ. ಭ್ರಷ್ಟಾಚಾರದಿಂದಲೇ ಅನುಮೋದನೆ ಕಾರ್ಯ ವಿಳಂಬವಾಗಿದೆ' ಎಂದು ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಜಿ.ರಾಮಕೃಷ್ಣ ದೂರಿದ್ದಾರೆ.

# ಅಕ್ರಮ ಹಣ ವರ್ಗಾವಣೆ ಕರ್ತವ್ಯ ಲೋಪ, ಅಧಿಕಾರಿಗಳು ಮೌನ

• ಉದಯವಾಹಿನಿ, ಶಿಡ್ಲಘಟ್ಟ

ತಾಲ್ಲೂಕಿನ ಸಾದಲಿ ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ 2019 ರಿಂದ 2023 ರ ಸಾಲಿನ 14ನೇ, 15ನೇ ಹಣಕಾಸಿನ ಸರ್ಕಾರದ ಲಕ್ಷಾಂತರ ರೂ ಹಣವನ್ನು ಜವಾನ, ಜಲಗಾರರು, ಮೆಕಾನಿಕ್, ಡಿ.ಇ.ಒ, ಮತ್ತು ಅಕ್ರಮ ಕರ್ತವ್ಯ ನಿರ್ವಾಹಿತ ಬಿಲ್ ಕಲೆಕ್ಟರ್ ಸೇರಿದಂತೆ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುವ ಎಲ್ಲಾ ಸಿಬ್ಬಂದಿಗಳ ಖಾತೆಗಳಿಂದ ಸುಮಾರು 20 ಲಕ್ಷ ರೂಗಳ ಮೊತ್ತವನ್ನು ವರ್ಗಾವಣೆ ಮಾಡಿರುವುದು ಇಲಾಖೆಯ ತನಿಖಾ ವರದಿಯಿಂದ ಬೆಳಕಿಗೆ ಬಂದಿರುವ ಹಿನ್ನೆಲೆಯಲ್ಲಿ ತನಿಖೆ ನಡೆಸಿದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಶಿಡ್ಲಘಟ್ಟ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪತ್ರದ ಮೂಲಕ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲು ಆದೇಶ ನೀಡಿದ್ದರೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಹೇಮಾವತಿಯವರು ಮೌನ ವಹಿಸಿರುವುದು



ಉದಯವಾಹಿನಿ ಚಿತ್ರ

ಹಲವಾರು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

ಅದೇ ಸಾದಲಿ ಗ್ರಾಮ ಪಂಚಾಯತಿ ಕಚೇರಿಯಲ್ಲಿ ಜಿಲ್ಲಾ ಪಂಚಾಯಿತಿ ಮತ್ತು ಸರ್ಕಾರಿ ಇಲಾಖೆಯ ಸುತ್ತೋಲೆಗಳನ್ನೇ ಗಾಳಿಗೆ ತೂರಿ ಕಾನೂನು ಬಾಹಿರವಾಗಿ ಕೆ.ಹೆಚ್ ಶ್ರೀನಿವಾಸ್ ಎಂಬುವವರು ಕರವಸೂಲಿಗಾರನೆಂದು ಅಕ್ರಮವಾಗಿ ಗ್ರಾಮ ಪಂಚಾಯತಿಯಲ್ಲಿ ಹಣ ವಸೂಲಿ ಮಾಕೊಂಡಿರುವ ಬಗ್ಗೆ ತೀವ್ರ ಚರ್ಚೆಯಲ್ಲಿದ್ದರೂ ಸಹ ಆ ಹುದ್ದೆಯನ್ನು ಆಯ್ಕೆ ಮಾಡಿಕೊಳ್ಳುವ ಸಂದರ್ಭದಲ್ಲಿ ಯಾವುದೇ ಸಾರ್ವಜನಿಕ ಪ್ರಕಟಣೆಯಾಗಲಿ ಪತ್ರಿಕಾ ಜಾಹೀರಾತು ಆಗಲಿ, ಕಛೇರಿ ಸೂಚನಾ ಫಲಕದಲ್ಲಾಗಲಿ ಹುದ್ದೆ ನಿಯೋಜನೆ ಮಾಡಿರುವುದು ಯಾರು? ಎಂಬುದು ಪ್ರಸ್ನೆಯಾಗಿದ್ದರೂ ಅಧಿಕಾರಿಗಳು ಮಾತ್ರ ಮೌನವಾಗಿದ್ದಾರೆ. ಆದರೂ ರಾಜಾರೋಷವಾಗಿ ಸಾದಲಿ ಪಂಚಾಯತಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ.

### ಈ ತಕ್ಷಣವೇ ಉತ್ತರಿಸಿ

**ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಇಲಾಖೆ ಆಯುಕ್ತರಿಗೆ ವಿವರವಾದ ದೂರು ಕಳುಹಿಸಿ, ಆದೇಶಗಳ ಅನುಷ್ಠಾನಕ್ಕೆ ಕಟ್ಟುಪಾಡು ಮಾಡುವಂತೆ ಕೋರಲಾಗಿದ್ದು ಒಂದು ತಿಂಗಳ ಹಿಂದೆಯಷ್ಟೇ ಶಿಡ್ಲಘಟ್ಟ ತಾಲ್ಲೂಕು ಪಂಚಾಯತಿ ಕಾರ್ಯಾಲಯಕ್ಕೆ ಪತ್ರ ರವಾನೆಯಾಗಿದ್ದರೂ ಸಹ ನಿರ್ಲಕ್ಷ್ಯತನ ತೋರಿರುವ ಅಧಿಕಾರಿಗಳು ಈ ತಕ್ಷಣವೇ ಉತ್ತರಿಸಬೇಕಿದೆ.**

# ಸೊಳ್ಳೆಗಳ ತಡೆಗೆ ಸ್ವಚ್ಛತೆ ಕಾಪಾಡಿಕೊಳ್ಳಿ

• ಉದಯವಾಹಿನಿ, ಶ್ರೀರಂಗಪಟ್ಟಣ

ಡೆಂಗಿ, ಚಿಕೂನ್ ಗುನ್ಯಾ, ಆನೆಕಾಲು ರೋಗ, ಮಿದುಳು ಜ್ವರ ಇತರ ಕಾಯಿಲೆಗಳನ್ನು ಹರಡುವ ಸೊಳ್ಳೆಗಳ ಉತ್ಪತ್ತಿ ತಡೆಯಬೇಕಾದರೆ ಜನ ವಸತಿ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡಬೇಕು ಎಂದು ಯೋಗ ತರಬೇತುದಾರ ಕೆ.ಶೆಟ್ಟಹಳ್ಳಿ ಅಪ್ಪಾಜಿ ಸಲಹೆ ನೀಡಿದರು. ತಾಲ್ಲೂಕಿನ ಕೆ. ಶೆಟ್ಟಹಳ್ಳಿಯಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಕಚೇರಿ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಪಟ್ಟಣದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕದಿಂದ ಗುರುವಾರ ಹಮ್ಮಿಕೊಂಡಿದ್ದ ಡೆಂಗಿ ಮತ್ತು ಚಿಕೂನ್ ಗುನ್ಯಾ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

'ಮಳೆಗಾಲದಲ್ಲಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗುತ್ತಿದ್ದು, ನಿಂತ ನೀರಿನಲ್ಲಿ ಸೊಳ್ಳೆಗಳು ಮೊಟ್ಟೆ ಇಡುತ್ತವೆ. ಹಾಗಾಗಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು.


ಉದಯವಾಹಿನಿ ಚಿತ್ರ

ನೀರು ತುಂಬುವ ಸಿಮೆಂಟ್ ತೊಟ್ಟಿ ಮತ್ತು ಪಾತ್ರೆಗಳನ್ನು ವಾರಕ್ಕೆ ಒಮ್ಮೆ ತೊಳೆದು ಒಣಗಿಸಬೇಕು. ಎಳನೀರು ಚಿಪ್ಪು, ಪ್ಲಾಸ್ಟಿಕ್ ಲೋಟದಂತಹ ವಸ್ತುಗಳನ್ನು ತಕ್ಷಣ ವಿಲೇವಾರಿ ಮಾಡಬೇಕು ಎಂದು ಹೇಳಿದರ. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಮಾತನಾಡಿ, 'ಡೆಂಗಿ ಅಥವಾ ಚಿಕೂನ್ ಗುನ್ಯಾ ಲಕ್ಷಣಗಳು ಕಂಡು ಬಂದರೆ ಸಮೀಪ ಸರ್ಕಾರಿ ಆಸ್ಪತ್ರೆಗಳಲ್ಲಿ ಪರೀಕ್ಷೆ ಮಾಡಿಸಿಕೊಳ್ಳಬೇಕು. ಮಲಗುವ ಸ್ಥಳದಲ್ಲಿ ಸೊಳ್ಳೆ ಪರದೆ ಕಟ್ಟಬೇಕು. ಸೊಳ್ಳೆ ನಿರೋಧಕಗಳನ್ನು ಬಳಸಬೇಕು ಎಂದು ತಿಳಿಸಿದರು.

# ಅಸಮಾನತೆ ನಿವಾರಣೆಗೆ ಯುಕ್ತ ಕ್ರಮ

## ಸೆಪ್ಟೆಂಬರ್ ವೇಳೆಗೆ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿ ವರದಿ ಸಲ್ಲಿಕೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ರಾಜ್ಯದಾದ್ಯಂತ ಮಾಹಿತಿ ಸಂಗ್ರಹಿಸಿ ಮುಂದಿನ ಸೆಪ್ಟೆಂಬರ್ ವೇಳೆಗೆ ಪ್ರಾದೇಶಿಕ ಅಸಮತೋಲನ ನಿವಾರಣೆ ಕುರಿತು ಶಿಫಾರಸು ವರದಿ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿ ಅಧ್ಯಕ್ಷ, ಆರ್ಥಿಕ ತಜ್ಞ ಪ್ರೊ ಎಂ.ಗೋವಿಂದ ರಾವ್ ಅಭಿಪ್ರಾಯಪಟ್ಟರು. ಜಿಲ್ಲಾಡಳಿತ ಭವನದ ಸರ್.ಎಂ.ವಿ ಸಭಾಂಗಣದಲ್ಲಿ ಗುರುವಾರ ನಡೆದ ಬೆಂಗಳೂರು ವಿಭಾಗ ಮಟ್ಟದ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಂವಾದ ಸಭೆ ಹಾಗೂ ಸಾರ್ವಜನಿಕ ಶಿಫಾರಸು ಸ್ವೀಕಾರದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ಪ್ರಾದೇಶಿಕ ಅಸಮಾನತೆ ನಿವಾರಣೆಗಾಗಿ 2002ರಲ್ಲಿ ಡಾ.ಡಿ.ಎಂ.ನಂಜುಂಡಪ್ಪ ಅವರು 35 ಸೂಚ್ಯಂಕ ಪರಿಶೀಲಿಸಿ 1,200 ಪುಟಗಳ ವರದಿಯನ್ನು ಅಂದಿನ ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ್ದರು. ಈ ವರದಿಯಲ್ಲಿ ರಾಜ್ಯದ ಭೂ ಭಾಗವನ್ನು ನಾಲ್ಕು ಭಾಗಗಳಾಗಿ ವಿಂಗಡಿಸಲಾಗಿತ್ತು. ಈ ವಿಭಾಗಗಳ ಪೈಕಿ 39 ಅತ್ಯಂತ ಹಿಂದುಳಿದ ತಾಲ್ಲೂಕುಗಳು, 40 ಅತಿ ಹಿಂದುಳಿದ ತಾಲ್ಲೂಕುಗಳು ಹಾಗೂ 35 ಹಿಂದುಳಿದ ತಾಲ್ಲೂಕು ಎಂದು ಗುರುತಿಸಿ ಒಟ್ಟು 114 ತಾಲ್ಲೂಕುಗಳ ಅಭಿವೃದ್ಧಿಗೆ 31 ಸಾವಿರ ಕೋಟಿ ವಿಶೇಷ ಅನುದಾನ ವಿನಿಯೋಗಿಸಬೇಕು.


ಉದಯವಾಹಿನಿ ಚಿತ್ರ

**ಅಂಶ ವರದಿಯಲ್ಲಿ ಶಿಫಾರಸು**

ಜತೆಗೆ ಅಸಮಾನತೆ ನಿವಾರಣೆಯಲ್ಲಿ ಹಲವು ಯುಕ್ತ ಕಾರ್ಯಕ್ರಮ ಹಮ್ಮಿಕೊಳ್ಳಲು ಸಲಹೆ ನೀಡಲಾಗಿತ್ತು. ಬೆಂಗಳೂರು ವಿಭಾಗದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಜಿಲ್ಲೆಗಳ ಅಧಿಕಾರಿಗಳು, ಸರ್ಕಾರೇತರ ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರಿಂದ ಮನವಿ, ಮಾಹಿತಿ ಪಡೆಯಲಾಗಿದೆ. ಜತೆಗೆ ಲಿಖಿತವಾಗಿಯೂ ಏನಾದರೂ ಅಹವಾಲು, ಸಲಹೆ ಮನವಿ ಇದ್ದರೆ ನೇರವಾಗಿ ಬೆಂಗಳೂರಿನಲ್ಲಿರುವ ಸಮಿತಿ ಕಚೇರಿಗೆ ಕಳುಹಿಸಿಕೊಡಲು ಖುದ್ದಾಗಿ ಸಲ್ಲಿಸಲು ಸಹ ತಿಳಿಸಲಾಗಿದೆ ಎಂದು ಮಾಹಿತಿ ನೀಡಿದರು.

ತಲಾದಾಯ, ಆರೋಗ್ಯ, ಶಿಕ್ಷಣಕ್ಕೆ, ಸುಸ್ಥಿರ ಅಭಿವೃದ್ಧಿಗೆ ಪೂರಕವಾಗಿರುವ ಸೂಚ್ಯಂಕ ಪರಿಗಣಿಸಿ ಮಾಹಿತಿ ಸಂಗ್ರಹಿಸಲಾಗುವುದು. ಚಿಕ್ಕಬಳ್ಳಾಪುರ ಭಾಗದಲ್ಲಿ ನೀರಾವರಿ, ಕೃಷಿ, ರೇಷ್ಮೆ, ತೋಟಗಾರಿಕಾ ಬೆಳೆಗಳ ಆಧಾರಿತ ಉತ್ಪನ್ನಗಳನ್ನು ತಯಾರಿಸುವ ಉತ್ಪಾದನಾ ಘಟಕಗಳ ಸ್ಥಾಪನೆಗೆ ಆದ್ಯತೆ ನೀಡುವ ಅಂಶ ವರದಿಯಲ್ಲಿ ಶಿಫಾರಸು ಮಾಡಲಾಗುವುದು. ಬಾಲ್ಯವಿವಾಹ ತಡೆ ನಿಯಂತ್ರಣ ವಿಚಾರವಾಗಿ ಹಲವು ಸಲಹೆ, ಶಿಫಾರಸು ಸ್ವೀಕರಿಸಲಾಗಿದೆ. ಈ ಎಲ್ಲಾ ಅಂಶಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದರು.

### ಅನುದಾನದಿಂದ ಅಭಿವೃದ್ಧಿ ಆಗಿದೆಯೇ?

**45ಸಾವಿರ ಕೋಟಿ ಅನುದಾನವನ್ನು ಈ ಉದ್ದೇಶಕ್ಕೆ ನಿಗದಿಪಡಿಸಿ 37ಸಾವಿರ ಕೋಟಿ ಅನುದಾನ ಬಿಡುಗಡೆ ಮಾಡಿತ್ತು. ಈ ಪೈಕಿ ಈವರೆಗೆ 35ಸಾವಿರ ಕೋಟಿ ಅನುದಾನವನ್ನು ವೆಚ್ಚ ಮಾಡಲಾಗಿದೆ. ಹೀಗೆ ವೆಚ್ಚ ಮಾಡಲಾಗಿರುವ ಅನುದಾನ ಹಾಗೂ ಅನುಷ್ಠಾನ ಮಾಡಿರುವ ಕಾರ್ಯಕ್ರಮಗಳಿಂದ ರಾಜ್ಯದಲ್ಲಿ ಹಿಂದುಳಿದ ತಾಲ್ಲೂಕುಗಳು ಅಭಿವೃದ್ಧಿ ಆಗಿವೆಯೇ? ಇಲ್ಲವೆ ಎಂಬುದನ್ನು ಅಧ್ಯಯನ ಮಾಡಬೇಕು ಹಾಗೂ ನಂಜುಂಡಪ್ಪ ವರದಿ ಅನುಷ್ಠಾನವಾಗಿ 22 ವರ್ಷ ಕಳೆದಿದೆ.**

> **ಅಂದು ಪರಿಣಿಸಿದ್ದ ಕೆಲವು ಸೂಚ್ಯಂಕಗಳು ಮಾತ್ರ ಇದೀಗ ಮೌಲ್ಯ ಕಳೆದುಕೊಂಡಿವೆ. ಜೊತೆಗೆ 176 ತಾಲ್ಲೂಕುಗಳ ಬದಲಾಗಿ ಪ್ರಸ್ತುತ ರಾಜ್ಯದಲ್ಲಿ 240 ತಾಲ್ಲೂಕುಗಳಾಗಿವೆ. ಇಂತಹ ಎಲ್ಲಾ ವಿಚಾರಗಳನ್ನು ಅವಲೋಕನ ಮಾಡಿ ಪ್ರಾದೇಶಿಕ ಅಸಮಾನತೆ ನಿವಾರಣೆಗೆ ಏನೆಲ್ಲ ಯುಕ್ತ ಕ್ರಮ ಕೈಗೊಳ್ಳಬೇಕು ಎಂಬ ಕುರಿತ ಶಿಫಾರಸು ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವ ಉದ್ದೇಶದಿಂದ ಈ ಸಮಿತಿಯನ್ನು ರಾಜ್ಯ ಸರ್ಕಾರ ರಚಿಸಿದೆ**
> **- ಪ್ರೊ. ಎಂ.ಗೋವಿಂದ ರಾವ್ ಆರ್ಥಿಕ ತಜ್ಞ**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಜನರೊಡನೆ ಬೆರೆಯಲು ಬಿಡುವಿನ ವೇಳೆಯನ್ನು ಹೊಂದಿದ್ದೀರಿ ಮತ್ತು ಅಧಿಕವಾಗಿ ಮಾಡಬಯಸುವ ವಿಷಯಗಳನ್ನು ಮಾಡುತ್ತೀರಿ. ಜೀವನ ಸಂಗಾತಿಯ ಪ್ರೀತಿಯ ಬೆಚ್ಚನೆಯ ಭಾವವನ್ನು ಅನುಭವಿಸುತ್ತೀರಿ.

**ವೃಷಭ** ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು–ಸಮಯದ ಜೊತೆ ನಿಮ್ಮ ಆಲೋಚನೆಗಳನ್ನು ಬದಲಾಯಿಸಿಕೊಳ್ಳಿ–ಇದು ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ.

**ಮಿಥುನ** ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸುವುದು ನಿಮ್ಮ ಕಾಯಿಲೆಯನ್ನು ಇನ್ನಷ್ಟು ಉಲ್ಬಣಿಸಬಹುದಾದ್ದರಿಂದ ಹಾಗೆ ಮಾಡಬೇಡಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ಕರ್ಕಾಟಕ** ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು.

**ಸಿಂಹ** ನೀವು ಒಂದು ದೀರ್ಘ ಪ್ರಯಾಣಕ್ಕೆ ಹೋಗಲು ಯೋಜನೆ ಹಾಕುತ್ತಿದ್ದ ಹಾಗೆ ನಿಮ್ಮ ಆರೋಗ್ಯ ಮತ್ತು ಇಂಧನ ಸಂರಕ್ಷಣೆಯ ಹವ್ಯಾಸ ನಿಮಗೆ ಅಪಾರವಾದ ಉಪಯೋಗವುಂಟುಮಾಡುತ್ತದೆ.

**ಕನ್ಯಾ** ಜನರು ನಿಮಗೆ ಹೊಸ ಭರವಸೆ ಹಾಗೂ ಕನಸುಗಳನ್ನು ನೀಡುತ್ತಾರೆ. ಇದು ನಿಮ್ಮ ಸ್ವಸಾಮರ್ಥ್ಯವನ್ನು ಅವಲಂಬಿಸಿರುತ್ತದೆ. ಉತ್ತಮ ಸಮಯವನ್ನು ನೆನಪಿಸಲು ನಿಮ್ಮ ಸ್ನೇಹವನ್ನು ನೆನಪು ಮಾಡಿಕೊಳ್ಳುವ ಸಮಯ.

**ತುಲಾ** ಸಂತೋಷದಿಂದ ತುಂಬಿದ ಒಳ್ಳೆಯ ದಿನ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು.

**ವೃಶ್ಚಿಕ** ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು.

**ಧನಸ್ಸು** ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ. ನೀವು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು.

**ಮಕರ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

**ಕುಂಭ** ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ. ಇಲ್ಲದಿದ್ದರೆ ನೀವು ಖಾಲಿ ಕೈಯಲ್ಲಿ ಜೊತೆ ತೆರಳುತ್ತೀರಿ.

**ಮೀನ** ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿಸುವುದರಿಂದ ಅವುಗಳನ್ನು ತಡೆಯಬೇಕು.

## ಗಾಳಿ ಮಳೆಗೆ ಮಾವು ಹಾನಿ ಸೂಕ್ತ ಪರಿಹಾರಕ್ಕೆ : ಮಲ್ಲನಗೌಡ ಆಗ್ರಹ

• ಉದಯವಾಹಿನಿ ವಡಗೇರಾ

**ಅತಿ ಹೆಚ್ಚು ಗಾಳಿ ಆಲಿಕಲ್ಲು ಮಳೆ**

ತಾಲ್ಲೂಕು ಹಾಗೂ ಜಿಲ್ಲೆಯ ಕೆಲವು ಕಡೆ ಇತ್ತೀಚೆಗೆ ಸುರಿದ ಭಾರಿ ಮಳೆ ಹಾಗೂ ಆಲಿಕಲ್ಲು ಗಾಳಿಗೆ ಕೆಲವು ಗ್ರಾಮಗಳಲ್ಲಿ ಹಣ್ಣುಗಳ ರಾಜ ಎಂದು ಕರೆಯುವ ಮಾವಿನ ಕಾಯಿಗಳು ಉದುರಿ ಬಿದ್ದಿದ್ದು ಸಾಕಷ್ಟು ಪ್ರಮಾಣದಲ್ಲಿ ಹಾನಿಯಾಗಿದೆ ಮಾವು ಬೆಳೆಗಾರರಿಗೆ ಸರಕಾರ ಸೂಕ್ತ ಪರಿಹಾರ ನೀಡುವಂತೆ ರಾಜ್ಯ ರೈತ ಸಂಘ ಹಸಿರು ಸೇನೆ ವಾಸುದೇವ ಮೇಟಿ ಬಣದ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ ಆಗ್ರಹಿಸಿದ್ದಾರೆ. ತಾಲ್ಲೂಕಿನ ಇನ್ನಿತರ ಗ್ರಾಮಗಳಲ್ಲಿಯೂ





ಉದಯವಾಹಿನಿ ಚಿತ್ರ

ಮಾವಿನ ಬೆಳೆ ನೆಲ ಕಚ್ಚಿದ್ದು ಹೆಚ್ಚಿನ ಪ್ರಮಾಣದಲ್ಲಿ ಹಾನಿ ಉಂಟಾಗಿದೆ ಸಾಲ ಸುಲಾ ಮಾಡಿ ದುಬಾರಿ ಹಣ ಖರ್ಚು ಮಾಡಿ ಮಾವು ಬೆಳೆದಿದ್ದೆವು ಅತಿ ಹೆಚ್ಚು ಗಾಳಿ ಆಲಿಕಲ್ಲು ಮಳೆಗೆ ಮಾವಿನ ಕಾಯಿಗಳು ಉದುರಿ ಬಿದ್ದಿವೆ ಎಂದು ಮಾವು ಬೆಳೆಗಾರರಾದ ಮಲ್ಲಿಕಾರ್ಜುನ್ ರೆಡ್ಡಿ ಬಿಳಾರ, ಚಾಂದ್ ಪಾಶ ಕುರುಕುಂದಿ ಅಳಲು ತೋಡಿಕೊಂಡಿದ್ದಾರೆ.

ಇನ್ನೇನು ಕೆಲವೇ ದಿನಗಳಲ್ಲಿ ಮಾವಿನ ಬೆಳೆಯು ಕೈಗೆ ಬರುತ್ತಿತ್ತು ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ ಎಂದು ರೈತರು ಹೇಳುತ್ತಾರೆ ಈಗ ಮಾವು ಬೆಳೆಗಾರರು ತೀವ್ರ ಸಂಕಷ್ಟದಲ್ಲಿದ್ದು ಮಾವು ಬೆಳಗಾರರಿಗೆ ಸೂಕ್ತ ಪರಿಹಾರ ನೀಡುವಂತೆ ರಾಜ್ಯ ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಮಲ್ಲನಗೌಡ ಹಗರಟಗಿ ಸರಕಾರಕ್ಕೂ ಮತ್ತು ಜಿಲ್ಲಾಡಳಿತಕ್ಕೆ ಒತ್ತಾಯಿಸಿದ್ದಾರೆ.

### ದಿ.ಮಾಜಿ ಸಿಎಂ. ವೀರೇಂದ್ರ ಪಾಟೀಲ ಮತ್ತು ದಿ.ಮಾಜಿ ಸಚಿವ ವೈಜೇನಾಥ ಪಾಟೀಲ ಇಬ್ಬರು ರಾಜ್ಯಕ್ಕೆ ಮಾದರಿ: ಎಂ.ವೈ.ಪಾಟೀಲ

## ಏ.29ರಂದು ಜಿಲ್ಲಾ ಮಟ್ಟದ 892ನೆ ಜಯಂತ್ಯೋತ್ಸವ

• ಉದಯವಾಹಿನಿ, ಚಿಂಚೋಳಿ

ವೀರಶೈವ ಲಿಂಗಾಯತ ಸಮಾಜದ ಮಾಜಿ ಮುಖ್ಯಮಂತ್ರಿ ದಿ.ವೀರೇಂದ್ರ ಪಾಟೀಲ ಮತ್ತು ಮಾಜಿ ಸಚಿವ ದಿ.ವೈಜೀನಾಥ ಪಾಟೀಲರು ಇಬ್ಬರು ರಾಜ್ಯಕ್ಕೆ ಹಾಗೂ ರಾಷ್ಟ್ರಕ್ಕೆ ಮಾದರಿ ರಾಜಕಾರಣಿಯಾಗಿದ್ದರು ಎಂದು ಅಫ್ಜಲಾಪೂರ ಶಾಸಕ ಎಂ.ವೈ.ಪಾಟೀಲ ಬಣ್ಣಿಸಿದರು.

ಪಟ್ಟಣದ ಹಾರಕೂಡ ಚನ್ನಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಸಮಾಜದ ವತಿಯಿಂದ ಹಮ್ಮಿಕೊಂಡ ಕಲಬುರ್ಗಿ ಜಿಲ್ಲಾ ಮಟ್ಟದ 892ನೆ ಜಯಂತ್ಯೋತ್ಸವ ಇದೆ ತಿಂಗಳು 29ರಂದು ಬಹಿರಂಗ ಸಭೆ ಹಮ್ಮಿಕೊಂಡ ನಿಮಿತ್ತ ತಾಲ್ಲೂಕಿನ ವೀರಶೈವ ಲಿಂಗಾಯತ ಸಮಾಜದ ಬಾಂಧವರಿಗೆ ಅಹ್ವಾನಿಸಲು ಕರೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಮೊದಲು ಬಸವ ಜಯಂತಿಯು ಪಶುಗಳಿಗೆ ಮೆರವಣಿಗೆ ಮಾಡುವ ಮೂಲಕ ಆಚರಣೆ ಮಾಡುತ್ತಿದ್ದೇವು ಈಗ ಬದಲಾವಣೆಯಾಗಿದೆ ಬಸವೇಶ್ವರ ಆದರ್ಶ ತತ್ವಗಳನ್ನು ಮತ್ತು ಬಸವೇಶ್ವರ ಸಾಹಿತ್ಯಗಳು ಜನರಿಗೆ ಜಾಗೃತಗೊಳಿಸಬೇಕಾಗಿದೆ.

ಇದೆ 30ಕ್ಕೆ ಜಯಂತಿ ಇರುತ್ತದೆ 29ಕ್ಕೆ ಬಹಿರಂಗ ಸಭೆ ಹಮ್ಮಿಕೊಂಡಿದ್ದು ಅರ್ಥಪೂರ್ಣವಾಗಿ ಅದ್ದೂರಿಯಾಗಿ ಜಯಂತ್ಯೋತ್ಸವ ಕಾರ್ಯಕ್ರಮ ಮಾಡಲು ತೀರ್ಮಾನಿಸಲಾಗಿದೆ.

**ಅವೈಜ್ಞಾನಿಕ ಜಾತಿ ಜನಗಣತಿ**

ವೀರಶೈವ ಲಿಂಗಾಯತ ಸಮಾಜದವರು ಎಲ್ಲೋರು ಪಾಲ್ಗೊಂಡು ಯಶಸ್ಸಿಗೊಳಿಸಬೇಕು, ಮತ್ತು ಈಗ ಆಧುನಿಕ ಯುಗದಲ್ಲಿ ಲಿಂಗಪೂಜೆ ಅಷ್ಟವರಣ ಕುರಿತು ಆಚರಣೆ ಮಾಡಲು ಸಮಾಜದವರಿಗೆ ಜಾಗೃತಗೊಳಿಸುವ ಕಾರ್ಯ ಮಾಡಲಾಗುವುದು.

ಜಾತಿಜನಗಣತಿಯಲ್ಲಿ ನಮ್ಮ ಸಮಾಜ 65ಲಕ್ಷ ಮಾತ್ರ ತೋರಿಸಲಾಗುತ್ತಿದೆ, ಇದು ಅವೈಜ್ಞಾನಿಕ ಜಾತಿಜನಗಣತಿವಿದೆ, ನಮ್ಮ ಸಮಾಜದವರು ಜಿಗುಪ್ಸೆಗೊಂಡಿದೆ,ಜನಸಂಖ್ಯೆಯಲ್ಲಿ ಕಡಿಮೆಯಾಗಲು ಉಪ ಪಂಗಡಗಳ ಹೆಸರು ಬರೆಯುವುದರಿಂದ ಕಡಿಮೆಯಾಗಿರಬಹುದು ಎಂಬುವುದು ಆಗಿದೆ, ಸರ್ಕಾರಗಳು ನಮ್ಮನ್ನು ಒಡೆದು ಆಳುವ ನೀತಿ ಅನುಸರಿಸುತ್ತಿದೆ,ಜಾತಿ ಆಧಾರದ ಮೇಲೆ ನಮ್ಮನ್ನು ಒಡೆಯುತ್ತಿದ್ದಾರೆ,ರಾಜ್ಯದಲ್ಲಿ 7ಕೋಟಿ ಜನ ಸಂಖ್ಯೆಯಲ್ಲಿ ಲಿಂಗಾಯತರು 2ಕೋಟಿಗಿಂತ ಹೆಚ್ಚು ಜನವಿದ್ದೇವೆ.



ಉದಯವಾಹಿನಿ ಚಿತ್ರ

> **ನಮಗೆ 371ಜೆ ಬಗ್ಗೆ ಗೊತ್ತೇ ಇರಲಿಲ್ಲ ಆದರೆ 371ಜೆ ಬಗ್ಗೆ ನಮಗೆಲ್ಲಾ ಗೊತ್ತಾಗಿದ್ದು ದಿ.ವೈಜಿನಾಥ ಪಾಟೀಲರಿಂದ,ಆದರೆ ಅನೇಕರು ಒಂದು ಕಾಲದಲ್ಲಿ ಅಪಹಸ್ಯವಾಗಿ ಅವರಿಗೆ ಮಾಡುತ್ತಿದ್ದರು,ಈಗ 371ಜೆ ಇದ್ದ ಉದ್ಯೋಗ ಶಿಕ್ಷಣದಲ್ಲಿ ಮೀಸಲಾತಿ ದೊರಕುತ್ತಿದೆ,371ಜೇ ದ್ವೀಪ ಹಚ್ಚಿದೆ ವೈಜಿನಾಥ ಪಾಟೀಲ ಇಂಥಹ ದೊಡ್ಡ ಕೆಲಸಗಳೆ ವೀರಶೈವ ಲಿಂಗಾಯತರು ಮಾಡಿದ್ದಾರೆ** -ಎಂ.ವೈ.ಪಾಟೀಲ

> **ಕಲಬುರ್ಗಿಯಲ್ಲಿ ಇದೆ 29ರಂದು ಬಸವಣ್ಣನವರ 892ನೇ ಜಯಂತಿ ಆಚರಣೆ ಮಾಡುವುದು ಹೆಸರಿಗೆ ಮಾತ್ರ, ನಮ್ಮ ವೀರಶೈವ ಲಿಂಗಾಯತ ಸಮಾಜದವರು ಶಕ್ತಿ ಪ್ರದರ್ಶನ ಮಾಡುವುದಕ್ಕೆ ಕಾರ್ಯಕ್ರಮ ಮಾಡುತ್ತಿದ್ದೇವೆ ರಾಜ್ಯ, ದೇಶಕ್ಕೆ ನಮ್ಮ ಶಕ್ತಿ ತೋರಿಸಬೇಕಾಗಿದೆ. ಜಾತಿಜನಗಣತಿಯಲ್ಲಿ ನಮ್ಮನ್ನು ಒಡೆದು ಆಳುವ ರೀತಿ ಅನುಸರಿಸಿ ಜಾತಿ ಆಧಾರದ ಮೇಲೆ ನಮ್ಮನ್ನು ಸರ್ಕಾರ ಒಡೆಯುತ್ತಿದೆ, ಸಮಾಜದ ಬಗ್ಗೆ ಆಚಾರ ವಿಚಾರಗಳು ಜಾಗೃತಯಿರುವ ಬಗ್ಗೆ ದೊಡ್ಡ ದೊಡ್ಡ ವಾಗ್ಮಿಗಳು ತಿಳಿಸುತ್ತಾರೆ, ಎಲ್ಲೋರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು.**
> – ರಾಜಶೇಖರ ಸಿರಿ, ಕಾರ್ಯದರ್ಶಿ, ರಾಜ್ಯ ಅಖಿಲ ಭಾರತ ವೀರಶೈವ ಮಹಾಸಭಾ

ಪ್ರಜಾಪ್ರಭುತ್ವದಲ್ಲಿ ಬಸವಣ್ಣನವರ ವಿಚಾರ ಧಾರೆಗಳು ಅಂಬೇಡ್ಕರ್ ಅವರು ಹಲವಾರು ವಿಷಗಳು ಒಪ್ಪಿಕೊಂಡು ಸರ್ವಜನಾಂಕ್ಕೆ ಅನುಕೂಲವಾಗುವಂತೆ ಅಂಬೇಡ್ಕರ್ ಅವರು ಅತ್ಯಂತ ಬಲಿಷ್ಠ ಭಾರತ ಸಂವಿಧಾನ ರಚಿಸಿದ್ದಾರೆ.

ಮಾಜಿ ಎಂಎಲ್ಸಿ ಅಮರನಾಥ ಪಾಟೀಲ್, ರಾಜಶೇಖರ ಸಿರಿ, ಸಿದ್ದುಗೌಡ ಅಫ್ಜಲಪೂರ, ಗೌತಮ್ ವೈಜೀನಾಥ ಪಾಟೀಲ್, ಶರಣು ತೆಂಗಳಿ, ಭೀಮಶಂಕರ ಮಾತನಾಡಿ ಏಪ್ರಿಲ್ 29ಮತ್ತು 30ರಂದು ಎರಡು ದಿನ ಕಲಬುರ್ಗಿ ಚಲೋ ಎಂಬ ಕಾರ್ಯಕ್ರಮ ಹಮ್ಮಿಕೊಂಡು ವೀರಶೈವ ಲಿಂಗಾಯತರು ಕುಟುಂಬ ಸಮೇತ ಎಲ್ಲೋರು ಆಗಮಿಸಿ ಕಾರ್ಯಕ್ರಮ ಯಶಸ್ಸಿಗೊಳಿಸಬೇಕು ಎಂದರು.

ಸಂತೋಷ ಗಡಂತಿ ಸ್ವಾಗತಿಸಿ, ನಿರೂಪಿಸಿದರು, ನಂದಿಕುಮಾರ ಪಾಟೀಲ ವಂದಿಸಿದರು,ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಶಾಂತವೀರ ಹೀರಾಪೂರ, ವೀರೇಶ ಎಂಪಳ್ಳಿ, ನೀಲಕಂಠ ಸೀಳಿನ, ರೇವಣಸಿದ್ದಪ್ಪ, ಮಲ್ಲಿಕಾರ್ಜುನ, ರಾಜಶೇಖರ, ಶಿವುಸ್ವಾಮಿ, ಮಲ್ಲಿಕಾರ್ಜುನ ಸ್ವಾಮಿ, ಸಂಗಮೇಶ ಮೂಲಿಮನಿ, ಸುರೇಶ ದೇಶಪಾಂಡೆ, ಸೇರಿದಂತೆ ಅನೇಕ ಮುಖಂಡರು ಇದ್ದರು.

## ಭಾರೀ ಗಾಳಿ ಸಮೇತ ಆಲಿಕಲ್ಲು ಮಳೆ, ಅಪಾರ ಹಾನಿ

• ಉದಯವಾಹಿನಿ, ಯಾದಗಿರಿ



ಉದಯವಾಹಿನಿ ಚಿತ್ರ

ಜಿಲ್ಲೆಯ ಶಹಾಪುರ ತಾಲ್ಲೂಕಿನ ಶಾರದಹಳ್ಳಿ ಗ್ರಾಮದಲ್ಲಿ ಕಳೆದ ದಿನ ಸಂಜೆ 7 ಗಂಟೆಯಿದ ಎಂಟು ಗಂಟೆಯವರೆಗೆ ಉಂಟಾದ ಭಾರೀ ಗಾಳಿ ಸಮೇತ ಆಲಿಕಲ್ಲು ಮಳೆಗೆ ಅಪಾರ ಹಾನಿಯುಂಟಾಗಿದೆ. ಗ್ರಾಮದ ರಸ್ತೆ ಬದಿಯ ಮರಗಳು ಮುರಿದು ನೆಲಕಚ್ಚಿವೆ, ಅನೇಕ ಮನೆಗಳ ಮೇಲಿನ ಟೀನ್ ಶೀಟ್‌ಗಳು ಗಾಳಿಯ ರಭಸಕ್ಕೆ ಹಾರಿಹೋಗಿವೆ, ರೈತರ ಗದ್ದೆಗಳಲ್ಲಿನ ಭತ್ತದ ಬೆಳೆಗೆ ಅಪಾರ ಹಾನಿಯಾಗಿದೆ ಮತ್ತು ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ತಡೆಗೋಡೆಯ ಮೇಲೆ ಮರ,ವಿದ್ಯುತ್ ಕಂಬಗಳು ಮುರಿದು ಬಿದ್ದಿವೆ.

## ಆಡಳಿತಸೌಧ ಆವರಣದಲ್ಲಿ ಡಾ. ಅಂಬೇಡ್ಕರ ಪುತ್ಥಳಿಗೆ ಡಿಎಸ್‌ಎಸ್ ಆಗ್ರಹ

• ಉದಯವಾಹಿನಿ, ಇಂಡಿ



ಉದಯವಾಹಿನಿ ಚಿತ್ರ

ಆಡಳಿತ ಸೌಧ ಆವರಣದಲ್ಲಿ ಸಂವಿದಾನ ಶಿಲ್ಪಿ ಡಾ. ಬಾಬಾ ಸಾಹೇಬ ಅಂಬೇಡ್ಕರ ರವರ ಮೊರ್ತಿ ಪ್ರತಿಷ್ಠಾಪಿಸಬೇಕೆಂದು ಆಗ್ರಹಿಸಿ ದಲಿತ ಸಂಘರ್ಷ ಸಮಿತಿ ಸಂಘಟನೆ ಭೀಮವಾದದ ಕಾರ್ಯಕರ್ತರು ಕಂದಾಯ ಉಪವಿಬಾಗಾಧಿಕಾರಿ ಅನುರಾಧಾ ವಸ್ತ್ರದ ಮತ್ತು ತಹಶೀಲ್ದಾರ ಬಿ.ಎಸ್. ಕಡಕಬಾವಿ ಇವರಿಗೆ ಮನವಿ ಸಲ್ಲಿಸಿದರು. ರಾಜಧಾನಿ ಬೆಂಗಳೂರಿನ ವಿಧಾನಸೌಧ ಎದುರು ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರ ರವರ ಪುತ್ಥಳಿ ಪ್ರತಿಸ್ಥಾಪಿಸಿ ವಿಧಾನಸೌಧಕ್ಕೆ ಮೆರಗು ಬಂದಿದೆ. ಅದೇ ಮಾದರಿಯಲ್ಲಿ ಪಟ್ಟಣದ ಆಡಳಿತಸೌಧದಲ್ಲಿ ಪ್ರತಿಷ್ಠಾಪಿಸಲು ಆಗ್ರಹಿಸಿದರು. ಮಲ್ಲು ಮಡ್ಡಿಮನಿ, ವಿಕಾಸ ಗುಡಿಮನಿ,ಅಂಬಣ್ಣಾ ರಾಂಪೂರ,ಸಿದರಾಮ ಕೆಂಗಾರ, ಚನ್ನಪ್ಪ ನಡಗಡ್ಡಿ,ಚಂದಪ್ಪ ಸಿಗಣಾಪುರ,ಸಮರ್ಥ ಕೋಳೆಕರ,ಲಕ್ಷ್ಮಣ ಗುಂದವಾನ,ಸಂತೋಷ ಬೋವಿ, ಪ್ರಕಾಶ ಕಾಂಬಳೆ,ಈಶ್ವರ ಮನಗೂಳಿ, ನಾಗರಾಜ, ಬಾಬು ಪವಾರ ಮತ್ತಿತರಿದ್ದರು.

### ಆಹಾರ ಪೌಷ್ಟಿಕತೆ, ನೈರ್ಮಲ್ಯ ಜ್ಞಾನ ತಿಳಿದು ಸ್ವಾಸ್ಥ ಸಮಾಜ ಕಟ್ಟಿಕೊಳ್ಳಿ

## ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ

• ಉದಯವಾಹಿನಿ, ಚಿತ್ರದುರ್ಗ

ಆಹಾರ ಪೌಷ್ಠಿಕತೆ ನೈರ್ಮಲ್ಯ ಜ್ಞಾನ ತಿಳಿದು ಸ್ವಾಸ್ಥ್ಯ ಸಮಾಜ ಕಟ್ಟಿಕೊಳ್ಳಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ವಿಜಾಪುರ ಗ್ರಾಮದ ಅಂಗನವಾಡಿ ಕೇಂದ್ರದ ಬಳಿ ಇರುವ ಹನುಮಂತ ದೇವಸ್ಥಾನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ ಮತ್ತು ಚಿಕ್ಕ ಬೆನ್ನೂರು ಗ್ರಾಮ ಪಂಚಾಯತಿ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಗ್ರಾಮ ಆರೋಗ್ಯ, ಪೌಷ್ಟಿಕ ನೈರ್ಮಲ್ಯ ಸಭೆಯಲ್ಲಿ ಅವರು ಮಾತನಾಡಿದರು.

ಗರ್ಭಿಣಿ, ಬಾಣಂತಿ, ಮಕ್ಕಳು ಮತ್ತು ವಯೋವೃದ್ಧರಲ್ಲಿ ಕಂಡು ಬರುವ ರಕ್ತ ಹೀನತೆ ಸರಿದೂಗಿಸಲು ನುಗ್ಗೆ ಸೊಪ್ಪು, ಬಸಲೆ, ಗೋಣಿ ದಂಟಿನ ಸೊಪ್ಪು, ಪಾಲಕ ಸೊಪ್ಪು ಹೇರಳವಾಗಿ ಬಳಸಿ ಮನೆಗಳ ಮುಂದೆ ಕೈ ತೋಟ ಮಾಡಿಕೊಂಡು



ಉದಯವಾಹಿನಿ ಚಿತ್ರ

ನಿಮ್ಮ ಮನೆಗೆ ಅಗತ್ಯವಿರುವ ತರಕಾರಿಗಳನ್ನು ಬೆಳೆಯಲು ಪ್ರಾರಂಭಿಸಿ ಕುಟುಂಬದ ಆರ್ಥಿಕ ಹೊರೆ ಕಡಿಮೆ ಮಾಡಿ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಅವರು ಕೈ ತೊಳೆಯುವ ವಿಧಾನದ ಬಗ್ಗೆ ಹಾಗೂ ಕುಟುಂಬ ಯೋಜನೆಯಲ್ಲಿ ಪುರುಷರ ಭಾಗವಹಿಸುವಿಕೆ ಬಗ್ಗೆ ತಿಳಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್ ಕುಮಾರ್ ಕ್ಷಯರೋಗ ನಿಯಂತ್ರಣದ ಬಗ್ಗೆ ತಿಳಿಸಿದರು. ಅಂಗನವಾಡಿ ಕೇಂದ್ರದ ಮಕ್ಕಳಿಗೆ ಲಸಿಕಾ ಅಧಿವೇಶನ ನಡೆಸಿ 10 ಮಕ್ಕಳಿಗೆ ವಿವಿಧ ಹಂತದ ಲಸಿಕೆ ನೀಡಲಾಯಿತು. ಪೌಷ್ಟಿಕಾಹಾರ ಪ್ರಾತ್ಯಕ್ಷಿಕೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಚಂದ್ರಶೇಖರ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಶೋಭಾ, ಸ್ಥಳೀಯ ಸಮುದಾಯ ಸಂಪನ್ಮೂಲ ವ್ಯಕ್ತಿ ಆಶಾ, ಆಶಾ ಕಾರ್ಯಕರ್ತೆ ಮಮತ, ಗ್ರಾಮದ ಮುಖಂಡರಾದ ಕೆ.ದ್ಯಾಮಪ್ಪ, ತಿಪ್ಪೇಸ್ವಾಮಿ, ನಾಗರಾಜು, ಕಿಶೋರಿಯರು, ಗರ್ಭಿಣಿಯರು, ಮಕ್ಕಳು ಉಪಸ್ಥಿತರಿದ್ದರು

> **ಆಹಾರ ವರ್ಗೀಕರಣ, ಶಕ್ತಿ ವರ್ಧಕ ಆಹಾರ, ದೇಹದ ಬೆಳವಣಿಗೆಗೆ ಅಗತ್ಯವಾದ ಆಹಾರ ಮತ್ತು ದೇಹದ ರಕ್ಷಣೆಗೆ ಬೇಕಾದ ಆಹಾರಗಳು, ಧಾನ್ಯಗಳು, ದ್ವಿದಳ ದಾನ್ಯಗಳು, ಸೊಪ್ಪು ತರಕಾರಿ ಮೀನು, ಹಾಲು-ತುಪ್ಪ, ಬೇಳೆಕಾಳುಗಳು, ಅನ್ನಾಂಗಗಳ ಉಪಯೋಗ ದೊರೆಯುವ ಮೂಲ ಬಳಸುವ ವಿಧಾನದ ಬಗ್ಗೆ ತಿಳಿಸಿದರು.**

### ಹುಬ್ಬಳ್ಳಿ ಎನ್‌ಕೌಂಟರ್ ಪ್ರಕರಣ

## ತನಿಖೆ ಮುಂದುವರೆಸಿದ ಸಿಐಡಿ ತಂಡ

• ಉದಯವಾಹಿನಿ, ಹುಬ್ಬಳ್ಳಿ

ಎನ್‌ಕೌಂಟರ್ ಪ್ರಕರಣ ಸಂಬಂಧ ಸಿಐಡಿ ಎಸ್.ಪಿ. ವೆಂಕಟೇಶ ನೇತೃತ್ವದಲ್ಲಿ ಡಿವೈಎಸ್‌ಪಿ ಪುನೀತ್ ಕುಮಾರ್, ಇನ್ಸ್‌ಪೆಕ್ಟರ್ ಮಂಜುನಾಥ ಅವರು ಪೊಲೀಸರಿಂದ ಪ್ರಾಥಮಿಕ ಮಾಹಿತಿಯನ್ನು ಸಂಗ್ರಹಿಸಿದ್ದಾರೆ. ಇನ್ನಷ್ಟು ಈ ಪ್ರಕರಣ ಕುರಿತು ದಾಖಲೆಗಳನ್ನು ಪಡೆದರು. ಕೃತ್ಯಗಳು ನಡೆದ ಘಟನಾ ಸ್ಥಳವನ್ನು ಪರಿಶೀಲಿಸಿದರು.

**ಮರಣೋತ್ತರ ಪರೀಕ್ಷೆ:** ರಿತೇಶ ಕುಮಾರನ ಮೃತದೇಹದ ಮರಣೋತ್ತರ ಪರೀಕ್ಷೆ ಸಿಐಡಿ ಅಧಿಕಾರಿಗಳ ಮತ್ತು ತಾಲ್ಲೂಕು ದಂಡಾಧಿಕಾರಿಗಳ ಸಮ್ಮುಖದಲ್ಲಿ ನಡೆದಿದೆ. ಇದರ ಸಂಪೂರ್ಣವಾಗಿ ಚಿತ್ರಿಕರಣ ಮಾಡಲಾಗಿದ್ದು ಮೃತದೇಹ ಕೊಂಡೊಯ್ಯಲು ಸಂಬಂಧಿಕರು ಯಾರೂ ಬಾರದ ಕಾರಣ ಕೆಲ ದಿನಗಳವರೆಗೆ ಶವ ಸಂರಕ್ಷಿಸಿಟ್ಟು ನಂತರ ಅಂತ್ಯಕ್ರಿಯೆ ನಡೆಯುವ ಸಾಧ್ಯತೆ.

**ಪಾಟ್ನಾಗೆ ಹುಬ್ಬಳ್ಳಿ ಪೊಲೀಸರ ತಂಡ :** ಅಪ್ರಾಪ್ತ ಬಾಲಕಿ ಕೊಲೆ ಪಾತಕಿ ರಿತೇಶ್ ಕುಮಾರ್ ಕುಟುಂಬದ ಪತ್ತೆಗೆ ಪೊಲೀಸರ ತಂಡ ಬಿಹಾರದ ಪಾಟ್ನಾಕ್ಕೆ ತೆರಳಿದೆ.

**ಸ್ವಪ್ರೇರಣೆಯಿಂದ ತನಿಖೆ**

> **ಪ್ರಕರಣದ ತನಿಖಾ ಹಂತದಲ್ಲಿ ಪೊಲೀಸರ ವಶದಲ್ಲಿದ್ದ ಆರೋಪಿ ಮೃತಪಟ್ಟರೆ, ನ್ಯಾಯಾಲಯದ ಆದೇಶದಂತೆ ಸ್ವಯಂಪ್ರೇರಣೆಯಿಂದ ಆ ಪ್ರಕರಣದ ತನಿಖೆ ನಡೆಸುತ್ತದೆ. ಇದೇ ಹಿನ್ನೆಲೆಯಲ್ಲಿ ಬೆಂಗಳೂರಿನಿಂದ ಬಂದ ಸಿಐಡಿ ಅಧಿಕಾರಿಗಳ ತಂಡ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹಸ್ತಾಂತರಿಸಿಕೊಂಡು ತನಿಖೆ ಪ್ರಾರಂಭಿಸಿದ್ದಾರೆ ಎಂದು ಡಿಸಿಪಿ ಮಹಾನಿಂಗ ನಂದಗಾವಿ ತಿಳಿಸಿದ್ದಾರೆ.**

## ಪ್ರಜಾಸೌಧ ಬಿಟ್ಟರೆ ಉಳಿದೆಲ್ಲವು ಹೊಸ ಕಾಮಗಾರಿಗಳು

• ಉದಯವಾಹಿನಿ, ಬೀದರ್

ಹಳೆಯ ಕಾಮಗಾರಿಗಳಿಗೆ ಪುನಃ ಶಂಕುಸ್ಥಾಪನೆ ಮಾಡುತ್ತಿಲ್ಲ, ಎಲ್ಲಾ ಹೊಸ ಕಾಮಗಾರಿಗಳಿಗೆ ಮಾಡುತ್ತಿದ್ದೇವೆ. 2017ರಲ್ಲಿ ಮುಖ್ಯಮಂತ್ರಿ ಜಿಲ್ಲಾಡಳಿತ ಸಂಕೀರ್ಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದರು. ಆದರೆ, ನಂತರ ಬಂದ ಬಿಜೆಪಿ ಸರ್ಕಾರ ಏನೂ ಕೆಲಸ ಮಾಡಲಿಲ್ಲ. ಈಗ ನಮ್ಮ ಕೆಲಸಕ್ಕೆ ಅಡ್ಡ ಹಾಕುತ್ತಿದ್ದಾರೆ. 48 ಕೋಟಿಯಲ್ಲಿ ಜಿಲ್ಲಾಡಳಿತ ಭವನಕ್ಕೆ ಶಂಕುಸ್ಥಾಪನೆ ಆಗುತ್ತಿದ್ದು, 18 ತಿಂಗಳಲ್ಲಿ ಕೆಲಸ ಪೂರ್ಣಗೊಳ್ಳಲಿದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಕಾರ್ಯಕ್ರಮ ಬಹಿಷ್ಕರಿಸಿರುವ ಬಿಜೆಪಿ ಶಾಸಕರ ವಿರುದ್ಧ ಹರಿಹಾಯ್ದರು.

ಸಿಎಂ ಕಾರ್ಯಕ್ರಮಕ್ಕೆ ಬಹಿಷ್ಕಾರ ಹಾಕಲು ಬಿಜೆಪಿಯವರಿಗೆ ಯಾವುದೇ ನೈತಿಕತೆ ಇಲ್ಲ. ಅವರು ಅಧಿಕಾರದಲ್ಲಿದ್ದಾಗ ಯಾವುದೇ ಕೆಲಸ ಮಾಡಲಿಲ್ಲ. ಸಮಾಜ ಒಡೆಯುವ ಕೆಲಸ ಮಾಡಿದರು. ಅನುಭವ ಮಂಟಪಕ್ಕೆ ಬುನಾದಿ ಹಾಕಿದ್ದು ಸಿದ್ದರಾಮಯ್ಯನವರು. ನಮ್ಮ ಸರ್ಕಾರ ಬಂದ ನಂತರ ಕಾಮಗಾರಿ ವೇಗವಾಗಿ ನಡೆಯುತ್ತಿದೆ. ಮುಂದಿನ ವರ್ಷದ ಏಪ್ರಿಲ್‌ನಲ್ಲಿ



ಉದಯವಾಹಿನಿ ಚಿತ್ರ

ಕಾಮಗಾರಿ ಪೂರ್ಣವಾಗಲಿದೆ' ಎಂದು ತಿಳಿಸಿದರು.

'ಬಿಎಸ್‌ಎಸ್‌ಕೆ ಕಾರ್ಖಾನೆಯ ಕಾರ್ಮಿಕರು ಬೀದಿಗೆ ಬಿದ್ದಿದ್ದಾರೆ. ಅದರ ಪುನಶ್ಚೇತನಕ್ಕೆ ಕ್ರಮ ಕೈಗೊಳ್ಳಬೇಕು. ಕಾರಂಜಾ ಜಲಾಶಯ ಯೋಜನೆಯಲ್ಲಿ ಜಮೀನು ಕಳೆದುಕೊಂಡು ಸಂತ್ರಸ್ತರಾದವರಿಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು. ಜಿಲ್ಲೆಯಲ್ಲಿ ಶೇ 10ರಷ್ಟು ನೀರಾವರಿ ಪ್ರದೇಶವಿದ್ದು, 2 ಸಾವಿರ ಕೋಟಿ ಅನುದಾನ ಕೊಟ್ಟು ಅದನ್ನು ಹೆಚ್ಚಿಸಬೇಕು. ಬೀದರ್ ವಿಶ್ವವಿದ್ಯಾಲಯದಲ್ಲಿ ಮೂಲಸೌಕರ್ಯಕ್ಕೆ ಕೆಕೆಆರ್‌ಡಿಬಿ ಹಾಗೂ ಸರ್ಕಾರದಿಂದ ಅನುದಾನ ಕೊಡಬೇಕು. ಖಾಲಿಯಿರುವ ಹುದ್ದೆಗಳನ್ನು ತುಂಬಬೇಕು ಎಂದು ಸಚಿವ ಈಶ್ವರ ಬಿ. ಖಂಡ್ರೆ ಅವರು ಮುಖ್ಯಮಂತ್ರಿಯವರಲ್ಲಿ ಮನವಿ ಮಾಡಿದರು.

## ಸಿಡಿಲಿಗೆ ಹೊತ್ತಿ ಉರಿದ ಮರ

• ಉದಯವಾಹಿನಿ, ಸುಳ್ಯ

ಪೆರಾಜೆಯ ಮಜಿಕೋಡಿ ಎಂಬಲ್ಲಿ ಸಂಜೆ ಮರಕ್ಕೆ ಸಿಡಿಲು ಬಡಿದ ಘಟನೆ ವರದಿಯಾಗಿದ್ದು ನಂತರ ಅದೇ ಮರದಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಮರದಲ್ಲಿ ಬೆಂಕಿ ಕಂಡ ಸ್ಥಳೀಯರು ಸುಳ್ಯ ಅಗ್ನಿ ಶಾಮಕ ದಳದವರಿಗೆ ವಿಷಯ ತಿಳಿಸಿದ ಮೇರೆಗೆ ಅಗ್ನಿ ಶಾಮಕ ದಳದ ವಾಹನ ಆಗಮಿಸಿದ್ದು, ಬೆಂಕಿ ಕಾಣಿಸಿಕೊಂಡ ಸ್ಥಳಕ್ಕೆ ಅಗ್ನಿ ಶಾಮಕ ದಳದ ವಾಹನ ಹೋಗಲು ಸಾಧ್ಯವಾಗದಿರುವುದರಿಂದ ಮತ್ತೆ ಹಿಂತಿರುಗಬೇಕಾಯಿತು. ನಂತರ ಊರಿನ ಯುವಕರ ಸತತ ಕಾರ್ಯಚರಣೆಯ ಮೂಲಕ ಬೆಳಿಗ್ಗಿನ ಜಾವ 4 ಗಂಟೆ ಸುಮಾರಿಗೆ ಬೆಂಕಿಯನ್ನು ನಂದಿಸಿದರು.



ಉದಯವಾಹಿನಿ ಚಿತ್ರ

## ವ್ಯಕ್ತಿಯೋರ್ವರ ಮೇಲೆ ತಲವಾರಿನಿಂದ ದಾಳಿ

• ಉದಯವಾಹಿನಿ, ಬಂಟ್ವಾಳ

ಮೊಬೈಲ್ ಅಂಗಡಿಗೆ ಬೀಗ ಹಾಕಿ ಮುಚ್ಚುತ್ತಿರುವ ವೇಳೆ ವೈಯಕ್ತಿಕ ವಿಚಾರಕ್ಕೆ ಸಂಬಂಧಿಸಿದಂತೆ ವ್ಯಕ್ತಿಯೋರ್ವನಿಗೆ ತಲವಾರಿನಿಂದ ದಾಳಿ ನಡೆಸಿದ ಘಟನೆ ಬಂಟ್ವಾಳ ನಗರ ಪೋಲೀಸ್ ಠಾಣಾ ವ್ಯಾಪ್ತಿಯ ನೆಹರುನಗರ ಎಂಬಲ್ಲಿ ಮಧ್ಯ ರಾತ್ರಿ ವೇಳೆ ನಡೆದಿದೆ.

ನೆಹರುನಗರ ನಿವಾಸಿ ತಸ್ಲೀಮ್ ಎಂಬುವವರ ಮೇಲೆ ತಲವಾರುನಿಂದ ದಾಳಿ ನಡೆಸಲಾಗಿದೆ. ಗಂಭೀರವಾಗಿ ಗಾಯಗೊಂಡ ಅವರನ್ನು ಮಂಗಳೂರು ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದು, ತುರ್ತು ಚಿಕಿತ್ಸಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಿಳಿದುಬಂದಿದೆ. ತಸ್ಲೀಮ್ ಅವರು ಪಾಣೆಮಂಗಳೂರು ನೆಹರು ನಗರದಲ್ಲಿರುವ ಹೈವೆ ಹೋಟೆಲ್ ಪಕ್ಕದಲ್ಲಿ ಮೊಬೈಲ್ ಶಾಪ್ ಹೊಂದಿದ್ದು, ಅಂಗಡಿ ಬಂದ್ ಮಾಡುವ ಸಂದರ್ಭದಲ್ಲಿ ಅವರ



ಉದಯವಾಹಿನಿ ಚಿತ್ರ

ಮೇಲೆ ತಲವಾರಿನಿಂದ ದಾಳಿ ನಡೆಸಲಾಗಿದೆ. ಹಣದ ವಿಚಾರಕ್ಕೆ ಸಂಬಂಧಿಸಿದಂತೆ ಅವರ ಮೇಲೆ ದಾಳಿ ನಡೆಸಲಾಗಿದೆ ಎನ್ನಲಾಗಿದೆ. ತಸ್ಲೀಮ್ ಅವರ ಸ್ನೇಹಿತ ಮತ್ತು ಇದೇ ಪರಿಸರದ ಹ್ಯಾರೀಶ್ ಎಂಬಾತ ತಲವಾರಿನಿಂದ ದಾಳಿ ನಡೆಸಿ ಪರಾರಿಯಾಗಿದ್ದಾರೆ ಎಂದು ಬಂಟ್ವಾಳ ನಗರ ಪೋಲೀಸ್ ಠಾಣೆಗೆ ದೂರು ನೀಡಲಾಗಿದೆ. ಇದೀಗ ಪೋಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿ ಪತ್ತೆಗೆ ಮುಂದಾಗಿದ್ದಾರೆ. ಘಟನಾ ಸ್ಥಳಕ್ಕೆ ಬಂಟ್ವಾಳ ನಗರ ಠಾಣಾ ಪೋಲೀಸ್ ಭೇಟಿ ನೀಡಿ ಪ್ರಕರಣದ ಬಗ್ಗೆ ತನಿಖೆ ಮುಂದುವರಿಸಿದ್ದಾರೆ.

### ಮನೆ ಖರ್ಚಿಗಾಗಿ ಕೋಳಿಗಳನ್ನು ಸಾಕಿಕೊಂಡಿದ್ದ ಬಡವರಿಗೆ ಅವುಗಳನ್ನು ಉಳಿಸಿಕೊಳ್ಳುವುದೇ ಸವಾಲಾಗಿದೆ

## ನಾಟಿ ಕೋಳಿಗಳಿಗೆ ಸನ್ ಸ್ಟ್ರೋಕ್: ಉತ್ತರ ಕನ್ನಡದಲ್ಲಿ ಬಿಸಿಲು ಭಾರೀ ಹೆಚ್ಚಳ

• ಉದಯವಾಹಿನಿ, ಕಾರವಾರ

ಬೇಸಿಗೆ ಬಿಸಿಲು ಏರುತ್ತಿದ್ದಂತೆಯೇ ಸಾಕು ಕೋಳಿಗಳು ಉಷ್ಣತೆಯಿಂದ ಅನಾರೋಗ್ಯಕ್ಕೆ ಒಳಗಾಗಿ ಸಾಯಲಾರಂಭಿಸಿವೆ. ಮನೆ ಖರ್ಚಿಗಾಗಿ ಕೋಳಿಗಳನ್ನು ಸಾಕಿಕೊಂಡಿದ್ದ ಬಡವರಿಗೆ ಅವುಗಳನ್ನು ಉಳಿಸಿಕೊಳ್ಳುವುದೇ ಸವಾಲಾಗಿದೆ.

ಬೇಸಿಗೆಯಲ್ಲಿ ಸಾಮಾನ್ಯವಾಗಿ ಕೋಳಿಗಳಲ್ಲಿ ಈ ರೀತಿಯ ಬದಲಾವಣೆ ಆಗುತ್ತವೆ. ಇದ್ದಕ್ಕಿಂತೆಯೇ ಸಾಕು ಕೋಳಿಗಳು ಸಾಯುವುದು ನೋಡಿ ಜನ ಕಂಗಾಲಾಗಿದ್ದಾರೆ. ಬೇಸಿಗೆಯಲ್ಲಿ ಗ್ರಾಮೀಣ ಭಾಗದಲ್ಲಿ ಜಾತ್ರೆಗಳು ಜೋರಾಗಿ ನಡೆಯುತ್ತವೆ.

ಬಹುತೇಕ ಗ್ರಾಮೀಣ ದೇವಸ್ಥಾನಗಳಲ್ಲಿ ಜಾತ್ರೆಗಳಲ್ಲಿ ನಾಟಿ ಕೋಳಿ ಬಲಿ ನಡೆಯುತ್ತವೆ. ಈ ಹಬ್ಬದ ಹಂಗಾಮಿಗಾಗಿಯೇ ಅನೇಕರು ಮನೆಯಲ್ಲಿ ನಾಟಿ ಕೋಳಿ ಸಾಕಿಕೊಂಡಿರುತ್ತಾರೆ. ಆದರೆ, ಜಾತ್ರೆಗಳು ಪೂರ್ತಿಯಾಗಿ ಆರಂಭವಾಗುವ ಮೊದಲೇ ಕೋಳಿಗಳು ಸಾಯಲಾರಂಭಿಸಿದ್ದೇ ಜನರ ಚಿಂತೆಗೆ ಕಾರಣ.

- ಸಾಕಿದ ದಷ್ಟ ಪುಷ್ಟ ಕೋಳಿ ಸಾವು: ಗ್ರಾಮೀಣರ ಜಾತ್ರೆ ಸಂಭ್ರಮ ದೂರ
- ಗೂಡುಗಳಲ್ಲಿ ಕೂಡ ಗಾಳಿ, ನೆರಳು ಇರುವಂತೆ ನೋಡಿಕೊಳ್ಳಬೇಕು.
- ಕುಡಿಯಲು ಕೊಡುವ ನೀರಿಗೆ ಚಿಟಿಕೆಯಷ್ಟು ಉಪ್ಪು ಮತ್ತು ಸಕ್ಕರೆ ಬೆರೆಸಿದರೆ ಇನ್ನೂ ಉತ್ತಮ.

**ಜಾತ್ರೆ ಸಂಭ್ರಮ ದೂರ**



ಉದಯವಾಹಿನಿ ಚಿತ್ರ

ವರ್ಷ ಪೂರ್ತಿ ಸಾಕಿದ ಕೋಳಿಗಳು ದಷ್ಟ ಪುಷ್ಟವಾಗಿ ಬೆಳೆದು ಇನ್ನೇನು ಫಲ ಕೊಡಬೇಕು ಎನ್ನುವಾಗ ಇದ್ದಕ್ಕಿದ್ದಂತೆ ಸಾಯುತ್ತಿರುವುದು ಜನರ ದುಡಿಮೆಗೇ ಕುತ್ತು ತಂದಂತಾಗಿದೆ. ಕೆಲ ಕಡೆಗಳಲ್ಲಂತೂ ಒಂದರ ಬೆನ್ನಿಗೆ ಒಂದರಂತೆ ಕೋಳಿಗಳು ಸಾಯುತ್ತಿವೆ.

ಈ ರೀತಿಯ ಸಾವನ್ನು ಅಲ್ಲಲ್ಲಿ ರೋಗ ಎಂದು ಭಾವಿಸುತ್ತಿದ್ದಾರೆ. ವಾಸ್ತವದಲ್ಲಿ ಇದು ಯಾವುದೇ ರೋಗವಲ್ಲ, ಬಿಸಿಲ ತಾಪದಿಂದ ನಿತ್ರಾಣಗೊಂಡು ಕೋಳಿಗಳು ಸಾಯುತ್ತಿವೆ ಎಂದು ಪಶುವೈದ್ಯಕೀಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಬೇಸಿಗೆಯಲ್ಲಿ ಮನುಷ್ಯರಿಗೆ ಆಗುವ ತೊಂದರೆ ರೀತಿಯಲ್ಲಿಯೇ ಕೋಳಿಗಳು ತೊಂದರೆಗೆ ಒಳಗಾಗುತ್ತವೆ. ಆ ಕಾರಣದಿಂದಲೇ ಕೋಳಿಗಳು ಸಾಮಾನ್ಯವಾಗಿ ಈ ಅವಧಿಯಲ್ಲಿ ಸಾಯುತ್ತವೆ. ಸದ್ಯ ಜಿಲ್ಲೆಯಲ್ಲಿ ಕೋಳಿಗಳಿಗೆ ರೋಗ ಬಂದಿದೆ ಎಂಬುದು ಎಲ್ಲಿಯೂ ವರದಿಯಾಗಿಲ್ಲ.

ಕೋಳಿಗಳು ಓಡಾಡುವ ಕಡೆಗಳಲ್ಲಿ ನೆರಳು ಸೃಷ್ಟಿ ಮಾಡಬೇಕು. ಗೂಡುಗಳಲ್ಲಿ ಕೂಡ ಗಾಳಿ, ನೆರಳು ಇರುವಂತೆ ನೋಡಿಕೊಳ್ಳಬೇಕು. ಕುಡಿಯಲು ಕೊಡುವ ನೀರಿಗೆ ಚಿಟಿಕೆಯಷ್ಟು ಉಪ್ಪು ಮತ್ತು ಸಕ್ಕರೆ ಬೆರೆಸಿದರೆ ಇನ್ನೂ ಉತ್ತಮ. ಅದರಿಂದ ಕೋಳಿಗಳಿಗೆ ಚೈತನ್ಯ ಸಿಗುತ್ತದೆ. ಬೇಸಿಗೆ ಮುಗಿಯುವ ವರೆಗೆ ಇದೇ ರೀತಿಯ ಆರೈಕೆ ಮಾಡುವುದರಿಂದ ಕೋಳಿಗಳನ್ನು ಉಳಿಸಿಕೊಳ್ಳಬಹುದು ಎಂದು ಅವರು ಮಾಹಿತಿ ನೀಡುತ್ತಾರೆ.

ಬೇಸಿಗೆಯಲ್ಲಿ ಬಿಸಲು ಜಾಸ್ತಿ ಇರುವಾಗ ಕೋಳಿಗಳು ಸನ್ ಸ್ಟ್ರೋಕ್ ನಿಂದ ಸಾಯುತ್ತವೆ. ಜಿಲ್ಲೆಯಲ್ಲಿ ನಾಟಿ ಕೋಳಿಗಳಿಗೆ ಸದ್ಯ ಯಾವುದೇ ರೋಗಗಳು ಹರಡಿಲ್ಲ. ಕೋಳಿಗಳಿಗೆ ಕುಡಿಯಲು ಸಾಕಷ್ಟು ನೀರು ಕೊಡುವುದೇ ಇದಕ್ಕೆ ಪರಿಹಾರ ಎಂದಿದ್ದಾರೆ ಮೋಹನ, ಪಶುವೈದ್ಯಕೀಯ ಇಲಾಖೆ ಉಪನಿರ್ದೇಶಕ.

**ಕೋಳಿಗಳ ರಕ್ಷಣೆ ಹೇಗೆ?**

> **ಮನೆಯಲ್ಲಿಸಾಕಿದ ಕೋಳಿಗಳು ಹಿತ್ತಲಲ್ಲಿ ಮುಕ್ತವಾಗಿ ಓಡಾಡಿಕೊಂಡು ಜೀವಿಸುತ್ತವೆ. ಬೇಸಿಗೆಯಲ್ಲಿ ಎಲ್ಲಾ ಕಡೆಯೂ ಕೋಳಿಗಳಿಗೆ ನೀರು ಸಿಗುವುದಿಲ್ಲ. ಬಿಸಿಲು ಮತ್ತು ಕರಾವಳಿಯ ಆದ್ರತೆಯಿಂದ ಕೋಳಿಗಳು ನಿಶಕ್ತಗೊಳ್ಳುತ್ತವೆ. ಅಂಥ ಸಂದರ್ಭದಲ್ಲಿ ಕೋಳಿಗಳು ಬಾಯಿ ತೆಗೆದು ಗಾಳಿ ತೆಗೆದೆಕೊಳ್ಳುತ್ತಿರುತ್ತವೆ. ಅಂದರೆ, ಅವುಗಳಿಗೆ ನೀರಿನ ಅವಶ್ಯಕತೆ ಇದೆ ಎಂದರ್ಥ. ಅಂಥ ಪರಿಸ್ಥಿತಿಯಲ್ಲಿ ಕೋಳಿಗಳಿಗೆ ಕುಡಿಯಲು ಸಾಕಷ್ಟು ನೀರು ಇಡಬೇಕು ಎಂದು ಪಶು ವೈದ್ಯಕೀಯ ಇಲಾಖೆ ಉಪನಿರ್ದೇಶಕ ಮೋಹನ ತಿಳಿಸುತ್ತಾರೆ.**

## ಕಂಬದ ಮೇಲೆ ಉರುಳಿದ ಮರ: ವಿದ್ಯುತ್ ವ್ಯತ್ಯಯ

• ಉದಯವಾಹಿನಿ, ತರೀಕೆರೆ

ಲಿಂಗದಹಳ್ಳಿ ಹೋಬಳಿಯ ಮುಳ್ಳಟ್ಟಿ ಬೈಲು ಗ್ರಾಮದ ರಸ್ತೆ ಬದಿಯಲ್ಲಿದ್ದ ಹುಣಸೆ ಮರವೊಂದು ಉರುಳಿ, ವಿದ್ಯುತ್ ಕಂಬ, ಮರದ ಕೆಳಗೆ ನಿಲ್ಲಿಸಿದ್ದ ಲಾರಿ ಜಖಂಗೊಂಡಿದೆ.



ಉದಯವಾಹಿನಿ ಚಿತ್ರ

ಮರವು ವಿದ್ಯುತ್ ಕಂಬದ ಮೇಲೆ ಬಿದ್ದಿರುವುದರಿಂದ ತಣಿಗೆಬೈಲು, ಹುಣಸೆಬೈಲು, ದೂಪದ ಖಾನ್, ಕೆಮ್ಮಣ್ಣಗುಂಡಿ, ನಂದಿಗಾವೆ. ದಂಡುಬಿಟ್ಟ ಹಾರ ಸೇರಿದಂತೆ ವಿವಿಧ ಗ್ರಾಮಗಳ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಿತ್ತು.


ಘಟನೆ ಸ್ಥಳಕ್ಕೆ ಲಿಂಗದಹಳ್ಳಿ ಮೆಸ್ಕಾಂ ವಿಭಾಗದ ಎಂಜಿನಿಯರ್ ತಿಪ್ಪೇಶ್ ಸಿಬ್ಬಂದಿ ಜತೆ ಧಾವಿಸಿ ಮುರಿದು ಬಿದ್ದಿದ್ದ ಕಂಬದ ಬದಲಿಗೆ ಹೊಸ ಕಂಬವನ್ನು ಅಳವಡಿಸಿದ್ದಾರೆ. ತುಂಡಾಗಿ ಬಿದ್ದಿದ್ದ ವಿದ್ಯುತ್ ಮಾರ್ಗದ ತಂತಿಗಳನ್ನು ಸರಿಪಡಿಸಿ ವಿದ್ಯುತ್ ಸರಬರಾಜಿನ ವ್ಯವಸ್ಥೆ ಮಾಡಿದರು.

# ರಾಷ್ಟ್ರಪತಿಗೆ ಸುಪ್ರೀಂ ಕೋರ್ಟ್ ಗಡುವು ವಿಧಿಸಲು ಸಾಧ್ಯವಿಲ್ಲ
# ನ್ಯಾಯಾಂಗದ ವಿರುದ್ಧ ಧನಕರ್ ವಾಗ್ದಾಳಿ

**ನವದೆಹಲಿ:** ಮಸೂದೆಗಳ ಕುರಿತು ನಿರ್ಧರಿಸಲು ರಾಷ್ಟ್ರಪತಿಗಳಿಗೆ ಸಮಯ ನಿಗದಿಪಡಿಸಿದ ಸುಪ್ರೀಂ ಕೋರ್ಟ್‌ನ ಇತ್ತೀಚಿನ ತೀರ್ಪಿನ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ ಉಪರಾಷ್ಟ್ರಪತಿ ಜಗದೀಪ್ ಧನಕರ್, ನ್ಯಾಯಾಲಯಗಳು ರಾಷ್ಟ್ರಪತಿಗಳಿಗೆ ನಿರ್ದೇಶನ ನೀಡಲು ಸಾಧ್ಯವಿಲ್ಲ ಎಂದು ಗುರುವಾರ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಕಳೆದ ವಾರ, ಸುಪ್ರೀಂ ಕೋರ್ಟ್ ಮೊದಲ ಬಾರಿಗೆ, ರಾಜ್ಯಪಾಲರು ಅಥವಾ ರಾಷ್ಟ್ರಪತಿಗಳು ಮಸೂದೆಗಳನ್ನು ಸ್ವೀಕರಿಸಿದ ದಿನಾಂಕದಿಂದ 3 ತಿಂಗಳೊಳಗೆ ಅವುಗಳಿಗೆ ಅಂಕಿತ ಹಾಕಬೇಕು ಎಂದು ಗಡುವು ವಿಧಿಸಿ ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿತ್ತು. ರಾಜ್ಯಸಭೆಯ ಇಂಟರ್ನ್‌ಗಳನ್ನು ಉದ್ದೇಶಿಸಿ ಮಾತನಾಡಿದ ಉಪ ರಾಷ್ಟ್ರಪತಿ ಧನಕರ್, ಇತ್ತೀಚಿನ ತೀರ್ಪಿನಿಂದ ರಾಷ್ಟ್ರಪತಿಗಳಿಗೆ ನಿರ್ದೇಶನವಿದೆ. ನಾವು ಎಲ್ಲಿಗೆ ಹೋಗುತ್ತಿದ್ದೇವೆ? ದೇಶದಲ್ಲಿ ಏನು ನಡೆಯುತ್ತಿದೆ, ನಾವು ಅತ್ಯಂತ ಸೂಕ್ಷ್ಮವಾಗಿರಬೇಕು. ಯಾರಾದರೂ ಟೀಕಿಸುತ್ತಾರೋ ಇಲ್ಲವೋ ಎಂಬ ಪ್ರಶ್ನೆಯಲ್ಲ. ರಾಷ್ಟ್ರಪತಿಗಳಿಗೆ ಗಡುವು ನೀಡಲಾಗಿದೆ ಮತ್ತು ಆ ಗಡುವು ಮೀರಿದರೆ ಅದು ಕಾನೂನಾಗುತ್ತದೆ ಎಂದು ಧನಕರ್ ಹೇಳಿದರು.

**ದೇಶದಲ್ಲಿ ಏನು ನಡೆಯುತ್ತಿದೆ?**



ರಾಜ್ಯ ಮಸೂದೆಗಳಿಗೆ ಒಪ್ಪಿಗೆ ನೀಡುವಲ್ಲಿ ರಾಷ್ಟ್ರಪತಿ, ರಾಜ್ಯಪಾಲರ ಪಾತ್ರ ಕುರಿತು ಸುಪ್ರೀಂ ಕೋರ್ಟ್ ತೀರ್ಪು, ಪರಿಶೀಲನಾ ಅರ್ಜಿ ಸಲ್ಲಿಕೆಗೆ ಗೃಹ ಸಚಿವಾಲಯ ಚಿಂತನೆ ಆದ್ದರಿಂದ ನಮ್ಮಲ್ಲಿ ಶಾಸನ ರಚಿಸುವ, ಕಾರ್ಯಕಾರಿ ಕಾರ್ಯಗಳನ್ನು ನಿರ್ವಹಿಸುವ, ಸೂಪರ್ ಪಾರ್ಲಿಮೆಂಟ್ ಆಗಿ ಕಾರ್ಯನಿರ್ವಹಿಸುವ ನ್ಯಾಯಾಧೀಶರು ಇದ್ದಾರೆ ಮತ್ತು ಅವರಿಗೆ ಯಾವುದೇ ಹೊಣೆಗಾರಿಕೆ ಇಲ್ಲ. ಏಕೆಂದರೆ ಈ ನೆಲದ ಕಾನೂನು ಅವರಿಗೆ ಅನ್ವಯಿಸುವುದಿಲ್ಲ ಎಂದು ವಾಗ್ದಾಳಿ ನಡೆಸಿದರು.

ಭಾರತದ ರಾಷ್ಟ್ರಪತಿಗಳು ಬಹಳ ಉನ್ನತ ಸ್ಥಾನದಲ್ಲಿದ್ದಾರೆ ಎಂದು ಪ್ರೇಕ್ಷಕರಿಗೆ ನೆನಪಿಸಿದ ಧನಕರ್, ರಾಷ್ಟ್ರಪತಿಗಳು ಸಂವಿಧಾನವನ್ನು ಸಂರಕ್ಷಿಸುವುದಾಗಿ, ರಕ್ಷಿಸುವುದಾಗಿ ಮತ್ತು ಸಮರ್ಥಿಸಿಕೊಳ್ಳುವುದಾಗಿ ಪ್ರಮಾಣ ವಚನ ಸ್ವೀಕರಿಸುತ್ತಾರೆ. ಆದರೆ ಉಪ ರಾಷ್ಟ್ರಪತಿಗಳು ಸೇರಿದಂತೆ ಸಚಿವರು, ಸಂಸದರು ಮತ್ತು ನ್ಯಾಯಾಧೀಶರು ಸಂವಿಧಾನವನ್ನು ಪಾಲಿಸುವುದಾಗಿ ಪ್ರಮಾಣ ವಚನ ಸ್ವೀಕರಿಸುತ್ತಾರೆ ಎಂದರು.

ನೀವು ಭಾರತದ ರಾಷ್ಟ್ರಪತಿಗೆ ನಿರ್ದೇಶಿಸುವ ಪರಿಸ್ಥಿತಿಯನ್ನು ನಾವು ನೋಡಲು ಸಾಧ್ಯವಿಲ್ಲ ಮತ್ತು ಯಾವ ಆಧಾರದ ಮೇಲೆ? ಸಂವಿಧಾನದ ಅಡಿಯಲ್ಲಿ ನೀವು ಹೊಂದಿರುವ ಏಕೈಕ ಹಕ್ಕು 142ನೇ ವಿಧಿಯಡಿ ನೀಡಲಾಗಿರುವ ವಿಶೇಷಾಧಿಕಾರ, ಅಲ್ಲಿ ಐದು ಅಥವಾ ಅದಕ್ಕಿಂತ ಹೆಚ್ಚು ನ್ಯಾಯಾಧೀಶರು ಇರಬೇಕು ಎಂದು ಅವರು ಹೇಳಿದರು.

## ಯೂಟ್ಯೂಬರ್ ನಿವಾಸದ ಮೇಲೆ ಗ್ರೆನೆಡ್ ಎಸೆದಿದ್ದ ಸೇನಾ ಜವಾನ ಸೆರೆ



**ಚಂಡೀಗಢ:** ಕಳೆದ ತಿಂಗಳು ಜಲಂಧರ್ ಮೂಲದ ಯೂಟ್ಯೂಬರ್ ನಿವಾಸದ ಮೇಲೆ ಗ್ರೆನೇಡ್ ಎಸೆದ ಘಟನೆಗೆ ಸಂಬಂಧಿಸಿದಂತೆ ಸೇನಾ ಜವಾನನನ್ನು ಬಂಧಿಸಲಾಗಿದೆ ಎಂದು ಪಂಜಾಬ್ ಪೊಲೀಸರು ತಿಳಿಸಿದ್ದಾರೆ. ಹ್ಯಾಂಡ್ ಗ್ರೆನೇಡ್ ಎಸೆದ ಆರೋಪಿಗೆ ಆನ್‌ಲೈನ್ ತರಬೇತಿ ನೀಡಿದ ಆರೋಪದ ಮೇಲೆ ಜಮ್ಮು ಮತ್ತು ಕಾಶ್ಮೀರದಲ್ಲಿ ನಿಯೋಜಿತರಾಗಿದ್ದ ಸೇನಾ ಜವಾನ್ ಸುಖರಣ್ ಸಿಂಗ್ ಅವರನ್ನು ಬಂಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಮಾರ್ಚ್ 15 ಮತ್ತು 16 ರ ಮಧ್ಯರಾತ್ರಿ ಯೂಟ್ಯೂಬರ್ ರೋಜರ್ ಸಂಧು ಅವರ ನಿವಾಸದ ಮೇಲೆ ಹ್ಯಾಂಡ್ ಗ್ರೆನೇಡ್ ಎಸೆಯಲಾಗಿತ್ತು.

ಆದರೆ, ಗ್ರೆನೇಡ್ ಸ್ಫೋಟಗೊಳ್ಳಲಿಲ್ಲ, ಈ ವಿಷಯದಲ್ಲಿ ಜವಾನನ ಪಾತ್ರದ ಬಗ್ಗೆ ಸೇನಾ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದೇವೆ ಎಂದು ಪೊಲೀಸರು ತಿಳಿಸಿದ್ದಾರೆ. ಜಲಂಧರ್‌ನ ನ್ಯಾಯಾಲಯವು ಸೇನಾ ಜವಾನನನ್ನು ಐದು ದಿನಗಳ ಪೊಲೀಸ್ ಕಸ್ಟಡಿಗೆ ಕಳುಹಿಸಿದ್ದು, ಈ ವಿಷಯದಲ್ಲಿ ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು. ಈ ಘಟನೆಯ ನಂತರ, ಮುಸ್ಲಿಂ ಸಮುದಾಯದ ವಿರುದ್ಧ ಅವಹೇಳನಕಾರಿ ಭಾಷೆಯನ್ನು ಬಳಸಿದ ಆರೋಪದ ಮೇಲೆ ಯೂಟ್ಯೂಬರ್ ನಿವಾಸದ ಮೇಲೆ ನಡೆದ ದಾಳಿಯ ಜವಾಬ್ದಾರಿಯನ್ನು ಪಾಕಿಸ್ತಾನಿ ದರೋಡೆಕೋರ ಶಹಜಾದ್ ಭಟ್ಟಿ ವಹಿಸಿಕೊಂಡಿದ್ದರು. ಈವರೆಗೆ ಏಳು ಮಂದಿಯನ್ನು ಬಂಧಿಸಲಾಗಿದೆ.

# ಡೊನಾಲ್ಡ್ ಟ್ರಂಪ್ ಸುಂಕ ನೀತಿಗಳಿಂದ ಆರ್ಥಿಕತೆಗೆ ಹಾನಿ
# ಯುಎಸ್ ಸೆಂಟ್ರಲ್ ಬ್ಯಾಂಕ್ ಮುಖ್ಯಸ್ಥ

**ವಾಷಿಂಗ್ಟನ್ ಡಿಸಿ:** ಇಡೀ ಜಗತ್ತೇ ಬೇಡ ಎಂದರೂ ಹೊಸ ಸುಂಕ ನೀತಿಗಳನ್ನು ಜಾರಿ ಮಾಡಿ ಜಾಗತಿಕ ಆರ್ಥಿಕತೆ ಡೋಲಾಯಮಾನ ಸ್ಥಿತಿ ತಲುಪುವಂತ ಮಾಡಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಈ ವಿಚಾರವಾಗಿ ತಮ್ಮವರ ಸಲಹೆಗಳನ್ನೂ ಸ್ವೀಕರಿಸದಷ್ಟು ಹಠಮಾರಿ ಧೋರಣೆ ಅನುಸರಿಸುತ್ತಿದ್ದಾರೆ.

ಆದರೆ ಇದೀಗ ಅಮೆರಿಕದ ಸೆಂಟ್ರಲ್ ಬ್ಯಾಂಕ್ ಆಗಿರುವ ಫೆಡರಲ್ ರಸರ್ವ್ ಸಿಸ್ಟಮ್(ಫೆಡ್) ಮುಖ್ಯಸ್ಥ ಜರೋಮ್ ಪೊವೆಲ್ ಕೂಡ, ಡೊನಾಲ್ಡ್ ಟ್ರಂಪ್ ಅವರ ಹೊಸ ಸುಂಕ ನೀತಿಗಳನ್ನು ಟೀಕಿಸಿದ್ದಾರೆ. ಈ ಕುರಿತು ಮಾತನಾಡಿರುವ ಪೊವೆಲ್, ಡೊನಾಲ್ಡ್ ಟ್ರಂಪ್ ಅವರ ಜಾಗತಿಕ ವ್ಯಾಪಾರ ಯುದ್ಧದ ಪರಿಣಾಮಗಳು ಹಲವು ಕೈಗಾರಿಕೆಗಳ ಮೇಲೆ ಆಗುತ್ತಿವೆ. ಟ್ರಂಪ್ ಆಡಳಿತದ ನೀತಿ ಬದಲಾವಣೆಗಳಿಂದಾಗಿ ಫೆಡರಲ್ ರಿಸರ್ವ್ ಹೊಸ ಸವಾಲುಗಳನ್ನು ಎದುರಿಸುತ್ತಿದೆ ಎಂದು ಎಚ್ಚರಿಸಿದ್ದಾರೆ.

- **ಡೊನಾಲ್ಡ್ ಟ್ರಂಪ್ ಅವರ ಜಾಗತಿಕ ವ್ಯಾಪಾರ ಯುದ್ಧಕ್ಕೆ ಅಮೆರಿಕದಲ್ಲೇ ಹೆಚ್ಚುತ್ತಿದೆ ಪ್ರತಿರೋಧ. ಯುಎಸ್ ಫೆಡರಲ್ ರಿಸರ್ವ್ ಸಿಸ್ಟಮ್ ಮುಖ್ಯಸ್ಥರಿಂದ ಅಸಮಾಧಾನ**
- **ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೊಸ ಸುಂಕ ನೀತಿಗಳನ್ನಿ ತೀವ್ರವಾಗಿ ಟೀಕಿಸಿರುವ ಫೆಡ್ ಮುಖ್ಯಸ್ಥ ಜರೋಮ್ ಪೊವೆಲ್**
- **ಹೊಸ ಸುಂಕ ನೀತಿಗಳಿಂದ ಅಮೆರಿಕದ ಆರ್ಥಿಕತೆ ಕುಸಿಯುವ ಅಪಾಯ ಹೆಚ್ಚಿದೆ ಎಂದು ಆತಂಕ ವ್ಯಕ್ತಪಡಿಸಿದ ಫೆಡ್ ಮುಖ್ಯಸ್ಥ ಜರೋಮ್ ಪೊವೆಲ್**

ಚಿಕಾಗೋದಲ್ಲಿ ಮಾತನಾಡಿದ ಜರೋಮ್ ಪೊವೆಲ್, ಜಾಗತಿಕ ವಾಣಿಜ್ಯ ಯುದ್ಧದಿಂದಾಗಿ ಹಣದುಬ್ಬರ ಹೆಚ್ಚಾಗಬಹುದು. ಡೊನಾಲ್ಡ್




ಟ್ರಂಪ್ ಅವರ ಸುಂಕ ನೀತಿಗಳು ಆರ್ಥಿ ಕತೆಗೆ ಹಾನಿ ಉಂಟುಮಾಡಬಹುದು ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

**ಅಮೆರಿಕದಲ್ಲೇ ಹೆಚ್ಚುತ್ತಿದೆ ಪ್ರತಿರೋಧ**

ಹೊಸ ಸುಂಕಗಳು ನಿರೀಕ್ಷೆಗಿಂತ ಹೆಚ್ಚಾಗಿವೆ ಎಂದಿರುವ ಪೊವೆಲ್, ಈ ವಿಷಯದ ಬಗ್ಗೆ ಇರುವ ಅನಿಶ್ಚಿತತೆಯು ಆರ್ಥಿಕ ಹಾನಿಯನ್ನುಂಟು ಮಾಡಬಹುದು ಎಂದು ಹೇಳಿದ್ದಾರೆ.

ಹೊಸ ಸುಂಕ ನೀತಿಯನ್ನು ಹೇಗೆ ನಿಭಾಯಿಸಬೇಕೆಂದು ಯಾರಿಗೂ ತಿಳಿದಿಲ್ಲ. ಖುದ್ದು ಡೊನಾಲ್ಡ್ ಟ್ರಂಪ್ ಅವರೇ ಈ ವಿಷಯದಲ್ಲಿ ಗೊಂದಲಕ್ಕೀಡಾಗಿದ್ದಾರೆ ಎಂದು ತೋರುತ್ತಿದೆ. ಫೆಡ್‌ನ ಮುಖ್ಯ ಕೆಲಸವೆಂದರೆ ಉದ್ಯೋಗವನ್ನು ಉತ್ತೇಜಿಸುವುದು ಮತ್ತು ಹಣದುಬ್ಬರವನ್ನು ನಿಯಂತ್ರಿಸುವುದು. ಆದರೆ ಟ್ರಂಪ್ ಅವರ ಸುಂಕಗಳು ಈ ಎರಡೂ ಗುರಿಗಳಿಗೆ ಅಪಾಯ ತಂದೊಡ್ಡುತ್ತವೆ ಎಂದು ಜರೋಮ್ ಪೊವೆಲ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಏತನ್ಮಧ್ಯೆ, ಡೊನಾಲ್ಡ್ ಟ್ರಂಪ್ ಮಾತ್ರ ಆರ್ಥಿಕತೆ ಚೇತರಿಕೆ ಕಾಣುವ ಆಶಾಭಾವನೆ ವ್ಯಕ್ತಪಡಿಸುತ್ತಿದ್ದಾರೆ. ಜಪಾನ್‌ನೊಂದಿಗೆ ನಡೆಯುತ್ತಿರುವ ವ್ಯಾಪಾರ ಒಪ್ಪಂದದ ಮಾತುಕತೆಗಳಲ್ಲಿ ದೊಡ್ಡ ಪ್ರಗತಿ ಕಂಡುಬಂದಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಸುಂಕಗಳನ್ನು ಹೇರುವ ಮೂಲಕ ವಿವಿಧ ದೇಶಗಳೊಂದಿಗೆ ಪ್ರತ್ಯೇಕ ಒಪ್ಪಂದಗಳನ್ನು ಮಾಡಿಕೊಳ್ಳುವುದು ಟ್ರಂಪ್ ಅವರ ತಂತ್ರವಾಗಿದೆ. ಇದರಿಂದ ಯುಎಸ್ ಉತ್ಪನ್ನಗಳಿಗೆ ಇರುವ ಅಡೆತಡೆಗಳು ಕಡಿಮೆಯಾಗುತ್ತವೆ. ಜಾಗತಿಕ ಉತ್ಪಾದನೆಯನ್ನು ಅಮೆರಿಕಕ್ಕೆ ಸ್ಥಳಾಂತರಿಸಲು ಸಾಧ್ಯವಾಗುತ್ತದೆ ಎಂದು ಅಧ್ಯಕ್ಷರು ನಂಬಿದ್ದಾರೆ.



ಆದರೆ ಈ ಮಾತುಕತೆಗಳು ಅಮೆರಿಕದ ಪ್ರಮುಖ ಆರ್ಥಿಕ ಪ್ರತಿಸ್ಪರ್ಧಿ ಚೀನಾ ಜೊತೆಗಿನ ಸಂಘರ್ಷದೊಂದಿಗೆ ನಡೆಯುತ್ತಿವೆ. ಇದು ವ್ಯಾಪಕ ಅಡಚಣೆಗೆ ಕಾರಣವಾಗಬಹುದು ಎಂಬ ಆತಂಕವಿದೆ. ಸುಂಕದ ಯುದ್ಧದಲ್ಲಿ ಯಾರಿಗೂ ಲಾಭವಾಗುವುದಿಲ್ಲ ಎಂದು ಚೀನಾ ಎಚ್ಚರಿಸಿದೆ. ಡೊನಾಲ್ಡ್ ಟ್ರಂಪ್ ಆಡಳಿತವು ಪ್ರಪಂಚದ ಉಳಿದ ಭಾಗಗಳಿಗೆ ಶೇ. 10ರಷ್ಟು ಸುಂಕ ವಿಧಿಸಿದ್ದರೆ, ಚೀನಾ ಮೇಲೆ ಮಾತ್ರ ಶೇ. 145ರಷ್ಟು ಸುಂಕವನ್ನು ಹೇರಿದೆ. ಇದಕ್ಕೆ ಪ್ರತಿಕ್ರಿಯೆಯಾಗಿ ಬೀಜಿಂಗ್ ಸರಕುಗಳ ಮೇಲೆ ಶೇ 125 ರಷ್ಟು ಸುಂಕವನ್ನು ವಿಧಿಸಿದೆ.

ಒಟ್ಟಾರೆಯಾಗಿ, ಡೊನಾಲ್ಡ್ ಟ್ರಂಪ್ ಅವರ ವ್ಯಾಪಾರ ನೀತಿಗಳು ಜಾಗತಿಕ ಆರ್ಥಿಕತೆಗೆ ಅನಿಶ್ಚಿತತೆಯನ್ನು ತಂದಿವೆ. ಇದರಿಂದ ಹಣದುಬ್ಬರ ಹೆಚ್ಚಾಗುವ ಮತ್ತು ಆರ್ಥಿಕ ಬೆಳವಣಿಗೆ ಕುಂಠಿತವಾಗುವ ಸಾಧ್ಯತೆಯಿದೆ. ಚೀನಾ ಮತ್ತು ಯುಎಸ್ ನಡುವಿನ ವ್ಯಾಪಾರ ಯುದ್ಧವು ಜಾಗತಿಕ ಮಾರುಕಟ್ಟೆಗಳಲ್ಲಿ ತಲ್ಲಣವನ್ನು ಉಂಟುಮಾಡಿದೆ.

ಈ ಪರಿಸ್ಥಿತಿಯನ್ನು ಹೇಗೆ ನಿಭಾಯಿಸಬೇಕೆಂದು ಫೆಡರಲ್ ರಿಸರ್ವ್‌ಗೆ ತಿಳಿದಿಲ್ಲ ಎಂಬ ಜರೋಮ್ ಪೊವೆಲ್ ಅವರ ಹೇಳಿಕೆ, ಆರ್ಥಿಕತೆಯನ್ನು ರಕ್ಷಿಸುವಲ್ಲಿ ಸವಾಲುಗಳನ್ನು ತಂದೊಡ್ಡಿದೆ.

### ಷೇರು ಮಾರುಕಟ್ಟೆ ಕುಸಿತ

**ಹೆಚ್ಚಿನ ಅನಿಶ್ಚಿತತೆಯ ಸಮಯದಲ್ಲಿ ಮಾರುಕಟ್ಟೆಗಳಲ್ಲಿ ಏರಿಳಿತಗಳು ಕಂಡುಬರುತ್ತಿವೆ. ಟ್ರಂಪ್ ಅವರ ವ್ಯಾಪಾರ ಯುದ್ಧದಿಂದ ಷೇರು ಮಾರುಕಟ್ಟೆಗಳು ಕುಸಿಯುತ್ತಿವೆ. ವಾಲ್ ಸ್ಟ್ರೀಟ್‌ನಲ್ಲಿ, ಒಂದು ಹಂತದಲ್ಲಿ ನಾಸ್ಡಾಕ್ ಶೇ. 4ಕ್ಕಿಂತ ಹೆಚ್ಚು ಕುಸಿತ ಕಂಡಿದೆ. ಎಸ್‌ಪಿ ಕೂಡ ಶೇ. 3ಕ್ಕಿಂತ ಹೆಚ್ಚು ಮತ್ತು ಡೋ ಜೋನ್ಸ್ ಶೇ.2ಕ್ಕಿಂತ ಹೆಚ್ಚು ಕುಸಿತ ಕಂಡಿದೆ.**

# ನಾವು ಹಿಂದೂಗಳಿಗಿಂತ ಭಿನ್ನ, ಅದಕ್ಕೆ ಭಾರತ ಒಡೆದ ಜಿನ್ನಾ
## ಪಾಕ್ ಮಕ್ಕಳ ಬ್ರೈನ್‌ವಾಷ್ ಮಾಡುವ ಜನರಲ್ ಅಸೀಮ್ ಮುನೀರ್

**ಇಸ್ಲಾಮಾಬಾದ್:** ಹಿಂದೂ ದ್ವೇಷದ ಸಿದ್ಧಾಂತದ ನೆಲಗಟ್ಟಿನ ಮೇಲೆ ರಚನೆಯಾದ ಪಾಕಿಸ್ತಾನ, ತಾನು ಅಸ್ತಿತ್ವಕ್ಕೆ ಬಂದ ಏಳು ದಶಕಗಳಲ್ಲಿ ಬೇರೇನೂ ಸಾಧನೆ ಮಾಡದಿದ್ದರೂ, ತನ್ನ ಹಿಂದೂ ದ್ವೇಷ ಮನಸ್ಥಿಯನ್ನು ಮಾತ್ರ ಬಿಟ್ಟುಕೊಟ್ಟಿಲ್ಲ. ಪಾಕಿಸ್ತಾನದ ಸಾಮಾನ್ಯ ಜನರು ಹೇಗೋ ನಾವು ಕಾಣೆವು, ಆದರೆ ಅಲ್ಲಿನ ಸರ್ಕಾರ ಮತ್ತು ಸೇನೆ ಮಾತ್ರ ಹಿಂದೂ ದ್ವೇಷವನ್ನು ನಿತ್ಯವೂ ಉಸಿರಾಡುತ್ತದೆ. ಇದಕ್ಕೆ ಸಾಕ್ಷಿ ಪಾಕಿಸ್ತಾನ ಭೂಸೇನಾ ಮುಖ್ಯಸ್ಥ ಜನರಲ್ ಅಸೀಮ್ ಮುನೀರ್ ನೀಡಿರುವ ಇತ್ತೀಚಿನ ಹೇಳಿಕೆ.

ಪಾಕಿಸ್ತಾನಿಯರು ಹಿಂದೂ ಮತ್ತು ಮುಸ್ಲಿಮರ ನಡುವಿನ ವ್ಯತ್ಯಾಸಗಳನ್ನು ತಮ್ಮ ಮಕ್ಕಳಿಗೆ ಹೇಳಿಕೊಡಬೇಕು. ಈ ವ್ಯತ್ಯಾಸವೇ ಪಾಕಿಸ್ತಾನ ರಚನೆ ಮೂಲ ಆಧಾರವಾಗಿದ್ದು, ಪಾಕಿಸ್ತಾನದ ಜನಕ ಮೊಹಮ್ಮದ್ ಅಲಿ ಜಿನ್ನಾ ಅವರ ದ್ವಿರಾಷ್ಟ್ರ ಸಿದ್ಧಾಂತದ ಮಹತ್ವವನ್ನು ನಾವು ಮುಂದಿನ ಪೀಳಿಗೆಗೆ ತಿಳಿಸಬೇಕು ಎಂದು ಪಾಕಿಸ್ತಾನ ಭೂಸೇನಾ ಮುಖ್ಯಸ್ಥ ಜನರಲ್ ಅಸೀಮ್ ಮುನೀರ್ ಹೇಳಿದ್ದಾರೆ.



ನಮ್ಮ ಪೂರ್ವಜರು ನಾವು ಹಿಂದೂಗಳಿಗಿಂತ ಪ್ರತಿಯೊಂದು ವಿಷಯದಲ್ಲೂ ಭಿನ್ನರಾಗಿದ್ದೇವೆ ಎಂದು ನಂಬಿದ್ದರು. ನಮ್ಮ ಧರ್ಮ, ಆಚರಣೆ, ಸಂಪ್ರದಾಯ, ಆಲೋಚನೆ ಮತ್ತು ಗುರಿಗಳು ಬೇರೆ ಬೇರೆಯಾಗಿದ್ದರಿಂದಲೇ, ದ್ವಿರಾಷ್ಟ್ರ ಪರಿಕಲ್ಪನೆ ಮೊಳಕೆಯೊಡೆಯಿತು. ಈಗಲೂ ಪಾಕಿಸ್ತಾನವು ದ್ವಿರಾಷ್ಟ್ರ ಸಿದ್ಧಾಂತದ ತಳಹದಿಯ ಮೇಲೆ ನಿಂತಿದೆ. ಇದರ ಮಹತ್ವ ಎಂದಿಗೂ ಕಡಿಮೆಯಾಗಬಾರದು. ಇದಕ್ಕಾಗಿ ನಾವು ನಮ್ಮ ಮಕ್ಕಳಿಗೆ ಹಿಂದೂ-ಮುಸ್ಲಿಂ ನಡುವಿನ ವ್ಯತ್ಯಾಸವನ್ನು ಹೇಳಿಕೊಡಬೇಕು ಎಂದು ಜನರಲ್ ಮುನೀರ್ ಹೇಳಿದ್ದಾರೆ.

ಪಾಕಿಸ್ತಾನದ ಭೂಸೇನಾ ಮುಖ್ಯಸ್ಥ ಜನರಲ್ ಅಸೀಮ್ ಮುನೀರ್ ಅವರನ್ನು ಪಾಕಿಸ್ತಾನದಲ್ಲಿ ಹಾಫಿಜ್- ಎ-ಕುರಾನ್' ಎಂದೇ ಕರೆಯಲಾಗುತ್ತದೆ. ಪಾಕಿಸ್ತಾನದ ಮೂಲಭೂತ ಇಸ್ಲಾಮಿಕ್ ತತ್ವಗಳನ್ನು ಬಲವಾಗಿ ನಂಬುವ ಜನರಲ್ ಮುನೀರ್, ಪಾಕಿಸ್ತಾನ ದೇಶದ ಅಡಿಪಾಯವನ್ನು ಕಲಿಮಾ (ಇಸ್ಲಾಮಿಕ್ ನಂಬಿಕೆಯ ಘೋಷಣೆ) ಮೇಲೆ ಹಾಕಲಾಗಿದೆ ಎಂದು ಹೇಳಿದ್ದಾರೆ.

**ಸಾಗರೋತ್ತರ ಪಾಕಿಸ್ತಾನಿಯರ ಸಮಾವೇಶ ಉದ್ದೇಶಿಸಿ ಮಾತನಾಡಿದ ಜನರಲ್ ಅಸೀಮ್ ಮುನೀರ್, ಹಿಂದೂಗಳು ಮತ್ತು ಮುಸ್ಲಿಮರ ನಡುವೆ ದೊಡ್ಡ ವ್ಯತ್ಯಾಸವಿದೆ ಎಂದು ನಮ್ಮ ಮಕ್ಕಳಿಗೆ ತಿಳಿಸಿ. ಇಸ್ಲಾಮಿಕ್ ಗಣರಾಜ್ಯದ ಸೃಷ್ಟಿಗೆ ಇದು ಮುಖ್ಯ ಕಾರಣ ಎಂಬ ಸತ್ಯ ಅವರಿಗೆ ಗೊತ್ತಾಗಲಿ. 1947ರಲ್ಲಿ ಪಾಕಿಸ್ತಾನ ರಚನೆಗೆ ಮೊಹಮ್ಮದ್ ಅಲಿ ಜಿನ್ನಾ ಅವರ ದ್ವಿರಾಷ್ಟ್ರ ಸಿದ್ಧಾಂತವೇ ಕಾರಣ ಎಂಬುದನ್ನು ನಮ್ಮ ಭವಿಷ್ಯದ ಪೀಳಿಗೆ ಮರೆಯಬಾರದು ಎಂದು ಜನರಲ್ ಮುನೀರ್ ವಿಷಕಾರಿದ್ದಾರೆ.**

## 1ನೇ ತರಗತಿಯಿಂದಲೇ ಹಿಂದಿ ಕಡ್ಡಾಯಕ್ಕೆ ಮುಂದಾದ ಮಹಾರಾಷ್ಟ್ರ


**ಮುಂಬೈ:** ಮೂರನೇ ಭಾಷೆಯಾಗಿ ಹಿಂದಿ ಕಲಿಸುವುದನ್ನು ಕಡ್ಡಾಯ ಗೊಳಿಸಲು ಮಹಾರಾಷ್ಟ್ರ ತೀರ್ಮಾನಿಸಿದೆ. 2025-26ರ ಶೈಕ್ಷಣಿಕ ವರ್ಷದಿಂದ ರಾಷ್ಟ್ರೀಯ ಶಿಕ್ಷಣ ನೀತಿ 2020 ಅನ್ನು ಜಾರಿಗೆ ತರಲು ಮಹಾರಾಷ್ಟ್ರ ಸರ್ಕಾರ ವಿವರವಾದ ಯೋಜನೆಯನ್ನು ಘೋಷಿಸಿದೆ. ಮರಾಠಿ ಮತ್ತು ಇಂಗ್ಲಿಷ್ ಮಾಧ್ಯಮ ಶಾಲೆಗಳಲ್ಲಿ ಓದುತ್ತಿರುವ 1 ರಿಂದ 5 ನೇ ತರಗತಿಯ ವಿದ್ಯಾರ್ಥಿಗಳಿಗೆ ಹಿಂದಿಯನ್ನು ಕಡ್ಡಾಯ ಮೂರನೇ ಭಾಷೆಯಾಗಿ ಪರಿಚಯಿಸುವುದು ಈ ಯೋಜನೆಯ ಪ್ರಮುಖ ಅಂಶವಾಗಿದೆ.

ಎನ್‌ಇಪಿ 2020ರ ಅಡಿಯಲ್ಲಿ ಹೊಸ ಪಠ್ಯ ಕ್ರಮವು ಹಂತ ಹಂತವಾಗಿ ಕಾಲಾವಧಿಯನ್ನು ಅನುಸರಿಸುತ್ತದೆ, ಇದು 2025-26 ಶೈಕ್ಷಣಿಕ ವರ್ಷದಲ್ಲಿ 1 ನೇ ತರಗತಿಯಿಂದ ಪ್ರಾರಂಭವಾಗುತ್ತದೆ ಮತ್ತು 2028ರ ವೇಳೆಗೆ ಎಲ್ಲಾ ತರಗತಿಗಳಿಗೆ ವಿಸ್ತರಿಸುತ್ತದೆ-ಭಾಷಾ ನೀತಿಯ ಭಾಗವಾಗಿ, ಆರಂಭಿಕ ದರ್ಜೆಯ ವಿದ್ಯಾರ್ಥಿಗಳಿಗೆ ಹಿಂದಿಯನ್ನು ಕಡ್ಡಾಯ 3ನೇ ಭಾಷೆಯಾಗಿ ಪರಿಚಯಿಸಲಾಗುವುದು. ಈ ಪರಿವರ್ತನೆಯನ್ನು ಬೆಂಬಲಿಸಲು, ರಾಜ್ಯ ಸರ್ಕಾರವು 2025 ರ ವೇಳೆಗೆ ಶೇ.80 ಶಿಕ್ಷಕರಿಗೆ ಹೊಸ ಬೋಧನಾ ವಿಧಾನಗಳು ಮತ್ತು ಡಿಜಿಟಲ್ ಸಾಧನಗಳಲ್ಲಿ ತರಬೇತಿ ನೀಡಲು ಯೋಜಿಸಿದೆ.

## ಹೆತ್ತವರಿಗೆ ವಿರುದ್ಧವಾಗಿ ವಿವಾಹವಾಗುವವರಿಗೆ ಪೊಲೀಸ್ ರಕ್ಷಣೆಯ ಅಗತ್ಯವಿಲ್ಲ: ಅಲಹಾಬಾದ್ ಹೈಕೋರ್ಟ್

**ಅಲಹಾಬಾದ್:** ತಮ್ಮ ಹೆತ್ತವರ ಇಚ್ಛೆಗೆ ವಿರುದ್ಧವಾಗಿ ಮದುವೆಯಾಗುವ ದಂಪತಿಗಳು ತಮ್ಮ ಜೀವನ ಮತ್ತು ಸ್ವಾತಂತ್ರ್ಯಕ್ಕೆ ನಿಜವಾದ ಬೆದರಿಕೆಯ ಗ್ರಹಿಕೆ ಇಲ್ಲದಿದ್ದರೆ ಪೊಲೀಸ್ ರಕ್ಷಣೆಯನ್ನು ಹಕ್ಕಿನ ವಿಷಯವಾಗಿ ಪಡೆಯಲು ಸಾಧ್ಯವಿಲ್ಲ ಎಂದು ಅಲಹಾಬಾದ್ ಹೈಕೋರ್ಟ್ ಅಭಿಪ್ರಾಯ ಪಟ್ಟಿದೆ. ರಕ್ಷಣೆ ಕೋರಿ ದಂಪತಿಗಳು ಸಲ್ಲಿಸಿದ್ದ ಅರ್ಜಿಯನ್ನು ನಿರ್ಧರಿಸುವಾಗ ನ್ಯಾಯಾಲಯ ಈ ತೀರ್ಪು ನೀಡಿದೆ. ಅರ್ಹ ಪ್ರಕರಣದಲ್ಲಿ ನ್ಯಾಯಾಲಯವು ದಂಪತಿಗಳಿಗೆ ಭದ್ರತೆಯನ್ನು ಒದಗಿಸಬಹುದು ಆದರೆ ಯಾವುದೇ ಬೆದರಿಕೆ ಗ್ರಹಿಕೆಯ ಅನುಪಸ್ಥಿತಿಯಲ್ಲಿ, ಅಂತಹ ದಂಪತಿಗಳು ಪರಸ್ಪರ ಬೆಂಬಲಿಸಲು ಮತ್ತು ಸಮಾಜವನ್ನು ಎದುರಿಸಲು ಕಲಿಯಬೇಕು ಎಂದು ಅದು ಹೇಳಿದೆ.

ಪೊಲೀಸ್ ರಕ್ಷಣೆ ಮತ್ತು ತಮ್ಮ ಶಾಂತಿಯುತ ವೈವಾಹಿಕ ಜೀವನದಲ್ಲಿ ಹಸ್ತಕ್ಷೇಪ ಮಾಡದಂತೆ ಖಾಸಗಿ ಪ್ರತಿವಾದಿಗಳಿಗೆ ನಿರ್ದೇಶನ ನೀಡುವಂತೆ ಕೋರಿ ಶ್ರೇಯಾ ಕೇಸರ್ವಾನಿ ಮತ್ತು ಅವರ ಪತಿ ಸಲ್ಲಿಸಿದ್ದ ರಿಟ್ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೌರಭ್ ಶ್ರೀವಾಸ್ತವ ಈ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ನಂತರ ನ್ಯಾಯಾಲಯ ಅವರ ಅರ್ಜಿಯಲ್ಲಿ ಮಾಡಿದ ಹೇಳಿಕೆಗಳನ್ನು ಪರಿಶೀಲಿಸಿದ ನಂತರ, ಅರ್ಜಿದಾರರಿಗೆ ಯಾವುದೇ ಗಂಭೀರ ಬೆದರಿಕೆ ಗ್ರಹಿಕೆ ಇಲ್ಲ ಎಂದು ಗಮನಿಸಿದ ನ್ಯಾಯಾಲಯವು ಅವರ ರಿಟ್ ಅರ್ಜಿಯನ್ನು ವಿಲೇವಾರಿ ಮಾಡಿತು.



ರಿಟ್ ಅರ್ಜಿಯನ್ನು ವಿಲೇವಾರಿ ಮಾಡಿದ ನ್ಯಾಯಾಲಯವು, ಲತಾ ಸಿಂಗ್ ವರ್ಸಸ್ ಸ್ಟೇಟ್ ಆಫ್ ಯುಪಿ ಮತ್ತು ಮತ್ತೊಂದು ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿದ ತೀರ್ಪಿನ ಬೆಳಕಿನಲ್ಲಿ ಅವರಿಗೆ ಪೊಲೀಸ್ ರಕ್ಷಣೆ ಒದಗಿಸಲು ಯಾವುದೇ ಆದೇಶವನ್ನು ಹೊರಡಿಸುವ ಅಗತ್ಯವಿಲ್ಲ, ಇದರಲ್ಲಿ ನ್ಯಾಯಾಲಯಗಳು ತಮ್ಮ ಇಚ್ಛೆಯಂತೆ ಮದುವೆಯಾಗಲು ಓಡಿಹೋದ ಅಂತಹ ಯುವಕರಿಗೆ ರಕ್ಷಣೆ ನೀಡುವ ಉದ್ದೇಶವನ್ನು ಹೊಂದಿಲ್ಲ ಎಂದು ಹೇಳಿದೆ.


## ಬ್ಲೂಫಿಲ್ಮ್ ವೀಕ್ಷಣೆ ಕಾನೂನು ಬದ್ಧಗೊಳಿಸಲು ಮುಂದಾದ ಉಕ್ರೇನ್

**ಕೀವ್:** ಕಳೆದ 3 ವರ್ಷಗಳಿಂದ ರಷ್ಯಾ ಯುದ್ಧದಲ್ಲಿ ತೊಡಗಿಕೊಂಡಿದೆ. ಹೀಗಾಗಿ ತನ್ನ ಸೇನೆಯ ಖರ್ಚು ಸೇರಿ ಯುದ್ಧದ ವೆಚ್ಚ ಭರಿಸಲು ನೀಲಿ ಚಿತ್ರಕ್ಕೆ ಕಾನೂನು ಮಾನ್ಯತೆ ನೀಡಲು ಉಕ್ರೇನ್ ಮುಂದಾಗಿದೆ ಎಂದು ಮೂಲಗಳು ತಿಳಿಸಿವೆ. ತನ್ನ ದೇಶದಲ್ಲಿ ನೀಲಿ ಚಿತ್ರ, ಚಿತ್ರೀಕರಣ, ಪ್ರಸಾರ ಮತ್ತು ವೀಕ್ಷಣೆಗೆ ಕಾನೂನು ಮಾನ್ಯತೆ ನೀಡಲು ಉಕ್ರೇನ್ ಮುಂದಾಗಿದ್ದು, ಈ ಹಿನ್ನೆಲೆ ಕಾನೂನು ತಿದ್ದುಪಡಿ ಮಾಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆ. ಒಂದು ವೇಳೆ ನೀಲಿ ಚಿತ್ರಕ್ಕೆ ಕಾನೂನು ಮಾನ್ಯತೆ ಸಿಕ್ಕರೆ, ಇದರಿಂದ ಬರುವ ಆದಾಯವನ್ನು ಸೇನೆಯ ಖರ್ಚು, ವೆಚ್ಚವನ್ನು ನೋಡಿಕೊಳ್ಳಲು ವೊಲೊಡಿಮಿರ್ ಝೆಲೆನ್ಸ್ಕಿ ಸರ್ಕಾರ ನಿರ್ಧರಿಸಿದೆ ಎನ್ನಲಾಗುತ್ತಿದೆ. ಆದರೆ ಕಳೆದ ವರ್ಷ ಈ ಕಾನೂನಿನಡಿ 1,400 ಕೇಸುಗಳು ದಾಖಲಾಗಿದ್ದವು.

## ಅಪಘಾತ ಸಂದರ್ಭದಲ್ಲಿ ಪ್ರೋಟೋಕಾಲ್ ಅಭಿವೃದ್ಧಿಪಡಿಸಲು ಸುಪ್ರಿಂ ಸೂಚನೆ

**ನವದೆಹಲಿ:** ರಸ್ತೆ ಅಪಘಾತಗಳು ಹೆಚ್ಚುತ್ತಿರುವುದನ್ನು ಗಮನಿಸಿದ ಸುಪ್ರಿಂಕೋರ್ಟ್ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ತ್ವರಿತ ಪ್ರತಿಕ್ರಿಯೆ ಪ್ರೋಟೋಕಾಲ್‌ಗಳನ್ನು ಅಭಿವೃದ್ಧಿಪಡಿಸುವಂತೆ ನಿರ್ದೇಶಿಸಿದೆ.

ನ್ಯಾಯಮೂರ್ತಿಗಳಾದ ಅಭಯ್ ಓಕಾ ಮತ್ತು ಉಜ್ಜಲ್ ಭುಯಾನ್ ಅವರ ನ್ಯಾಯಪೀಠವು ಚಾಲಕರ ಕೆಲಸದ ಸಮಯವನ್ನು ಜಾರಿಗೆ ತರಲು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸಂಬಂಧಿಸಿದ ಇಲಾಖೆಗಳ ಸಭೆಗಳನ್ನು ಕರೆಯುವಂತೆ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯಕ್ಕೆ ನಿರ್ದೇಶನ ನೀಡಿದೆ.



ನಮ್ಮ ದೇಶದಲ್ಲಿ ರಸ್ತೆ ಅಪಘಾತಗಳು ಹೆಚ್ಚುತ್ತಿವೆ. ಕಾರಣಗಳು ವಿಭಿನ್ನವಾಗಿರಬಹುದು. ರಸ್ತೆ ಅಪಘಾತಗಳಿಗೆ ಒಳಗಾದವರಿಗೆ ತಕ್ಷಣದ ಸಹಾಯ ಸಿಗದ ಪ್ರಕರಣಗಳಿವೆ. ಬಲಿಪಶುಗಳು ಗಾಯಗೊಳ್ಳದಿರಬಹುದು ಆದರೆ ಅವರು ವಾಹನಗಳಲ್ಲಿ ಸಿಕ್ಕಿಹಾಕಿಕೊಳ್ಳುವ ಸಂದರ್ಭಗಳಿವೆ. ರಾಜ್ಯ ಸರ್ಕಾರಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಪ್ರತಿ ರಾಜ್ಯದಲ್ಲಿರುವಂತೆ ತಳಮಟ್ಟದಲ್ಲಿ ತ್ವರಿತ ಪ್ರತಿಕ್ರಿಯೆ ಪ್ರೋಟೋಕಾಲ್‌ಗಳನ್ನು ಹೊಂದಲು ಕೆಲಸ ಮಾಡಬೇಕು ಎಂದು ನಾವು ಭಾವಿಸುತ್ತೇವೆ ಎಂದು ನ್ಯಾಯಪೀಠ ಹೇಳಿದೆ.

ತ್ವರಿತ ಪ್ರತಿಕ್ರಿಯೆ ಪ್ರೋಟೋಕಾಲ್‌ಗಳನ್ನು ಅಭಿವೃದ್ಧಿ ಪಡಿಸಲು ಉನ್ನತ ನ್ಯಾಯಾಲಯವು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಆರು ತಿಂಗಳ ಕಾಲಾವಕಾಶ ನೀಡಿದೆ. ವಕೀಲ ಕಿಶನ್ ಚಂದ್ ಜೈನ್ ಅವರು ಸಲ್ಲಿಸಿದ ಅರ್ಜಿಯ ಮೇರೆಗೆ ಈ ಆದೇಶ ಬಂದಿದೆ. ಅವರು ಪ್ರೋಟೋಕಾಲ್ ಅನ್ನು ಒತ್ತಾಯಿಸಿದ್ದರು.

## ಐಪಿಎಲ್ ಬೆಟ್ಟಿಂಗ್ ನಡೆಸುತ್ತಿದ್ದ 14 ಮಂದಿ ಬಂಧನ

**ರಾಯ್ಪುರ:** ಮಹಾದೇವ್ ಬೆಟ್ಟಿಂಗ್ ಆ್ಯಪ್ ಮೂಲಕ ಇಂಡಿಯನ್ ಪ್ರೀಮಿಯರ್ ಲೀಗ್ ಪಂದ್ಯಗಳ ಮೇಲೆ ಬೆಟ್ಟಿಂಗ್ ನಡೆಸುತ್ತಿದ್ದ ಆರೋಪದ ಮೇಲೆ ಛತ್ತೀಸ್‌ಗಢ ಪೊಲೀಸರು ಹಲವಾರು ರಾಜ್ಯಗಳ 14 ಜನರನ್ನು ಬಂಧಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.



ಛತ್ತೀಸ್ ಗಢದ ಮಹಾದೇವ್ ಆ್ಯಪ್ ಬೆಟ್ಟಿಂಗ್ ಹಗರಣದ ತನಿಖೆಯನ್ನು ಕೇಂದ್ರ ತನಿಖಾ ದಳ (ಸಿಬಿಐ) ಈಗಾಗಲೇ ನಡೆಸುತ್ತಿದೆ. ಬಂಧಿತ 14 ಮಂದಿಯಲ್ಲಿ 6 ಮಂದಿ ಛತ್ತೀಸ್ ಗಢದವರು, ಮೂವರು ಜಾರ್ಖಂಡ್ ನವರು, ಇಬ್ಬರು ಮಧ್ಯಪ್ರದೇಶದವರು ಮತ್ತು ಪಂಜಾಬ್, ಉತ್ತರ ಪ್ರದೇಶ ಮತ್ತು ಬಿಹಾರದ ತಲಾ ಒಬ್ಬರು ಎಂದು ರಾಯಪುರ ವಲಯದ ಪೊಲೀಸ್ ಮಹಾನಿರೀಕ್ಷಕ ಅಮರೇಶ್ ಮಿಶ್ರಾ ತಿಳಿಸಿದ್ದಾರೆ.

ಅವರಲ್ಲಿ 8 ಮಂದಿಯನ್ನು ಕೋಲ್ಕತ್ತಾದಿಂದ ಮತ್ತು ಆರು ಮಂದಿಯನ್ನು ಗುವಾಹಟಿಯಿಂದ ಬಂಧಿಸಲಾಗಿದೆ ಎಂದು ಅವರು ಹೇಳಿದರು. ಐಪಿಎಲ್ ಪಂದ್ಯಗಳ ಮೇಲೆ ಆನ್‌ಲೈನ್ ಬೆಟ್ಟಿಂಗ್ ಸ್ವೀಕರಿಸಿದ್ದಕ್ಕಾಗಿ ಏಪ್ರಿಲ್ 13 ರಂದು ಬಂಧಿಸಲ್ಪಟ್ಟ ನಿಖಿಲ್ ವಾಧ್ವಾನಿ ಎಂಬಾತನ ಹೇಳಿಕೆಯ ಆಧಾರದ ಮೇಲೆ ಅವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

## ನಾವು ಹಿಂದೂಗಳು, ಆದರೆ 'ಹಿಂದಿ' ಅಲ್ಲ: ರಾಜ್ ಠಾಕ್ರೆ

**ಮುಂಬೈ:** ಎಂಎನ್‌ಎಸ್ ಮುಖ್ಯಸ್ಥ ರಾಜ್ ಠಾಕ್ರೆ ಅವರು ಮಹಾರಾಷ್ಟ್ರದಲ್ಲಿ ಹಿಂದಿ ಹೇರಿಕೆ ವಿರುದ್ಧ ಎಕ್ಸ್‌ನಲ್ಲಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯ ಶಾಲಾ ಪಠ್ಯಕ್ರಮ ಚೌಕಟ್ಟು 2024ರ ಪ್ರಕಾರ, ಮಹಾರಾಷ್ಟ್ರದಲ್ಲಿ ಒಂದನೇ ತರಗತಿಯಿಂದಲೇ ಹಿಂದಿಯನ್ನು ಕಡ್ಡಾಯಗೊಳಿಸಲಾಗಿದೆ. ಮಹಾರಾಷ್ಟ್ರ ನವನಿರ್ಮಾಣ ಸೇನೆ ಈ ಹಿಂದಿ ಹೇರಿಕೆಯನ್ನು ಸಹಿಸುವುದಿಲ್ಲ ಎಂದು ಠಾಕ್ರೆ ಎಚ್ಚರಿಸಿದ್ದಾರೆ. ದೇಶಾದ್ಯಂತ ಹಿಂದೀಕರಣ'ವನ್ನು ಜಾರಿಗೊಳಿಸಲು ಕೇಂದ್ರ ಸರ್ಕಾರ ನಡೆಸುತ್ತಿರುವ ನಿರಂತರ ಪ್ರಯತ್ನಗಳು ಈ ರಾಜ್ಯದಲ್ಲಿ ಯಶಸ್ವಿಯಾಗಲು ಬಿಡುವುದಿಲ್ಲ. ಹಿಂದಿ ರಾಷ್ಟ್ರೀಯ ಭಾಷೆಯಲ್ಲ. ದೇಶದ ಇತರ ಭಾಷೆಗಳಂತೆ ಇದು ಕೇವಲ ರಾಜ್ಯ ಭಾಷೆಗಳಲ್ಲಿ ಒಂದಾಗಿದೆ. ಹೀಗಾಗಿ ಇದನ್ನು 1ನೇ ತರಗತಿಯಿಂದಲೇ ಮಹಾರಾಷ್ಟ್ರದಲ್ಲಿ ಏಕೆ ಕಲಿಸಬೇಕು? ಎಂದು ರಾಜ್ ಠಾಕ್ರೆ ಪ್ರಶ್ನಿಸಿದ್ದಾರೆ.

## ಸರ್ಕಾರಿ ಬಸ್, ಆಟೋರಿಕ್ಷಾ ನಡುವೆ ಭೀಕರ ಅಪಘಾತ: 6 ಮಂದಿ ದುರ್ಮರಣ

**ಗಾಂಧಿನಗರ:** ಸರ್ಕಾರಿ ಬಸ್ ಹಾಗೂ ಆಟೋರಿಕ್ಷಾ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ 6 ಮಂದಿ ಮೃತಪಟ್ಟಿರುವ ಘಟನೆ ಗುಜರಾತ್‌ನ ಪಠಾಣ್‌ನಲ್ಲಿ ನಡೆದಿದೆ. ಸಮಿ-ರಾಧನ್‌ಪುರ ಹೆದ್ದಾರಿಯ ಸಮಿ ಗ್ರಾಮದ ಅಪಘಾತ ಸಂಭವಿಸಿದೆ. ರಾಜ್ಯ ಸಾರಿಗೆ ಬಸ್ ಹಿಮ್ಮತ್‌ನಗರದಿಂದ ಕಚ್ ಕಡೆಗೆ ಹೋಗುತ್ತಿದ್ದ ವೇಳೆ ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಆಟೋರಿಕ್ಷಾಗೆ ಡಿಕ್ಕಿಯಾಗಿದೆ.

ಅಪಘಾತದ ರಭಸಕ್ಕೆ ಆಟೋರಿಕ್ಷಾದಲ್ಲಿದ್ದ 6 ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಆಟೋರಿಕ್ಷಾ ಸಂಪೂರ್ಣ ನಜ್ಜುಗುಜ್ಜಾಗಿದೆ.

## ವೀಸಾ ಬೇಗನೆ ಸಿಗುವಂತೆ ಮಾಡಲಾಗಿದ್ದು, ವ್ಯಾಪಾರ ಮತ್ತು ಪ್ರವಾಸಕ್ಕೆ ಚೀನಾಕ್ಕೆ ಹೋಗುವವರಿಗೆ ಅನುಕೂಲ
# ಭಾರತೀಯ ಗೆಳೆಯರಿಗೆ ಭರ್ಜರಿ ಸುದ್ದಿ ನೀಡಿದ ಡ್ರ್ಯಾಗನ್ ರಾಷ್ಟ್ರ ಚೀನಾ

**ಬಿಜಿಂಗ್:** ಗ್ಲೋಬಲ್ ಪಾಲಿಟಿಕ್ಸ್‌ಗೆ ಸಂಬಂಧಿಸಿದಂಯೆ ಕಾಲಚಕ್ರ ಸದಾ ತಿರುಗುತ್ತಿರುತ್ತದೆ. ಈಗ ಪರಸ್ಪರ ಶತ್ರು ಎನಿಸಿಕೊಂಡರವರು, ನಾಳೆ ಆಪ್ತಮಿತ್ರರಾಗಿ ಜಗತ್ತಿಗೆ ಶಾಕ್ ಕೊಡಬಹುದು. ಈಗ ಮಿತ್ರರಂತೆ ಪೋಸು ಕೊಡುವವರು ನಾಳೆ ಪರಸ್ಪರ ಕತ್ತಿ ಝಳಪಿಸುತ್ತಾ ಹೂಂಕರಿಸಬಹುದು. ಇಲ್ಲಿ ಯಾವುದೂ ಶಾಶ್ವತವಲ್ಲ, ಗೆಳೆತನ, ಶತ್ರುತ್ವ ಹೂಂ, ಹೂಂ ಇಲ್ಲೇನಿದ್ದರೂ ಸಂದರ್ಭಕ್ಕೆ ತಕ್ಕಂತೆ ನೀತಿ ಬದಲಾಯಿಸುವ ಚಾಕಚಕ್ಯತೆಯೇ ಕೆಲಸ ಮಾಡೋದು.

ಇದಕ್ಕೆ ತಾಜಾ ಉದಾಹರಣೆ ನಮ್ಮ ನೆರೆಯ ಚೀನಾ ರಾಷ್ಟ್ರ. ಭಾರತದೊಂದಿಗೆ ತನಗೆ ಆಜನ್ಮ ವೈರತ್ವ ಇದೆ ಎಂಬಂತೆ ವರ್ತಿಸುತ್ತಿದ್ದ ಚೀನಾ ಇದೀಗ ಏಕಾಏಕಿ ಭಾರತವನ್ನು ತನ್ನ ಮಿತ್ರರಾಷ್ಟ್ರಗಳ ಪಟ್ಟಿಗೆ ಸೇರಿಸಿದಂತಿದೆ. ಭಾರತ ಮತ್ತು ಚೀನಾ ರಾಷ್ಟ್ರಗಳ ನಡುವಿನ ಸಾಂಸ್ಕೃತಿಕ ಸಂಬಂಧಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆಯಾದರೂ, ಗಡಿ ವಿಚಾರದಲ್ಲಿ ಚೀನಾದ ವೈರತ್ವವನ್ನು ಭಾರತ ಎದುರಿಸುತ್ತಲೇ ಬಂದಿದೆ.

ಆದರೆ ಸದ್ಯದ ಗ್ಲೋಬಲ್ ಪಾಲಿಟಿಕ್ಸ್ ಚೀನಾಗೆ ಭಾರತದ ದೋಸ್ತಿಯನ್ನು ಅನಿವಾರ್ಯವಾಗಿಸಿದೆ. ಈ ಕಾರಣಕ್ಕೆ ಚೀನಾ ಹಿಂದೆಂದೂ ಕಾಣದಂತಹ ಸಾಮಿಪ್ಯವನ್ನು ಸಾಧಿಸುವ ಪ್ರಯತ್ನಗಳನ್ನು ಆರಂಭಿಸಿದೆ. ಇದಕ್ಕೆ ಪುಷ್ಟಿ ಎಂಬಂತೆ ಪ್ರಸ್ತುತ ವರ್ಷದಲ್ಲಿ ಭಾರತೀಯ ಪ್ರವಾಸಿಗರಿಗೆ ಚೀನಾವು 85 ಸಾವಿರ ವೀಸಾಗಳನ್ನು ವಿತರಿಸಿದೆ.

**ವೀಸಾ ನಿಯಮದಲ್ಲಿ ಬದಲಾವಣೆ**

ಈ ಕುರಿತು ಮಾಹಿತಿ ನೀಡಿರುವ ಭಾರತಕ್ಕೆ ಚೀನಾ ರಾಯಭಾರ ಕಚೇರಿಯು, ಜನವರಿ 1ರಿಂದ ಏಪ್ರಿಲ್ 9, 2025ರವರೆಗೆ ಭಾರತೀಯ ಪ್ರವಾಸಿಗರಿಗೆ ಒಟ್ಟು 85,000 ವೀಸಾಗಳನ್ನು ನೀಡಲಾಗಿದೆ. ಕಳೆದ ಬಾರಿಗೆ ಹೋಲಿಸಿದೆ ಈ ಬಾರಿ ಹೆಚ್ಚಿನ ಸಂಖ್ಯೆಯ ವೀಸಾಗಳನ್ನು ವಿತರಿಸಲಾಗಿದೆ. ಎಂದು ಸ್ಪಷ್ಟಪಡಿಸಿದೆ.



- **ಭಾರತದೊಂದಿಗೆ ಹೆಚ್ಚಿನ ಸಾಮಿಪ್ಯ ಬಯಸಿರುವ ಡ್ರ್ಯಾಗನ್ ರಾಷ್ಟ್ರ ಚೀನಾ**
- **ಭಾರತದೊಂದಿಗಿನ ರಾಜತಾಂತ್ರಿಕ ಸಂಬಂಧ ಸುಧಾರಣೆಗೆ ಚೀನಾ ಕಸರತ್ತು**
- **ಪ್ರಸ್ತುತ ವರ್ಷ ಭಾರತೀಯ ಪ್ರವಾಸಿಗರಿಗಾಗಿ 85 ಸಾವಿರಕ್ಕೂ ಹೆಚ್ಚು ವೀಸಾ ವಿತರಣೆ**
- **ಭಾರತದ ಗೆಳೆತನ ಬಯಸಿ ವೀಸಾ ನಿಯಮದಲ್ಲಿ ಬದಲಾವಣೆ ತಂದ ಚೀನಾ**

ಭಾರತದೊಂದಿಗಿನ ತನ್ನ ಬಾಂಧವ್ಯವನ್ನು ಹೆಚ್ಚಿಸುವ ಪ್ರಯತ್ನ ನಡೆಸುತ್ತಿರುವ ಚೀನಾ, ಚೀನಾಕ್ಕೆ ಭೇಟಿ ನೀಡಲು ಬಯಸುವ ಭಾರತೀಯರಿಗಾಗಿ ವೀಸಾ ನಿಯಮ ಗಳಲ್ಲಿ ಸಡಿಲಿಕೆ ಮಾಡಿದೆ. ಭಾತದೊಂದಿಗಿನ ಆರ್ಥಿಕ ಸಂಬಂಧಗಳನ್ನು ವೃದ್ಧಿಸುವ ಗುರಿಯನ್ನೂ ಹೊಂದಿರುವ ಚೀನಾ, ಉಭಯ ದೇಶಗಳ ನಡುವೆ ಪರಸ್ಪರ ಸಹಕಾರ ಮತ್ತು ಸ್ನೇಹ ಸಂಬಂಧ ಬೆಳೆಸಲು ಈ ಕ್ರಮ ಕೈಗೊಂಡಿದೆ.

ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಭಾರತಕ್ಕೆ ಚೀನಾದ ರಾಯಭಾರಿ ಕ್ಸು ಫೀಹಾಂಗ್, ಏಪ್ರಿಲ್ 9, 2025ರವರೆಗೆ ಭಾರತೀಯ ನಾಗರಿಕರಿಗೆ 85,000ಕ್ಕೂ ಹೆಚ್ಚು ವೀಸಾಗಳನ್ನು ನೀಡಲಾಗಿದೆ. ಚೀನಾಕ್ಕೆ ಬರುವ ಭಾರತೀಯರನ್ನು ನಾವು ಸ್ವಾಗತಿಸುತ್ತೇವೆ ಎಂದು ಹೇಳಿದ್ದಾರೆ.

### ಭಾರತೀಯರಿಗಾ ಚೀನಾವು ತನ್ನ ವೀಸಾ ನಿಯಮಗಳಲ್ಲಿ ಈ ಕೆಳಗಿನ ಬದಲಾವಣೆಗಳನ್ನು ಮಾಡಿದೆ

- **ಆನ್‌ಲೈನ್ ಅಪಾಯಿಂಟ್‌ಮೆಂಟ್ ರದ್ದು:** ಸಾಕ್ಕಾಗಿ ಆನ್‌ಲೈನ್‌ನಲ್ಲಿ ಅಪಾಯಿಂಟ್‌ಮೆಂಟ್‌ಗಾಗಿ ಕಾಯುವ ಅಗತ್ಯವಿಲ್ಲ. ನೇರವಾಗಿ ವೀಸಾ ಕೇಂದ್ರಕ್ಕೆ ಹೋಗಿ ಅರ್ಜಿ ಸಲ್ಲಿಸಬಹುದು.
- **ಬಯೋಮೆಟ್ರಿಕ್ ವಿನಾಯಿತಿ:** ಕಡಿಮೆ ಅವಧಿಗೆ ಚೀನಾಕ್ಕೆ ಭೇಟಿ ನೀಡುವವರಿಗೆ, ಬಯೋಮೆಟ್ರಿಕ್ ಮಾಹಿತಿ ನೀಡುವ ಅಗತ್ಯವಿಲ್ಲ.
- **ಕಡಿಮೆ ವೀಸಾ ಶುಲ್ಕ:** ವೀಸಾ ಶುಲ್ಕವನ್ನು ಕಡಿಮೆ ಮಾಡಲಾಗಿದ್ದು, ಇದರಿಂದ ಚೀನಾಗೆ ಭೇಟಿ ನೀಡುವ ಭಾರತೀಯರಿಗೆ ಅನುಕೂಲವಾಗಲಿದೆ.
- **ತ್ವರಿತ ಪ್ರಕ್ರಿಯೆ:** ವೀಸಾ ಬೇಗನೆ ಸಿಗುವಂತೆ ಮಾಡಲಾಗಿದ್ದು, ವ್ಯಾಪಾರ ಮತ್ತು ಪ್ರವಾಸಕ್ಕೆ ಚೀನಾಕ್ಕೆ ಹೋಗುವವರಿಗೆ ಇದು ಅನುಕೂಲಕರ.
- **ಪ್ರವಾಸೋದ್ಯಮ:** ಭಾರತೀಯ ಪ್ರವಾಸಿಗರನ್ನು ಆಕರ್ಷಿಸಲು ಚೀನಾವು ತನ್ನ ಸಾಂಸ್ಕೃತಿಕ ಮತ್ತು ಪ್ರವಾಸಿ ತಾಣಗಳ ಬಗ್ಗೆ ಹೆಚ್ಚು ಪ್ರಚಾರ ಮಾಡುತ್ತಿದೆ.



ವೈಯಕ್ತಿಕ ಸವಾಲುಗಳೊಂದಿಗೆ ಹೋರಾಡುತ್ತಿದ್ದೇನೆ

# ಫ್ಯಾನ್ಸ್‌ಗೆ ಪತ್ರ ಬರೆದ ನಜ್ರಿಯಾ

'ಬೆಂಗಳೂರು ಡೇಸ್' ಖ್ಯಾತಿಯ ನಜ್ರಿಯಾ ನಜೀಮ್ ಕೆಲ ತಿಂಗಳುಗಳಿಂದ ಸೋಷಿಯಲ್ ಮೀಡಿಯಾದಿಂದ ಅಂತರ ಕಾಯ್ದುಕೊಂಡಿದ್ದಾರೆ. ಈ ಬೆನ್ನಲ್ಲೇ ಅವರ ವೈಯಕ್ತಿಕ ಬದುಕಿನ ಬಗ್ಗೆ ಹಲವು ವಿಚಾರಗಳು ಚರ್ಚೆ ಶುರುವಾದ ಬೆನ್ನಲ್ಲೇ ನಜ್ರಿಯಾ ರಿಯಾಕ್ಟ್ ಮಾಡಿದ್ದಾರೆ. ತನ್ನ ಅನುಪಸ್ಥಿತಿಯ ಕುರಿತು ಅಭಿಮಾನಿಗಳಿಗೆ ನಟಿ ಪತ್ರ ಬರೆದಿದ್ದಾರೆ. ಎಲ್ಲಾರೂ ಚೆನ್ನಾಗಿದ್ದೀರಿ ಎಂದು ನಾನು ಭಾವಿಸುತ್ತೇನೆ. ಕೆಲ ತಿಂಗಳುಗಳಿಂದ ಎಲ್ಲಾರಿಂದ ದೂರ ಇದ್ದೆ. ನನಗೆ ಸ್ವಲ್ಪ ಸಮಯ ಬೇಕಿತ್ತು. ನಿಮ್ಮೆಲ್ಲರಿಗೂ ತಿಳಿದಿರುವಂತೆ, ನಾನು ಯಾವಾಗಲೂ ಆಕ್ಟೀವ್ ಆಗಿರುತ್ತೇನೆ. ಕಳೆದ ಕೆಲವು ತಿಂಗಳುಗಳಿಂದ ನನ್ನ ವೈಯಕ್ತಿಕ ಸವಾಲುಗಳೊಂದಿಗೆ ಹೋರಾಡುತ್ತಿದ್ದೇನೆ. ನನ್ನ ಮನಸ್ಸು ಸರಿ ಇಲ್ಲ ಎಂದು ನಟಿ ಹೇಳಿದ್ದಾರೆ. ನನ್ನ 30ನೇ ಹುಟ್ಟುಹಬ್ಬ, ಹೊಸ ವರ್ಷದ ಆಚರಣೆ, ನನ್ನ 'ಸೂಕ್ಷ್ಮದರ್ಶಿನಿ' ಚಿತ್ರದ ಯಶಸ್ಸು ಮತ್ತು ಇತರೆ ಪ್ರಮುಖ ಕಾರ್ಯಕ್ರಮಗಳು ಮಿಸ್ ಆಗಿವೆ. ಇದಕ್ಕಾಗಿ ನಾನು ಕ್ಷಮೆ ಕೇಳುತ್ತೇನೆ ಎಂದಿದ್ದಾರೆ. ನಾನು ಮೌನವಾಗಿರೋದ್ದಕ್ಕಾಗಿ, ಫೋನ್ ಕರೆಗಳನ್ನು ಸ್ವೀಕರಿಸದೇ ಇಲ್ಲದಿರುವುದ್ದಕ್ಕೆ ನನ್ನ ಸ್ನೇಹಿತರಲ್ಲಿ ಕ್ಷಮೆಯಾಚಿಸುತ್ತೇನೆ. ಕೆಲಸಕ್ಕಾಗಿ ನನ್ನನ್ನು ಸಂಪರ್ಕಿಸಲು ಪ್ರಯತ್ನಿಸುತ್ತಿರುವ ನನ್ನ ಎಲ್ಲಾ ಸಹನಟರು, ನಿರ್ದೇಶಕರು ಮತ್ತು ನಿರ್ಮಾಪಕರಿಗೂ ನಾನು ಕ್ಷಮೆಯಾಚಿಸುತ್ತೇನೆ ಎಂದು ನಜ್ರಿಯಾ ಹೇಳಿದ್ದಾರೆ. ಇದು ನನ್ನ ಕಠಿಣ ಸಮಯ. ಆದರೆ ನಾನು ಪ್ರತಿದಿನ ಸುಧಾರಿಸಿಕೊಳ್ಳಲು ಶ್ರಮಿಸುತ್ತಿದ್ದೇನೆ. ಸಂಪೂರ್ಣವಾಗಿ ಚೇತರಿಸಿಕೊಳ್ಳಲು ನನಗೆ ಇನ್ನೂ ಸ್ವಲ್ಪ ಸಮಯ ಬೇಕಾಗಬೇಕಾಗಿದೆ. ಆದರೆ ನಾನು ಚೇತರಿಕೆಯ ಹಾದಿಯಲ್ಲಿದ್ದೇನೆ ಎಂದು ನಾನು ನಿಮಗೆ ಭರವಸೆ ನೀಡುತ್ತೇನೆ.



# ಕನ್ನಡದಲ್ಲಿ ನಟಿಸಲು ಹಲವು ಕಥೆಗಳನ್ನು ಕೇಳಿದ್ದೆ

ಯಾವುದು ಇಷ್ಟವಾಗಿಲ್ಲ: ಪೂಜಾ



ಕುಡ್ಲದ ಬೆಡಗಿ ಪೂಜಾ ಹೆಗ್ಡೆ ಪ್ರಸ್ತುತ ಸೂರ್ಯ ಜೊತೆಗಿನ 'ರೆಟ್ರೋ' ಸಿನಿಮಾ ಪ್ರಚಾರದಲ್ಲಿ ಬ್ಯುಸಿಯಾಗಿದ್ದಾರೆ. ಈ ಸಿನಿಮಾದ ಸಂದರ್ಶನವೊಂದರಲ್ಲಿ ಕನ್ನಡ ಸಿನಿಮಾದಲ್ಲಿ ನಟಿಸುವ ಬಗ್ಗೆ ಅವರು ಮಾತನಾಡಿದ್ದಾರೆ.

ಪೂಜಾ ಹೆಗ್ಡೆ ಸಂದರ್ಶನದಲ್ಲಿ ಮಾತನಾಡಿ, ನನ್ನ ಪೋಷಕರಿಂದ ಕನ್ನಡ ಸಿನಿಮಾದಲ್ಲಿ ನಟಿಸುವ ಬಗ್ಗೆ ಒತ್ತಡವಿದೆ. ನಾನು ಮೂಲತಃ ಕರ್ನಾಟಕದವಳು, ತುಳು ಹುಡುಗಿ. ಹಾಗಾಗಿ ನನ್ನ ಪೋಷಕರು ಆಗಾಗ ಕನ್ನಡದಲ್ಲಿ ಸಿನಿಮಾ ಮಾಡಲು ಹೇಳುತ್ತಾ ಇರುತ್ತಾರೆ. ಕನ್ನಡದಲ್ಲಿ ಹಲವು ಕಥೆಗಳನ್ನು ಈಗಾಗಲೇ ಕೇಳಿದ್ದೇನೆ. ಯಾವುದು ಇಷ್ಟವಾಗಿಲ್ಲ. ಉತ್ತಮ ಕಥೆ ಸಿಕ್ಕರೆ ಖಂಡಿತವಾಗಿಯೂ ಕನ್ನಡದಲ್ಲಿ ನಟಿಸುತ್ತೇನೆ ಎಂದು ಹೇಳಿದ್ದಾರೆ. ಈ ಮೂಲಕ ಕನ್ನಡ ಸಿನಿಮಾದಲ್ಲಿ ನಟಿಸುವ ಆಸಕ್ತಿಯನ್ನು ಹಂಚಿಕೊಂಡಿದ್ದಾರೆ.

ಅಂದಹಾಗೆ, 'ರೆಟ್ರೋ' ಸಿನಿಮಾ ಇದೇ ಮೇ 1ರಂದು ರಿಲೀಸ್ ಆಗಲಿದೆ. ಕನ್ನಡದ ಕೆವಿಎನ್ ಸಂಸ್ಥೆ ನಿರ್ಮಾಣದ 'ಜನ ನಾಯಗನ್' ಸಿನಿಮಾದಲ್ಲಿ ವಿಜಯ್ ದಳಪತಿಯೊಂದಿಗೆ ನಟಿಸುತ್ತಿದ್ದಾರೆ. ಮುಂದಿನ ವರ್ಷ ಜ.9ರಂದು ರಿಲೀಸ್ ಆಗಲಿದೆ.

ಸಿನಿ ವಾಹಿನಿ

# ದಕ್ಷಿಣದ ಸಿನಿಮಾದಲ್ಲಿ ಬ್ಯುಸಿಯಾದ ಆಶಿಕಾ



ನಟಿ ಆಶಿಕಾ ರಂಗನಾಥ್ ಕನ್ನಡದ ಜೊತೆಗೆ ತೆಲುಗು ಮತ್ತು ತಮಿಳಿನ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ದಕ್ಷಿಣದ ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ 'ಮದಗಜ' ನಟಿ ಆಶಿಕಾ ನಟಿಸುತ್ತಿದ್ದಾರೆ. ಸೌತ್‌ನಲ್ಲಿ ಕನ್ನಡದ ನಟಿಯರಿಗೆ ಬೇಡಿಕೆ ಹೆಚ್ಚಾಗಿದೆ.

ರಶ್ಮಿಕಾ ಮಂದಣ್ಣ, ಶ್ರೀಲೀಲಾರಂತೆಯೇ ಸೌತ್‌ನಲ್ಲಿ ಮೋಡಿ ಮಾಡಲು ಆಶಿಕಾ ರೆಡಿಯಾಗಿದ್ದಾರೆ. ಸದ್ಯ ಮೆಗಾಸ್ಟಾರ್ ಚಿರಂಜೀವಿ ನಟನೆಯ 'ವಿಶ್ವಂಭರ', ಕಾರ್ತಿ ನಟನೆಯ 'ಸರ್ದಾರ್ 2'ನಲ್ಲಿ ಸೇರಿದಂತೆ ಹಲವು ಪ್ರಾಜೆಕ್ಟ್‌ಗಳು ನಟಿಯ ಕೈಯಲ್ಲಿವೆ. ಈ ಸ್ಟಾರ್ ನಟರ ಸಿನಿಮಾದಲ್ಲಿ ನಟನೆಗೆ ಸ್ಕೋಪ್ ಇರುವ ಪಾತ್ರಗಳು ಅವರಿಗೆ ಸಿಕ್ಕಿದೆ. ಸೌತ್‌ನಲ್ಲಿ ಬ್ಯುಸಿಯಾಗಿದ್ದು, ಕನ್ನಡದ ಸಿನಿಮಾಗಳಲ್ಲಿಯೂ ನಟಿಸುತ್ತಿದ್ದಾರೆ. ಸಿಂಪಲ್ ಸುನಿ ನಿರ್ದೇಶನದ 'ಗತವೈಭವ' ಸೇರಿದಂತೆ ಹಲವು ಚಿತ್ರಗಳಲ್ಲಿ ಆಶಿಕಾ ನಟಿಸುತ್ತಿದ್ದಾರೆ. ಈಗಾಗಲೇ ಸೌತ್‌ನಲ್ಲಿ ನಂದಮೂರಿ ಕಲ್ಯಾಣ್ ಜೊತೆ ಅಮಿಗೋಸ್, ನಾಗಾರ್ಜುನ ಜೊತೆ ನಾ ಸಾಮಿ ರಂಗ, ಸಿದ್ಧಾರ್ಥ್ ಜೊತೆ ಮಿಸ್ ಯೂ ಚಿತ್ರಗಳಲ್ಲಿ ನಾಯಕಿಯಾಗಿ ಆಶಿಕಾ ನಟಿಸಿದ್ದಾರೆ.

# ಮೊದಲ ನಿರ್ದೇಶನದ ಸಿನಿಮಾ ಬಗ್ಗೆ ಗುಡ್ ನ್ಯೂಸ್

'ಕನ್ನಡತಿ' ಖ್ಯಾತಿಯ ರಂಜನಿ ರಾಘವನ್ ನಾಯಕಿ ಯಾಗಿ ಕಿರುತೆರೆ, ಹಿರಿತೆರೆಯಲ್ಲಿ ಮೋಡಿ ಮಾಡಿದ್ದಾರೆ. ಈಗ ನಿರ್ದೇಶನದ ಕ್ಯಾಪ್ ಧರಿಸಲು ಸಜ್ಜಾಗಿದ್ದಾರೆ. ಅವರ ನಿರ್ದೇಶನದ ಮೊದಲ ಸಿನಿಮಾ ಕೆಲಸದ ಬಗ್ಗೆ ಅಭಿಮಾನಿಗಳಿಗೆ ಅಪ್‌ಡೇಟ್ ನೀಡಿದ್ದಾರೆ. ರಂಜನಿ ಇನ್ಸ್ಟಾಗ್ರಾಂ ಲೈವ್‌ಗೆ ಬಂದು ಮೊದಲ ನಿರ್ದೇಶನದ ಸಿನಿಮಾ ಬಗ್ಗೆ ಅಭಿಮಾನಿಗಳೊಂದಿಗೆ ಹಂಚಿಕೊಂಡಿದ್ದಾರೆ. ಇದೇ ಏ.18ರಂದು ಸಿನಿಮಾ ಪೋಸ್ಟರ್ ಬಿಡುಗಡೆ ಮಾಡೋದಾಗಿ ತಿಳಿಸಿದ್ದಾರೆ. ಅದರಲ್ಲಿ ಚಿತ್ರದ ಟೈಟಲ್, ತಾರಾಗಣ, ತಂತ್ರಜ್ಞರು ಸೇರಿದಂತೆ ಯಾರೆಲ್ಲಾ ಚಿತ್ರತಂಡ ಸೇರಿಕೊಂಡಿದ್ದಾರೆ ಎಂಬುದನ್ನು ಏ.18ರಂದು ಅನಾವರಣ ಮಾಡೋದಾಗಿ ಹೇಳಿದ್ದಾರೆ. ಅವರದ್ದೇ ನಿರ್ದೇಶನದ ಸಿನಿಮಾದಲ್ಲಿ ರಂಜನಿ ನಟಿಸುತ್ತಾರಾ ಎಂಬುದಕ್ಕೆ ಉತ್ತರ ಸಿಗಲಿದೆ. ಇಂದಿನ ಕಾಲಮಾನಕ್ಕೆ ಸರಿಹೊಂದುವ ಕೌಟುಂಬಿಕ ಸಿನಿಮಾ ಇದಾಗಿದೆ. ಈ ಚಿತ್ರಕ್ಕೆ ಇಳಯರಾಜ ಸಂಗೀತ ಸಂಯೋಜನೆ ಮಾಡುತ್ತಿರೋದು ವಿಶೇಷವಾಗಿದೆ. ಕೆಲ ತಿಂಗಳುಗಳ ಹಿಂದೆ ಇಳಯರಾಜರನ್ನು ರಂಜನಿ ಭೇಟಿ ಮಾಡಿದ್ದಾರೆ.



# ಪೀರಿಯಡ್ಸ್ ಬಗ್ಗೆ ಸಮಂತಾ ಓಪನ್ ಟಾಕ್

ದೇಹದ ಮೇಲೆ ಪರಿಣಾಮ

ಸೌತ್ ನಟಿ ಸಮಂತಾ ನಟನೆಯ ಜೊತೆಗೆ ನಿರ್ಮಾಣ ಕೂಡ ಮಾಡುತ್ತಿದ್ದಾರೆ. ಅವರ ನಿರ್ಮಾಣದ 'ಶುಭಂ' ಸಿನಿಮಾ ರಿಲೀಸ್ ರೆಡಿಯಿದೆ. ಇದರ ನಡುವೆ ಮಹಿಳೆಯರ ಪೀರಿಯಡ್ಸ್ ಬಗ್ಗೆ ಮುಕ್ತವಾಗಿ ಸಂದರ್ಶನವೊಂದರಲ್ಲಿ ನಟಿ ಮಾತನಾಡಿದ್ದಾರೆ. ಸಮಂತಾ ಮಾತನಾಡಿ, ಕಾಲ ಬದಲಾಗಿದೆ. ಮಹಿಳೆಯರು ಇಲ್ಲಿಯವರೆಗೆ ಬಂದಿದ್ದೇವೆ. ಆದರೂ ಪೀರಿಯಡ್ಸ್ ಬಗ್ಗೆ ಮಾತನಾಡಲು ಹಿಂಜರಿಯುತ್ತೇವೆ. ಇದರ ಬಗ್ಗೆ ಮಾತನಾಡೋದು, ಅವಮಾನ ಎಂದು ಭಾವಿಸುತ್ತೇವೆ. ಈ ಮನಸ್ಥಿತಿ ಬದಲಾಗಬೇಕು. ಋತುಚಕ್ರದ ಬಗ್ಗೆ ಮುಕ್ತವಾಗಿ ಹಂಚಿಕೊಳ್ಳಬೇಕು ಎಂದಿದ್ದಾರೆ. ಋತುಚಕ್ರ ಮುಜುಗರ ಅಥವಾ ಹಗುರವಾಗಿ ಪರಿಗಣಿಸುವ ವಿಚಾರವಲ್ಲ. ಇದು ನಮ್ಮ ಮನಸ್ಸು ಮತ್ತು ದೇಹದ ಮೇಲೆ ಪರಿಣಾಮ ಬೀರುತ್ತದೆ ಎಂಬುದನ್ನು ನಾವು ಪ್ರತಿ ವರ್ಷವೂ ನಿರಂತರವಾಗಿ ಕಲಿಯುತ್ತಲೇ ಇರುತ್ತೇವೆ ಎಂದು ನಟಿ ಮಾತನಾಡಿದ್ದಾರೆ. ಅಂದಹಾಗೆ, ಅಲ್ಲು ಅರ್ಜುನ್ ಮತ್ತು ಅಟ್ಲಿ ಕಾಂಬಿನೇಷನ್ ಸಿನಿಮಾಗೆ ಸಮಂತಾ ನಾಯಕಿಯಾಗಿ ಆಯ್ಕೆಯಾಗಿದ್ದಾರೆ ಎನ್ನಲಾದ ಸುದ್ದಿ ಚರ್ಚೆಗೆ ಗ್ರಾಸವಾಗಿದೆ. ಚಿತ್ರತಂಡದ ಕಡೆಯಿಂದ ಅಫಿಷಿಯಲ್ ಅಪ್‌ಡೇಟ್ ಸಿಗಲಿದೆಯಾ ಎಂಬುದನ್ನು ಕಾದುನೋಡಬೇಕಿದೆ.

# ವಾಂಖೆಡೆಯಲ್ಲಿ ಮಕಾಡೆ ಮಲಗಿದ ಎಸ್‌ಆರ್‌ಎಚ್!

ಮುಂಬೈ ಇಂಡಿಯನ್ಸ್ 18.1 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 163 ರನ್‌ಗಳ ಗುರಿ ತಲುಪಿತು. ವಿಲ್ ಜಾಕ್ಸ್ 36, ರಿಕಲ್ಟನ್ 31, ರೋಹಿತ್ ಶರ್ಮಾ ಹಾಗೂ ಸೂರ್ಯಕುಮಾರ್ ಯಾದವ್ ತಲಾ 26 ರನ್‌ಗಳಿಸಿ ಗೆಲುವಿನ ರೂವಾರಿಗಳಾದರು.

ಐಪಿಎಲ್ 2025ರ 33ನೇ ಪಂದ್ಯದಲ್ಲಿ ಗುರುವಾರ ಮುಂಬೈ ಇಂಡಿಯನ್ಸ್ ತಂಡ ತವರಿನ ಲಾಭ ಪಡೆದು ಸನ್ ರೈಸರ್ಸ್ ಹೈದರಾಬಾದ್ ತಂಡದ ವಿರುದ್ಧ ಸಂಪೂರ್ಣ ಪ್ರಾಬಲ್ಯಯುತ ಜಯ ಸಾಧಿಸಿದೆ. ಕಳೆದ ಪಂದ್ಯದಲ್ಲಿ ಸಿಡಿಲಬ್ಬರದ ಬ್ಯಾಟಿಂಗ್ ಮಾಡಿ 246 ರನ್‌ಗಳ ಗುರಿಯನ್ನ ಬೆನ್ನಟ್ಟಿ ಗೆದ್ದಿದ್ದ ಸನ್ ರೈಸರ್ಸ್ ಹೈದರಾಬಾದ್ ಇಂದು ಮುಂಬೈ ಬೌಲಿಂಗ್ ದಾಳಿಗೆ ತತ್ತರಿಸಿತು. ಆರಂಭದಿಂದ ಅಂತ್ಯದವರೆಗೂ ರನ್‌ಗಳಿಸಲು ಪರದಾಡಿದ್ದ ಹೈದರಾಬಾದ್ ತಂಡ 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 162 ರನ್‌ಗಳಿಸಿತ್ತು. ಬ್ಯಾಟಿಂಗ್ ಸ್ನೇಹಿ ವಿಕೆಟ್‌ನಲ್ಲಿ 163ರನ್‌ಗಳ ಸಾಧಾರಣ ಗುರಿಯನ್ನ ಬೆನ್ನಟ್ಟಿ ಮುಂಬೈ ಇಂಡಿಯನ್ಸ್ 18.1 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು ಗುರಿ ತಲುಪಿತು. 163 ರನ್‌ಗಳ ಸುಲಭ ಚೇಸಿಂಗ್ ಆರಂಭಿಸಿದ ಮುಂಬೈ ಇಂಡಿಯನ್ಸ್ ಸ್ಫೋಟಕ ಆರಂಭ ಪಡೆಯಿತಾದರೂ ದೊಡ್ಡದಾಗಿ ಪರಿವರ್ತಿಸಿಕೊಳ್ಳುವಲ್ಲಿ ಎಡವಿತು.



ಸತತ 2ನೇ ಜಯ ಸಾಧಿಸಿದ ಮುಂಬೈ

16 ಎಸೆತಗಳಲ್ಲಿ 3 ಸಿಕ್ಸರ್‌ಗಳ ಸಹಿತ 26 ರನ್‌ಗಳಿಸಿದ್ದ ರೋಹಿತ್ ಶರ್ಮಾ 4ನೇ ಓವರ್‌ನಲ್ಲೆ ವಿಕೆಟ್ ಕಳೆದುಕೊಂಡರು. ಇದು ಅವರ ಸತತ 6ನೇ ವೈಫಲ್ಯವಾಗಿದೆ. 6 ಪಂದ್ಯಗಳಲ್ಲಿ ಮುಂಬೈ ಇಂಡಿಯನ್ಸ್ ಒಂದು ಪಂದ್ಯದಲ್ಲೂ ಕೂಡ 50ರ ಜೊತೆಯಾಟ ಪಡೆಯಲಿಲ್ಲ. ಆದರೆ ರೋಹಿತ್ ವೈಫಲ್ಯ ಇಂದು ತಂಡಕ್ಕೆ ದೊಡ್ಡ ಹೊಡೆತ ನೀಡಲಿಲ್ಲ 2ನೇ ವಿಕೆಟ್‌ಗೆ ಒಂದಾದ ರಯಾನ್ ರಿಕಲ್ಟನ್ ಹಾಗೂ ವಿಲ್ ಜಾಕ್ಸ್ 37 ರನ್ ಸೇರಿಸಿದರು. ರಿಕಲ್ಟನ್ 23 ಎಸೆತಗಳಲ್ಲಿ 5 ಬೌಂಡರಿ ಸಹಿತ 31 ರನ್‌ಗಳಿಸಿ ಹರ್ಷಲ್ ಪಟೇಲ್‌ಗೆ ವಿಕೆಟ್ ಒಪ್ಪಿಸಿದರು. ಅನ್ಸಾರಿ ಓವರ್‌ನಲ್ಲಿ ಔಟ್ ಆಗಿದ್ದ ಅವರು, ಕ್ಲಾಸೆನ್ ಸ್ಟಂಪ್ ಮುಂದೆ ಕೈಹಾಕಿದ್ದರಿಂದ ನೋಬಾಲ್ ಆಗಿ ಜೀವದಾನ ಪಡೆದಿದ್ದರು. ಆದರೆ ಆ ಜೀವದಾನವನ್ನ ದೊಡ್ಡದಾಗಿ ಬಳಸಿಕೊಳ್ಳುವಲ್ಲಿ ವಿಫಲರಾದರು.

# ಇಡೀ ಪಂದ್ಯದ ಚಿತ್ರಣ ಬದಲಿಸಿದ ಆ ಒಂದು ಕ್ಯಾಚ್

ಕ್ರಿಕೆಟ್ ಅಂಗಳದಲ್ಲಿ ಕ್ಯಾಚಸ್ ವಿನ್ ಮ್ಯಾಚಸ್ ಎಂಬ ಮಾತಿದೆ. ಹೀಗೆ ಕ್ಯಾಚ್‌ನಿಂದಲೇ ಗೆದ್ದ ಹಲವು ಪಂದ್ಯಗಳಿವೆ. ಹಾಗೆಯೇ ಕ್ಯಾಚ್ ಚೆಲ್ಲಿ ಸೋತ ಹಲವು ನಿದರ್ಶನಗಳಿವೆ.

ಇದೀಗ ಕ್ಯಾಚ್ ಕೈ ಬಿಟ್ಟು ಸೋತ ತಂಡಗಳ ಪಟ್ಟಿಗೆ ಹೊಸ ಸೇರ್ಪಡೆ ರಾಜಸ್ಥಾನ್ ರಾಯಲ್ಸ್. ಏಕೆಂದರೆ ಡೆಲ್ಲಿ ಕ್ಯಾಪಿಟಲ್ಸ್ ಇನಿಂಗ್ಸ್‌ನ ಕೊನೆಯ ಎಸೆತದಲ್ಲಿ ಮಹೀಶ್ ತೀಕ್ಷಣ ಕೈ ಬಿಟ್ಟ ಕ್ಯಾಚ್‌ನಿಂದಾಗಿ ಐಪಿಎಲ್‌ನ 32ನೇ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡ ಸೋಲನುಭವಿಸಿತು ಎಂದರೆ ತಪ್ಪಾಗಲಾರದು.

ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ತಂಡವು 19.5 ಓವರ್‌ಗಳಲ್ಲಿ 187 ರನ್ ಕಲೆಹಾಕಿತು. ಇನ್ನು ಸಂದೀಪ್ ಶರ್ಮಾ ಎಸೆದ 20ನೇ ಓವರ್‌ನ ಕೊನೆಯ ಎಸೆತದಲ್ಲಿ ಟ್ರಿಸ್ಟನ್ ಸ್ಟಬ್ಸ್ ಕ್ಯಾಚ್ ನೀಡಿದ್ದರು. ಅತ್ಯಂತ ಸುಲಭವಾಗಿ ಹಿಡಿಯಬಹುದಾಗಿದ್ದ ಕ್ಯಾಚ್ ಅನ್ನು ಮಹೀಶ್ ತೀಕ್ಷಣ ಕೈ ಚೆಲ್ಲಿದ್ದರು. ಪರಿಣಾಮ ಕೊನೆಯ ಎಸೆತದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ಒಂದು ರನ್ ಲಭಿಸಿತು.



ಕ್ಯಾಚ್ ಚೆಲ್ಲಿ ನೀಡಿದ ಒಂದು ರನ್

ಒಂದು ವೇಳೆ ಮಹೀಶ್ ತೀಕ್ಷಣ ಈ ಕ್ಯಾಚ್ ಹಿಡಿದಿದ್ದರೆ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಸ್ಕೋರ್ 187 ರನ್‌ಗಳಿಗೆ ಅಂತ್ಯವಾಗುತ್ತಿತ್ತು. ಅತ್ತ ರಾಜಸ್ಥಾನ್ ರಾಯಲ್ಸ್ ತಂಡ 188 ರನ್ ಕಲೆಹಾಕಿ ಪಂದ್ಯವನ್ನು ಗೆಲ್ಲಬಹುದಿತ್ತು. ಆದರೆ ಕ್ಯಾಚ್ ಚೆಲ್ಲಿ ನೀಡಿದ ಒಂದು ರನ್‌ನಿಂದಾಗಿ ಡೆಲ್ಲಿ ಕ್ಯಾಪಿಟಲ್ಸ್ ತಂಡವು 20 ಓವರ್‌ಗಳಲ್ಲಿ 188 ರನ್ ಕಲೆಹಾಕಿದೆ. ಈ ಗುರಿಯನ್ನು ಬೆನ್ನತ್ತಿದ ರಾಜಸ್ಥಾನ್ ರಾಯಲ್ಸ್ ತಂಡವು 20 ಓವರ್‌ಗಳಲ್ಲಿ 188 ರನ್‌ಗಳಿಸಿ ಪಂದ್ಯವನ್ನು ಟೈ ಮಾಡಿಕೊಳ್ಳಲಷ್ಟೇ ಶಕ್ತರಾದರು. ಆ ಬಳಿಕ ನಡೆದ ಸೂಪರ್ ಓವರ್‌ನಲ್ಲಿ ರಾಜಸ್ಥಾನ್ ರಾಯಲ್ಸ್ ತಂಡ 11 ರನ್‌ಗಳಿಸಿ ಡೆಲ್ಲಿ ಪಡೆಗೆ 12 ರನ್‌ಗಳ ಗುರಿ ನೀಡಿತು. ಈ ಗುರಿಯನ್ನು 4 ಎಸೆತಗಳಲ್ಲಿ ಬೆನ್ನಟ್ಟುವ ಮೂಲಕ ಡೆಲ್ಲಿ ಕ್ಯಾಪಿಟಲ್ಸ್ ತಂಡ ಜಯ ಸಾಧಿಸಿದೆ.

# ಕೇವಲ 5 ಲಕ್ಷ ರೂ.ಗೆ ಟಿ20 ಲೀಗ್ ಆಡಲು ಒಪ್ಪಂದ

ಸ್ಮೃತಿ ಮಂಧಾನ ಅವರು ಮಹಾರಾಷ್ಟ್ರ ಪ್ರೀಮಿಯರ್ ಲೀಗ್ (ಎಂಪಿಎಲ್) ನ ರತ್ನಗಿರಿ ಜೆಟ್ಸ್ ತಂಡದೊಂದಿಗೆ 5 ಲಕ್ಷ ರೂಪಾಯಿಗಳ ಒಪ್ಪಂದ ಮಾಡಿಕೊಂಡಿದ್ದಾರೆ. ಇದು ಅವರ ವಾರ್ಷಿಕ ಆದಾಯಕ್ಕೆ ಹೋಲಿಸಿದರೆ ತುಂಬಾ ಕಡಿಮೆ. ಎಂಪಿಎಲ್ ನಿಯಮಗಳ ಪ್ರಕಾರ, ಐಕಾನ್ ಆಟಗಾರ್ತಿಯಾಗಿ ಇದು ಅವರಿಗೆ ಸಿಗುವ ಸಂಭಾವನೆ. ಈ ಟೂರ್ನಮೆಂಟ್ ಮೇ ಅಂತ್ಯದಲ್ಲಿ ಆರಂಭವಾಗಲಿದೆ. ಭಾರತ ಮಹಿಳಾ ತಂಡದ ಸ್ಟಾರ್ ಬ್ಯಾಟರ್ ಹಾಗೂ ಉಪನಾಯಕಿ ಸ್ಮೃತಿ ಮಂಧಾನ ಪ್ರಸ್ತುತ ವಿಶ್ರಾಂತಿ ಮೂಡ್‌ನಲ್ಲಿದ್ದಾರೆ. ಮಹಿಳಾ ಪ್ರೀಮಿಯರ್ ಲೀಗ್ ಆಡಿ ಮುಗಿಸಿದ ಬಳಿಕ ರಜೆಯಲ್ಲಿರುವ ಮಂಧಾನ ಮತ್ತೆ ಟೀಂ ಇಂಡಿಯಾದೊಂದಿಗೆ ಅಂತರರಾಷ್ಟ್ರೀಯ ಕ್ರಿಕೆಟ್‌ಗೆ ಮರಳಲಿದ್ದು ವಿಶ್ವಕಪ್‌ಗೆ ತಯಾರಿ ನಡೆಸಲಿದ್ದಾರೆ.

ಇವೆಲ್ಲದರ ನಡುವೆ ಸ್ಮೃತಿ ಮಂಧಾನ ಕೆಲವೇ ಐದು ಲಕ್ಷ ರೂಗಳಿಗೆ ಟೂರ್ನಮೆಂಟ್ ಆಡುವುದಕ್ಕೆ ಒಪ್ಪಂದ ಮಾಡಿಕೊಂಡಿದ್ದಾರೆ. ಹೌದು.. ಮಹಾರಾಷ್ಟ್ರ ಪ್ರೀಮಿಯರ್ ಲೀಗ್‌ನಲ್ಲಿ ಇದೇ ಮೊದಲ ಬಾರಿಗೆ ಸ್ಮೃತಿ ಮಂಧಾನ ರತ್ನಗಿರಿ ಜೆಟ್ಸ್ ತಂಡದ ಜೊತೆ ಒಪ್ಪಂದ ಮಾಡಿಕೊಂಡಿದ್ದು, ಕಣಕ್ಕಿಳಿಯಲು ಸಜ್ಜಾಗಿದ್ದಾರೆ.

ಮಹಿಳಾ ಮಹಾರಾಷ್ಟ್ರ ಪ್ರೀಮಿಯರ್ ಲೀಗ್‌ನ ಎರಡನೇ ಸೀಸನ್ ಮೇ ಅಂತ್ಯದಲ್ಲಿ ಪ್ರಾರಂಭವಾಗಲಿದೆ.



2024 ರಿಂದ ಪ್ರಾರಂಭವಾಗಿರುವ ಈ ಮಹಿಳಾ ಪಂದ್ಯಾವಳಿ ಎರಡನೇ ಸೀಸನ್‌ನಲ್ಲಿ, ರತ್ನಗಿರಿ ಜೆಟ್ಸ್ ಕೂಡ ತನ್ನ ತಂಡವನ್ನು ಕಣಕ್ಕಿಳಿಸಲು ನಿರ್ಧರಿಸಿದೆ. ಮೊದಲ ಬಾರಿಗೆ, ರತ್ನಗಿರಿಯ ತಂಡವು ಮಹಿಳಾ ಪಂದ್ಯಾವಳಿಯಲ್ಲಿ ಭಾಗವಹಿಸುತ್ತಿದ್ದು, ಈ ಫ್ರಾಂಚೈಸಿ ದೊಡ್ಡ ಒಪ್ಪಂದ ಮಾಡಿಕೊಂಡಿದೆ. ಈ ಲೀಗ್‌ನ ಹರಾಜಿಗೂ ಮೊದಲು ರತ್ನಗಿರಿ ಫ್ರಾಂಚೈಸಿ, ಸ್ಮೃತಿ ಮಂಧಾನ ಅವರನ್ನು ತಂಡಕ್ಕೆ ಸೇರಿಸಿಕೊಂಡಿರುವುದಾಗಿ ತಿಳಿಸಿದೆ. ಮಂಧಾನ ಅವರನ್ನು ಐಕಾನ್ ಆಟಗಾರ್ತಿಯಾಗಿ ತಂಡಕ್ಕೆ ಸೇರಿಸಿಕೊಂಡಿದೆ. ಅಂದರೆ ಸ್ಮೃತಿ ಯಾವುದೇ ಹರಾಜಿಗೆ ಬರದೆ ನೇರವಾಗಿ ಒಪ್ಪಂದ ಮಾಡಿಕೊಂಡಿದೆ. ಈಗ ಪ್ರಶ್ನೆ ಏನೆಂದರೆ, ಐಕಾನ್ ಆಟಗಾರ್ತಿಯಾಗಿ ಸ್ಮೃತಿಗೆ ಎಷ್ಟು ಹಣ ಸಿಗುತ್ತದೆ ಎಂಬುದು.

ಐಕಾನ್ ಆಟಗಾರನಿಗೆ 5 ಲಕ್ಷ ರೂ. ಸಂಬಳ ಸಿಗುತ್ತದೆ. ಇದಲ್ಲದೆ, ಹರಾಜಿನಲ್ಲಿ ಖರೀದಿಸಿದ ಯಾವುದೇ ಆಟಗಾರ್ತಿಯರ ಬೆಲೆ ಐಕಾನ್ ಆಟಗಾರ್ತಿಗಿಂತ ಹೆಚ್ಚಾದರೆ, ಫ್ರಾಂಚೈಸಿ ಆ ಆಟಗಾರ್ತಿಯ ಬಿಡ್‌ನ 10 ಪ್ರತಿಶತಕ್ಕೆ ಸಮನಾದ ಮೊತ್ತವನ್ನು ಐಕಾನ್ ಆಟಗಾರ್ತಿಗೆ ಪ್ರತ್ಯೇಕವಾಗಿ ಪಾವತಿಸುತ್ತದೆ. ಸ್ಮೃತಿ ಮಂಧಾನ ಅವರ ವಾರ್ಷಿಕ ಆದಾಯಕ್ಕೆ ಹೋಲಿಸಿದರೆ ಈ ಸಂಬಳ ತುಂಬಾ ಸಾಧಾರಣವಾಗಿದೆ. ಮಹಿಳಾ ಪ್ರೀಮಿಯರ್ ಲೀಗ್‌ನಲ್ಲಿ ಮಂಧಾನಗೆ 3.4 ಕೋಟಿ ರೂ. ವೇತನ ನೀಡಲಾಗುತ್ತಿದೆ. ಇಷ್ಟೇ ಅಲ್ಲ, ಸ್ಮೃತಿ ವಾರ್ಷಿಕ ಒಪ್ಪಂದದಡಿಯಲ್ಲಿ 50 ಲಕ್ಷ ರೂ.ಗಳನ್ನು ಪಡೆಯುತ್ತಾರೆ. ಹಾಗೆಯೇ ಟಿ20 ಪಂದ್ಯಕ್ಕೆ 3 ಲಕ್ಷ ರೂ., ಏಕದಿನ ಪಂದ್ಯಕ್ಕೆ 6 ಲಕ್ಷ ರೂ. ಮತ್ತು ಟೆಸ್ಟ್ ಪಂದ್ಯಕ್ಕೆ 15 ಲಕ್ಷ ರೂ. ವೇತನ ಪಡೆಯುತ್ತಾರೆ. ಇಂತಹ ಪರಿಸ್ಥಿತಿಯಲ್ಲಿ, ವರ್ಷಕ್ಕೆ ಕೋಟ್ಯಂತರ ರೂಪಾಯಿ ಸಂಪಾದಿಸುವ ಮಂಧಾನ, ಕೇವಲ 5 ಲಕ್ಷ ರೂಪಾಯಿ ಸಂಬಳಕ್ಕೆ 2 ವಾರಗಳ ಟೂರ್ನಿಯನ್ನು ಆಡಲಿದ್ದಾರೆ.







Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966